24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 34 | ನವದೆಹಲಿ | ಬೆಲೆ ₹10 | ಜುಲೈ 30 2026, ಗುರುವಾರ

## ಓಂ ಶಾಂತಿಃ

## ನೀವು ನಮ್ಮ ಪಾಲಿಗೆ ನೆನಪಷ್ಟೇ ಅಲ್ಲ,
## ನಿತ್ಯಸ್ಮರಣೆಯ ಅಮ್ಮ ಅನ್ನಪೂರ್ಣೆ

ನ ಜಾಯತೇ ಮ್ರಿಯತೇ ವಾ ಕದಾಚಿನ್
ನಾಯಂ ಭೂತ್ವಾ ಭವಿತಾ ವಾ ನ ಭೂಯಃ ।
ಅಜೋ ನಿತ್ಯಃ ಶಾಶ್ವತೋಽಯಂ ಪುರಾಣೋ
ನ ಹನ್ಯತೇ ಹನ್ಯಮಾನೇ ಶರೀರೇ ॥
**–ಭಗವದ್ಗೀತೆ**



**ಶ್ಲೋಕದ ಅರ್ಥ:**
ಆತ್ಮಕ್ಕೆ ಹುಟ್ಟು, ಸಾವು ಇರುವುದಿಲ್ಲ. ಇದು ಹುಟ್ಟಿಲ್ಲದ, ಶಾಶ್ವತ, ಸನಾತನ ಮತ್ತು ಎಂದೆಂದಿಗೂ ಅಳಿಯದ ಅಮರತ್ವವಾಗಿದೆ. ದೇಹವು ನಾಶವಾದರೂ ಆತ್ಮವು ಎಂದಿಗೂ ನಾಶವಾಗುವುದಿಲ್ಲ.

# ಶ್ರೀಮತಿ ಚನ್ನಮ್ಮ ದೇವೇಗೌಡರು

1937-2026

## ಉತ್ತರ ಕ್ರಿಯಾದಿ ಕಾರ್ಯಕ್ರಮ

Location QR Code

| | | |
|---|---|---|
| 30-07-2026<br>ಗುರುವಾರ | ಸಮಯ<br>ಬೆಳಗ್ಗೆ 11:00 ಗಂಟೆಗೆ | ಸ್ಥಳ: ಶ್ರೀಮತಿ ಚನ್ನಮ್ಮ ಅವರ ಪವಿತ್ರ ಸಮಾಧಿ,<br>ಮಾವಿನಕೆರೆ ಶ್ರೀ ರಂಗನಾಥಸ್ವಾಮಿ ಬೆಟ್ಟದ ತಪ್ಪಲು,<br>ಹೊಳೆನರಸೀಪುರ ತಾಲೂಕು, ಹಾಸನ ಜಿಲ್ಲೆ |

ಶೋಕತಪ್ತರು: ಶ್ರೀ ಹೆಚ್.ಡಿ.ದೇವೇಗೌಡರು ಮತ್ತು ಕುಟುಂಬವರ್ಗ, ಅಭಿಮಾನಿಗಳು

ಸರ್ವರಿಗೂ ಇದು ನಮ್ಮ ವೈಯಕ್ತಿಕ ಆಹ್ವಾನ. ದಯಮಾಡಿ ಎಲ್ಲರೂ
ಆಗಮಿಸಿ ಅಗಲಿದ ಆತ್ಮಕ್ಕೆ ಶಾಂತಿ ಕೋರಬೇಕಾಗಿ ವಿನಂತಿಸುತ್ತೇವೆ.

## ನಿತ್ಯ ಪಂಚಾಂಗ 30.07.2026 ಗುರುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ನಿಜ ಜ್ಯೇಷ್ಠ - ಆಷಾಢ ಮಾಸ

ಆಷಾಢ ಬಹುಳ, ಪಾಡ್ಯ, ಶ್ರವಣ, ಬಾಲಗಂಗಾಧರ ತಿಲಕ್/ಬೀದರ ಪಾಂಡುರಂಗ ಪುಣ್ಯದಿನ, ವೀರಶಾಸನ ಜಯಂತಿ, ನೆಲವಿಗ ಪ್ರಾಣದೇವರ ಪಲ್ಲಕ್ಕಿ ಉತ್ಸವ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 12.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ವಿಳಂಬವಾಗದಂತೆ ಸಂಪುಟ ವಿಸ್ತರಣೆಯಾಗಬೇಕಿದೆ: ಡಿಸಿಎಂ



**ಬೆಂಗಳೂರು, ಜು.29:** ಹೈಕಮಾಂಡ್ ಸಂಭವನೀಯ ಸಚಿವರ ಪಟ್ಟಿಗೆ ಅನುಮತಿ ನೀಡಿದ್ದೇ ಆದರೆ ವಿಳಂಬವಾಗದಂತೆ ಸಂಪುಟ ವಿಸ್ತರಣೆಯಾಗಬೇಕಿದೆ. ಇಲ್ಲವಾದರೆ ಬೇರೆ ರೀತಿಯ ಬೆಳವಣಿಗೆಗಳಾಗುವ ಆತಂಕ ಇದೆ ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೆಚ್ಚುವರಿ ಉಪ ಮುಖ್ಯಮಂತ್ರಿಗಳ ಹುದ್ದೆಗಳ ಬಗ್ಗೆ ತಮಗೆ ಮಾಹಿತಿ ಇಲ್ಲ. ಹೈಕಮಾಂಡ್ ತೆಗೆದುಕೊಳ್ಳುವ ನಿರ್ಧಾರಕ್ಕೆ ತಾವು ಬದ್ಧರಿರುವುದಾಗಿ ತಿಳಿಸಿದರು.

ರಾಜ್ಯ ಸಚಿವ ಸಂಪುಟ ವಿಸ್ತರಣೆ ಬಗ್ಗೆ ದೆಹಲಿಯಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರಧಾನ ಕಾರ್ಯದರ್ಶಿಗಳಾದ ರಣದೀಪ್ ಸಿಂಗ್ ಸುರ್ಜೇವಾಲ, ಕೆ.ಸಿ.ವೇಣುಗೋಪಾಲ್, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಸಭೆ ನಡೆಸಿ ತುರ್ತು ತೀರ್ಮಾನ ತೆಗೆದುಕೊಳ್ಳಲಿದ್ದಾರೆ. ಸಂಭವನೀಯ ಸಚಿವರ ಪಟ್ಟಿಗೆ ವರಿಷ್ಠರು ಅನುಮತಿ ನೀಡಿದರೆ, ಗುರುವಾರದೊಳಗೆ ಸಚಿವ ಸಂಪುಟ ವಿಸ್ತರಣೆಯಾಗಲಿದೆ ಎಂದರು.

ಸಮನ್ವಯತೆ ಅಥವಾ ಹೊಂದಾಣಿಕೆಯ ಕೊರತೆಯಿಂದ ವಿಳಂಬವಾಗುತ್ತಿಲ್ಲ, ರಾಹುಲ್ ಗಾಂಧಿ ವಿದೇಶ ಪ್ರದೇಶದಲ್ಲಿದ್ದರು. ವಾಪಾಸ್ ಬಂದಿದ್ದಾರೆ. ಅದರಿಂದ ತಡವಾಗಿದೆ ಎಂದರು. ಕಾವೇರಿ ನದಿ ನೀರಿನ ವಿಚಾರವಾಗಿ ಸರ್ವಪಕ್ಷ ಸಭೆ ಕರೆಯುವುದಾಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಪ್ರತಿ ಬಾರಿಯೂ ಇದೇ ಸಮಸ್ಯೆ ಕಾಡುತ್ತಿದೆ. ನೀರು ಲಭ್ಯವಿದ್ದಾಗ ಅವರು ಕೇಳದೇ ಇದ್ದರೂ ನಾವು ನೀರು ಹರಿಸುತ್ತೇವೆ. ಈಗ ನಮಗೇ ಕುಡಿಯಲು ನೀರಿಲ್ಲ ಎನ್ನುವಾಗ, ತಮಿಳುನಾಡಿಗೆ 3.5 ಕ್ಯೂಸೆಕ್ ಹರಿಸಬೇಕು ಎಂದು ಸಿಡಬ್ಲ್ಯೂಆರ್‌ಸಿ ಆದೇಶ ನೀಡಿರುವುದು ಎಷ್ಟು ಸರಿ ಎಂದು ಪರಮೇಶ್ವರ್ ಪ್ರಶ್ನಿಸಿದರು.

# ಕೆಪಿಎಸ್‌ಸಿ ಹಗರಣದ ಸಮಗ್ರ ತನಿಖೆ ನಡೆಸಿ ಮಾಜಿ ಸಚಿವ ಸುನೀಲ್ ಕುಮಾರ್ ಆಗ್ರಹ



**ಉಡುಪಿ, ಜು.29:** ಕರ್ನಾಟಕ ಲೋಕಸೇವಾ ಆಯೋಗದಲ್ಲಿ (ಕೆಪಿಎಸ್‌ಸಿ) ಒಂದರ ಹಿಂದೆ ಒಂದರಂತೆ ಹಗರಣಗಳು ಬೆಳಕಿಗೆ ಬರುತ್ತಿರುವುದು ಉದ್ಯೋಗಾಕಾಂಕ್ಷಿ ಯುವಕರಲ್ಲಿ ಆತಂಕ ಮೂಡಿಸಿದ್ದು, ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ಪಾರದರ್ಶಕ ತನಿಖೆ ನಡೆಸಬೇಕು ಎಂದು ಮಾಜಿ ಸಚಿವ ವಿ. ಸುನೀಲ್ ಕುಮಾರ್ ಒತ್ತಾಯಿಸಿದ್ದಾರೆ.

ಉಡುಪಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಪಿಎಸ್ಸಿ ಅಧ್ಯಕ್ಷರೇ ನೇಮಕಾತಿ ಅಕ್ರಮದಲ್ಲಿ ಭಾಗಿಯಾಗಿರುವ ಆರೋಪಗಳು ಕೇಳಿಬಂದಿದ್ದು, ನೇಮಕಾತಿಗೆ ಕೋಟ್ಯಂತರ ರೂಪಾಯಿ ಹಣ ಪಡೆದಿರುವ ಕುರಿತು ಧ್ವನಿಮುದ್ರಿಕೆಗಳು ಬಹಿರಂಗವಾಗಿವೆ ಎಂದು ಆರೋಪಿಸಿದರು.

ಈ ವಿಷಯವನ್ನು ವಿಧಾನಸಭೆಯಲ್ಲೂ ಪ್ರಸ್ತಾಪಿಸಿದ್ದರೂ, ಸರ್ಕಾರ ನಿಯಮಾವಳಿ ಸುಧಾರಣೆ ಅಥವಾ ವ್ಯವಸ್ಥೆ ಶುದ್ಧೀಕರಣಕ್ಕೆ ಯಾವುದೇ ಕ್ರಮ ಕೈಗೊಂಡಿಲ್ಲ. ಸಾವಿರಾರು ನೇಮಕಾತಿ ನಡೆಯಲಿರುವ ಸಂದರ್ಭದಲ್ಲಿ ಇಂತಹ ಬೆಳವಣಿಗೆಗಳು ಅಭ್ಯರ್ಥಿಗಳಲ್ಲಿ ಅನುಮಾನ ಹಾಗೂ ಆತಂಕ ಹೆಚ್ಚಿಸಿವೆ. ಸರ್ಕಾರದ ಮೌನವು ಅನುಮಾನಕ್ಕೆ ಎಡೆಮಾಡಿಕೊಟ್ಟಿದ್ದು, ಮುಖ್ಯಮಂತ್ರಿ ಯುವಕರಲ್ಲಿ ವಿಶ್ವಾಸ ಮೂಡಿಸುವಂತೆ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

**ಹಿಂದು ಸಂಘಟನೆಗಳಷ್ಟೇ ಗುರಿ**

ಮಾಜಿ ಸಚಿವ ಸಿ.ಟಿ. ರವಿಗೆ ನೋಟಿಸ್ ನೀಡಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ರಾಜ್ಯದಲ್ಲಿ ದರೋಡೆ, ಕೊಲೆ, ಪೊಲೀಸರ ಮೇಲಿನ ಹಲ್ಲೆಗಳಂತಹ ಗಂಭೀರ ಪ್ರಕರಣಗಳತ್ತ ಗಮನ ಹರಿಸಬೇಕಾದ ಗೃಹ ಇಲಾಖೆ, ಫೇಸ್‌ಬುಕ್ ಹೇಳಿಕೆ ಮತ್ತು ಭಾಷಣಗಳನ್ನು ಪರಿಶೀಲಿಸುವುದನ್ನೇ ಆದ್ಯತೆಯನ್ನಾಗಿ ಮಾಡಿಕೊಂಡಿದೆ. ಕಾಂಗ್ರೆಸ್ ಕಾರ್ಯಕರ್ತರ ಸಾಮಾಜಿಕ ಜಾಲತಾಣದ ಅವಹೇಳನಕಾರಿ ಪೋಸ್ಟ್‌ಗಳ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲಾಗುತ್ತಿಲ್ಲ. ಬಿಜೆಪಿ ಹಾಗೂ ಹಿಂದೂ ಸಂಘಟನೆಗಳನ್ನು ಮಾತ್ರ ಗುರಿಯಾಗಿಸಲಾಗುತ್ತಿದೆ ಎಂದು ಆರೋಪಿಸಿದರು.

**ಇ-20: ನೈಜ ಬೇಡಿಕೆಗಳ ಬಗ್ಗೆ ಶಾಂತಿಯುತ ಚರ್ಚೆಗೆ ಸರ್ಕಾರ ಸಿದ್ಧ**

ಇ-20 ಪೆಟ್ರೋಲ್ ವಿರುದ್ಧದ ಹೋರಾಟದ ಕುರಿತು ಪ್ರತಿಕ್ರಿಯಿಸಿದ ಅವರು, ನೈಜ ಬೇಡಿಕೆಗಳ ಕುರಿತು ಶಾಂತಿಯುತವಾಗಿ ಚರ್ಚಿಸಲು ಸರ್ಕಾರ ಸಿದ್ಧವಿದೆ. ಆದರೆ ಚಳವಳಿಯ ಹೆಸರಿನಲ್ಲಿ ಅರಾಜಕತೆ, ಸೈನಿಕರ ಮೇಲೆ ಕಲ್ಲುತೂರಾಟ ಅಥವಾ ಪೊಲೀಸರ ಮೇಲಿನ ಹಲ್ಲೆಯನ್ನು ಯಾವುದೇ ಕಾರಣಕ್ಕೂ ಸಮರ್ಥಿಸಲು ಸಾಧ್ಯವಿಲ್ಲ. ಇಂತಹ ಪ್ರಕರಣಗಳಲ್ಲಿ ಕೇಂದ್ರ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ವಿ. ಸುನೀಲ್ ಕುಮಾರ್ ಹೇಳಿದರು.

# ಚಿಲ್ಲರೆ ನೆಪದಲ್ಲಿ ಪ್ರಯಾಣಿಕರ ಶೋಷಣೆ ಸಲ್ಲದು: ಬೈರತಿ ಎಚ್ಚರಿಕೆ

**ಬೆಂಗಳೂರು, ಜು.29:** ಚಿಲ್ಲರೆ ವಿಚಾರದಲ್ಲಿ ಪ್ರಯಾಣಿಕರನ್ನು ಶೋಷಣೆ ಮಾಡಬಾರದು ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ಬಿಎಂಟಿಸಿ ಸೇರಿದಂತೆ ಎಲ್ಲಾ ಸಾರಿಗೆ ನಿಗಮಗಳ ನಿರ್ವಾಹಕರು ಮತ್ತು ಚಾಲಕರಿಗೆ ಕಟ್ಟುನಿಟ್ಟಿನ ಆದೇಶ ನೀಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ಚಿಲ್ಲರೆ ಇಲ್ಲ ಎಂಬ ಕಾರಣಕ್ಕೆ ಪ್ರಯಾಣಿಕರನ್ನು ಕೆಳಗಿಳಿಸುವ ನಿರ್ವಾಹಕರ ಧೋರಣೆ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬರುತ್ತಿವೆ. ಅಲ್ಲದೇ, ಬಿಎಂಟಿಸಿ ಬಸ್ನಲ್ಲಿ ಪ್ರಯಾಣಿಸುವ ಸಂದರ್ಭದಲ್ಲಿ ನನಗೂ ಇಂತಹ ಅನುಭವ ಆಗಿದೆ. ಚಿಲ್ಲರೆ ನೆಪವೊಡ್ಡಿ ಪ್ರಯಾಣಿಕರನ್ನು ಅರ್ಧ ದಾರಿಯಲ್ಲಿ ಇಳಿಸುವುದು ಅಮಾನವೀಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಪ್ರಯಾಣಿಕರನ್ನು ಶೋಷಣೆ ಮಾಡಬಾರದು ಎಂದು ಸೂಚಿಸಿದ್ದಾರೆ.

**ಕರ್ತವ್ಯದಲ್ಲಿ ಸಹನೆ ಇರಲಿ**

ಶಕ್ತಿ ಯೋಜನೆಯಡಿ ಪ್ರಯಾಣಿಸುವ ಮಹಿಳೆಯರು ಮತ್ತು ಇತರ ಪ್ರಯಾಣಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಯಾರ ಮೇಲೆಯೂ ದುರ್ವರ್ತನೆ ತೋರಬಾರದು. ಹಾಗೊಂದು ವೇಳೆ ದೂರುಗಳ ಬಂದರೆ ತಪ್ಪಿತಸ್ಥ ನಿರ್ವಾಹಕರು ಮತ್ತು ಚಾಲಕರ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಸಚಿವರು ಎಚ್ಚರಿಕೆ ನೀಡಿದ್ದಾರೆ.

**ಅಮಾನತು ವಾಪಸಿಗೆ ಸೂಚನೆ**

ಸಾರಿಗೆ ಸಚಿವರು ದಿಢೀರನೆ ಬಿಎಂಟಿಸಿ ಬಸ್‌ಗಳಲ್ಲಿ ಪ್ರಯಾಣಿಸಿದ್ದರು, ಅಂದು ಕೆಂಪೇಗೌಡ ಬಸ್ ನಿಲ್ದಾಣದಿಂದ ನಾಗಶೆಟ್ಟಿಹಳ್ಳಿಗೆ ಸಂಚರಿಸುತ್ತಿದ್ದ ಬಸ್‌ನಲ್ಲಿ ಪ್ರಯಾಣಿಸುವಾಗ ನಿರ್ವಾಹಕ ಟಿ.ಜಿ. ರಾಮಕೃಷ್ಣ ಚಿಲ್ಲರೆ ಇಲ್ಲ ಎಂಬ ಕಾರಣಕ್ಕೆ ಸಚಿವರನ್ನು ಬಸ್ಸಿನಿಂದ ಕೆಳಗೆ ಇಳಿಸಿದ್ದರು. ಈ ಹಿನ್ನೆಲೆಯಲ್ಲಿ ಬಿಎಂಟಿಸಿ ಸಂಸ್ಥೆಯು ರಾಮಕೃಷ್ಣ ಅವರನ್ನು ಅಮಾನತುಗೊಳಿಸಿತ್ತು.

ಈ ಬಗ್ಗೆ ರಾಮಕೃಷ್ಣ ಕ್ಷಮೆ ಕೋರಿದ ಹಿನ್ನೆಲೆಯಲ್ಲಿ ಅಮಾನತು ಆದೇಶ ಹಿಂತೆಗೆದುಕೊಳ್ಳುವಂತೆ ಸಚಿವರು ಸೂಚನೆ ನೀಡಿದ್ದಾರೆ.

## ಕರ್ನಾಟಕದ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಅವರ ಹುಟ್ಟುಹಬ್ಬ: ಗಣ್ಯರಿಂದ ಶುಭಹಾರೈಕೆ



ನವದೆಹಲಿಯ ಕರ್ನಾಟಕ ಭವನದಲ್ಲಿ ರಾಜ್ಯದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಶಾಸಕರು ಮತ್ತು ದೆಹಲಿಯ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಅವರಿಗೆ ಹುಟ್ಟುಹಬ್ಬದ ಶುಭಾಶಯ ಕೋರಿದರು



ಬಿ.ಕೆ.ಹರಿಪ್ರಸಾದ್ ಮತ್ತು ನವದೆಹಲಿಯಲ್ಲಿರುವ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಪರಸ್ಪರ ಹುಟ್ಟುಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ಶಾಸಕಿ ಡಾ. ಆರತಿ ಕೃಷ್ಣ ಜೊತೆಯಲ್ಲಿದ್ದರು.



ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್.ಮುನಿಯಪ್ಪ ಅವರು ಟಿ.ಬಿ.ಜಯಚಂದ್ರ ಅವರಿಗೆ ಹುಟ್ಟುಹಬ್ಬದ ಶುಭಾಶಯ ತಿಳಿಸಿದರು.

## ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರ ಹುಟ್ಟುಹಬ್ಬ: ವಿವಿಧ ಗಣ್ಯರಿಂದ ಶುಭಹಾರೈಕೆ



■ ಸಚಿವ ಕೆ.ಎಚ್.ಮುನಿಯಪ್ಪ ಬಿ.ಕೆ.ಹರಿಪ್ರಸಾದ್ ಅವರ ಹುಟ್ಟುಹಬ್ಬದ ಶುಭಾಶಯ ಕೋರಿದರು.



■ ಬಿ.ಕೆ.ಹರಿಪ್ರಸಾದ್ ಅವರ ಜನ್ಮದಿನದಂದು ಶಾಸಕ ಎನ್.ಎಚ್.ಕೋನರಡ್ಡಿ ಮತ್ತು ಬಿ.ಶಿವಣ್ಣ ಮತ್ತು ಇತರ ನಾಯಕರು ಶುಭ ಹಾರೈಸಿದರು



■ ಶಾಸಕರಾದ ಪುಟ್ಟರಂಗ ಶೆಟ್ಟಿ, ಜಿ.ಎಸ್.ಪಾಟೀಲ್, ಡಾ ಅಜಯ್ ಧರಂ ಸಿಂಗ್, ಯಶವಂತರಾಯಗೌಡ ಪಾಟೀಲ್ ಅವರು ಬಿ.ಕೆ.ಹರಿಪ್ರಸಾದ್ ಅವರ ಜನ್ಮದಿನಕ್ಕೆ ಶುಭಹಾರೈಸಿದರು.




ಜ್ಞಾನ, ಮೌಲ್ಯಗಳು ಮತ್ತು ಸಂಸ್ಕಾರದ ಬೆಳಕು ಹರಡಿ, ಸಮಾಜವನ್ನು ಸನ್ಮಾರ್ಗದಲ್ಲಿ ಮುನ್ನಡೆಸುವ ಗುರುಗಳು ನಮ್ಮ ಜೀವನದ ಶ್ರೇಷ್ಠರು ಪ್ರೇರಣಾಶಕ್ತಿಗಳು. ಗುರುವಿನ ಬೋಧನೆ ಕೇವಲ ಶಿಕ್ಷಣವಲ್ಲ; ಅದು ಉತ್ತಮ ವ್ಯಕ್ತಿತ್ವ, ಸೇವಾ ಮನೋಭಾವ ಮತ್ತು ರಾಷ್ಟ್ರನಿರ್ಮಾಣದ ಸಂಕಲ್ಪವನ್ನು ರೂಪಿಸುವ ಶಕ್ತಿ. ಈ ಪವಿತ್ರ ಗುರುಪೂರ್ಣಿಮೆಯ ಸಂದರ್ಭದಲ್ಲಿ, ನನ್ನ ಜೀವನಕ್ಕೆ ದಾರಿದೀಪವಾದ ಎಲ್ಲ ಗುರುಗಳಿಗೆ ಗೌರವಪೂರ್ವಕ ನಮನಗಳನ್ನು ಸಲ್ಲಿಸುತ್ತೇನೆ. ಅವರ ಆಶೀರ್ವಾದವು ಸದಾ ನಮ್ಮೆಲ್ಲರ ಮೇಲೆ ಇರಲಿ ಎಂದು ಪ್ರಾರ್ಥಿಸುತ್ತೇನೆ. ಎಲ್ಲರಿಗೂ ಗುರುಪೂರ್ಣಿಮೆಯ ಹಾರ್ದಿಕ ಶುಭಾಶಯಗಳು.

ಸಂಸದ ಡಾ.ಸಿ.ಎನ್. ಮಂಜುನಾಥ್

# ಸರ್ಕಾರದ ಧೋರಣೆ, ಸಮರ್ಪಕ ವಾದ ಮಂಡಿಸದಿರುವುದೇ ಕಾರಣ

## ತಮಿಳುನಾಡಿಗೆ ಕಾವೇರಿ ನೀರು ಹರಿಸುವ ಆದೇಶಕ್ಕೆ ವಿಜಯೇಂದ್ರ ಪ್ರತಿಕ್ರಿಯೆ



**ಮೈಸೂರು, ಜು.29:** ಬೆಳೆಗಳಿಗೆ ಕಾವೇರಿ ನೀರು ಹರಿಸಲು ಸಾಧ್ಯ ಇಲ್ಲಾ ಎಂದು ಸಿಎಂ ಹೇಳಿದ್ದಾರೆ. ಮನೆಗೆ ಮಾರಿ ಊರಿಗೆ ಉಪಕಾರಿ ಎಂಬಂತಿದೆ ಸರ್ಕಾರದ ಧೋರಣೆ. ಕಾವೇರಿ ನಿರ್ವಹಣಾ ಸಮಿತಿ ಮುಂದೆ ಸರಿಯಾದ ವಾದ ಮಂಡನೆ ಮಾಡಿಲ್ಲ ಇದರ ಪರಿಣಾಮ ಈ ತೀರ್ಪು ಬಂದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.

ನಗರದಲ್ಲಿ ಮುಕ್ತದಾನಂದ ಸ್ವಾಮೀಜಿಗಳ ಆಶೀರ್ವಾದ ಪಡೆದ ನಂತರ ಮಾಧ್ಯಮದವರೊಂದಿಗೆ ಮಾತನಾಡಿ, ರೈತರ ರಕ್ಷಣೆಗೆ ಮುಖ್ಯಮಂತ್ರಿಗಳು ಮುತುವರ್ಜಿ ವಹಿಸಬೇಕು. ನಮ್ಮ ರೈತರಿಗೆ ವಿಷ ಉಣಿಸುವ ಕೆಲಸ ಮಾಡುತ್ತಿದ್ದಾರೆ. ಈ ಮುಂಚೆಯು ತಮಿಳುನಾಡಿಗೆ ನೀರು ಬಿಟ್ಟಿದ್ದಾರೆ ಎಂದು ಕಿಡಿಕಾರಿದರು. ಸಚಿವ ಸ್ಥಾನಕ್ಕೆ ದರ ನಿಗದಿ ಆಗಿಲ್ಲ. ಹಾಗಾಗಿ ವಿಸ್ತರಣೆ ಮುಂದಕ್ಕೆ ಹೋಗುತ್ತಿದೆ. ಸಚಿವ ಸಂಪುಟ ವಿಸ್ತರಣೆಯಲ್ಲೇ ಸಿಎಂ ತಲ್ಲೀನರಾಗಿದ್ದಾರೆ ಎಂದು ಟೀಕಿಸಿದರು.

ಮೋದಿಯವರು ಆಗಸ್ಟ್ 1ರಂದು ನಗರದಲ್ಲಿ ವಿವೇಕಾನಂದ ಸ್ಮಾರಕ ಉದ್ಘಾಟನೆ ಮಾಡಲಿದ್ದಾರೆ. ಮಧ್ಯಾಹ್ನ 3.30ಕ್ಕೆ ಪ್ರಧಾನಿ ಮೋದಿಯವರು ಆಗಮಿಸಲಿದ್ದಾರೆ. ಮೋದಿಯವರ ಕೈಯಿಂದಲೇ ಸ್ಮಾರಕ ಉದ್ಘಾಟನೆ ಮಾಡಬೇಕೆಂಬುದು ಸ್ವಾಮೀಜಿಗಳ ಆಸೆ ಇತ್ತು. ಅವರ ಆಸೆಯಂತೆ ಸ್ಮಾರಕ ಉದ್ಘಾಟನೆ ಆಗುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ತಿಳಿಸಿದ್ದಾರೆ. ಇದೇ ವೇಳೆ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಶಿಲ್ಪಾ ಸಾಧನೆ ಹೆಮ್ಮೆ ಪಡುವಂತಹದ್ದು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

## ಮಂಡ್ಯದಲ್ಲಿ ನಾಳೆ ಬೃಹತ್ ಹೋರಾಟ



ತಮಿಳುನಾಡಿಗೆ ಕಾವೇರಿ ನೀರು ಹರಿಸುವ ವಿಚಾರವಾಗಿ ಜು.31ಕ್ಕೆ ಮಂಡ್ಯದಲ್ಲಿ ಬೃಹತ್ ಹೋರಾಟ ನಡೆಸುತ್ತೇವೆ.

ಆ ಭಾಗದ ರೈತರು, ರೈತ ಸಂಘಟನೆಗಳು ಹೋರಾಟಕ್ಕೆ ಬೆಂಬಲ ಕೊಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಮನವಿ ಮಾಡಿದರು. ನಗರದ ಬೆಕ್ಕಿನ ಕಲ್ಮಠದಲ್ಲಿ ಗುರು ಪೂರ್ಣಿಮೆಯ ಸಲುವಾಗಿ ಭೇಟಿ ನೀಡಿದ್ದರು. ಈ ವೇಳೆ ಕಾವೇರಿ ನೀರು ನಿರ್ವಹಣಾ ಸಮಿತಿ ತೀರ್ಪು ನೀಡಿದ ವಿಚಾರಕ್ಕೆ ಅವರು ಪ್ರತಿಕ್ರಿಯಿಸಿದರು. ಆ ತೀರ್ಪು ಕಾವೇರಿ ಕೊಳ್ಳದ ರೈತರಿಗೆ ಬರೆ ಎಳೆದಂತೆ ಆಗಿದೆ.

ಬರ ಪರಿಸ್ಥಿತಿ ಇದೆ, ಯಾರು ಕೂಡ ಬೆಳೆ ಬೆಳೆಯಬೇಡಿ ಎಂದು ಸಿಎಂ ಕೆಲವು ದಿನದ ಹಿಂದೆ ಕರೆ ಕೊಟ್ಟಿದ್ದರು. ರಾಜ್ಯದ ರೈತರಿಗೆ ಸಿಎಂ ಧೈರ್ಯ ತುಂಬಬೇಕಿತ್ತು. ಅವರು ಆತ್ಮಸ್ಥೈರ್ಯ ಕುಗ್ಗಿಸುವ ಕೆಲಸ ಮಾಡುತ್ತಾರೆ ಎಂದು ವಾಗ್ದಾಳಿ ನಡೆಸಿದರು.

## ನಿಧನ ವಾರ್ತೆ

### ಮಂಗಳೂರು; ಮಹೇಶ್ ಮೋಟರ್ಸ್ ಮಹೇಶ್ ಶೇಕ ವಿಧಿವಶ



ಮುಂಬಯಿ, ಜು.29: ಕರ್ನಾಟಕ ಕರಾವಳಿಯ ಹೆಸರಾಂತ ಪ್ರತಿಷ್ಠಿತ ಸಾರಿಗೆ ಉದ್ಯಮಿ ಮಹೇಶ್ ಮೋಟಾರ್ಸ್ ಮಾಲೀಕ ಎ.ಕೆ ಜಯರಾಮ ಶೇಕ ಅವರ ಪುತ್ರ ಸುಪುತ್ರ ಮಹೇಶ್ ಶೇಕ (49) ಬುಧವಾರ ಅಲ್ಪಕಾಲದ ಅಸೌಖ್ಯದಿಂದ ಬೆಂಗಳೂರು ಅಲ್ಲಿನ ಖಾಸಗಿ ಆಸ್ಪತ್ರೆಯಲ್ಲಿ ದೈವಾಧೀನರಾದರು.

ಮೃತರು ತಂದೆ, ತಾಯಿ, ಪತ್ನಿ, ಸುಪುತ್ರಿ, ಅಣ್ಣ, ಅಕ್ಕ ಹಾಗೂ ತಂಗಿ ಸಹಿತ ಅಪಾರ ಸಂಖ್ಯೆಯ ಉದ್ಯಮಿ ಗಳು, ಸ್ನೇಹಿತರನ್ನು ಅಗಲಿದ್ದಾರೆ.

ಮಹೇಶ್ ಅವರ ಆತ್ಮೀಯ ನಗು, ಸರಳ ವ್ಯಕ್ತಿತ್ವ ಮತ್ತು ಪ್ರೀತಿಯ ನಡವಳಿಕೆ ಸದಾ ಎಲ್ಲರ ಮನಸ್ಸಿನಲ್ಲಿ ಚಿರಸ್ಥಾಯಿಯಾಗಿ ಉಳಿಯಲಿದೆ.

ಅಗಲಿದ ಆತ್ಮಕ್ಕೆ ಚಿರಶಾಂತಿ ಕರುಣಿಸಲಿ ಹಾಗೂ ಈ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬದವರಿಗೆ ಮತ್ತು ಬಂಧು-ಬಳಗದವರಿಗೆ ನೀಡಲಿ ಎಂದು ಪ್ರಾರ್ಥಿಸುವುದಾಗಿ ಕರಾವಳಿಯ ಸಾರಿಗೆ ಉದ್ಯಮಿಗಳು, ಮಹೇಶ್ ಮೋಟಾರ್ಸ್ ಸಿಬ್ಬಂದಿ, ಹಿತೈಷಿಗಳು ತೀವ್ರ ಸಂತಾಪ ವ್ಯಕ್ತಪಡಿಸಿ ಶ್ರದ್ಧಾಂಜಲಿ ಕೋರಿದ್ದಾರೆ.

ಮೃತರ ಅಂತ್ಯಕ್ರಿಯೆ: ಮೃತರ ಅಂತಿಮ ವಿಧಿ-ವಿಧಾನಗಳು ಗುರುವಾರ ಬೆಳಗ್ಗೆ 10.00 ಗಂಟೆಗೆ ಜ್ಯೋತಿಪ್ರಕಾಶ ನಿವಾಸ, ಕುಲಶೇಖರ ಮಂಗಳೂರು ಇಲ್ಲಿ ನಡೆಯಲಿರುವುದು ಎಂದು ಕುಟುಂಬ ಮೂಲಗಳು ತಿಳಿಸಿದೆ

# ಬರಗಾಲ ಬಿಟ್ಟು ಸಂಪುಟ ವಿಸ್ತರಣೆಯಲ್ಲಿ ಸಿಎಂ ನಿರತ: ಬಿ. ಶ್ರೀರಾಮುಲು ವಾಗ್ದಾಳಿ

**ನವದೆಹಲಿ, ಜು.29:** ರಾಜ್ಯದಲ್ಲಿ ತೀವ್ರ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿರುವಾಗ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ದೆಹಲಿಯಲ್ಲಿ ಸಚಿವ ಸಂಪುಟ ವಿಸ್ತರಣೆಯ ಕಸರತ್ತಿನಲ್ಲಿ ನಿರತರಾಗಿರುವುದು ಸರಿಯಲ್ಲ ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಟೀಕಿಸಿದರು.

ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಕಳೆದ ಮೂರು ದಿನಗಳಿಂದ ದೆಹಲಿಯಲ್ಲೇ ಇದ್ದಾರೆ. ಈ ಸಂದರ್ಭದಲ್ಲಿ ರಾಜ್ಯದಲ್ಲಿರುವ ರೈತರ ಸಮಸ್ಯೆಗಳು, ಜಾನುವಾರುಗಳ ಸಂಕಷ್ಟ ಹಾಗೂ ಬರ ಪರಿಸ್ಥಿತಿಯ ಅಧ್ಯಯನಕ್ಕೆ ಆದ್ಯತೆ ನೀಡಬೇಕಾಗಿತ್ತು. ಆದರೆ ಸರ್ಕಾರ ಸಂಪುಟ ವಿಸ್ತರಣೆಯಲ್ಲೇ ಹೆಚ್ಚು ಗಮನ ಹರಿಸಿದೆ ಎಂದು ಆರೋಪಿಸಿದರು.

ಸಚಿವ ಸಂಪುಟದೊಳಗೆಯೇ ಅತೃಪ್ತಿ ಇದೆ ಎಂದು ಹೇಳಿದ ಅವರು, ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ತಮ್ಮ ಖಾತೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದರು. ಸಚಿವ ಕೃಷ್ಣ ಬೈರೇಗೌಡ ಅವರು ಕೂಡ ಅತೃಪ್ತಿ ಹೊರಹಾಕಿದ್ದಾರೆ. ಹಿರಿಯ ಸಚಿವರಾದ ಕೆ.ಎಚ್. ಮುನಿಯಪ್ಪ ಹಾಗೂ ಡಾ. ಜಿ. ಪರಮೇಶ್ವರ್ ಅವರೂ ಖಾತೆ ಬದಲಾವಣೆಗೆ ಒತ್ತಾಯಿಸಿದ್ದಾರೆ ಎಂದು ಹೇಳಿದರು.

ಇಂತಹ ಪರಿಸ್ಥಿತಿಯಲ್ಲಿ ಸಂಪುಟ ವಿಸ್ತರಣೆ ಮಾಡಿದರೆ ಸಚಿವ ಸ್ಥಾನ ಸಿಗದವರಿಂದ ಮತ್ತಷ್ಟು ಅಸಮಾಧಾನ ಮತ್ತು ಗೊಂದಲ ಉಂಟಾಗುವ ಸಾಧ್ಯತೆಯಿದ್ದು, ಈ ಬೆಳವಣಿಗೆಗಳಿಂದ ಇನ್ನೂ ಒಂದು ತಿಂಗಳು ಸರ್ಕಾರದ ಸಮಯ ವ್ಯರ್ಥವಾಗಬಹುದು ಎಂದು ಶ್ರೀರಾಮುಲು ಅಭಿಪ್ರಾಯಪಟ್ಟರು.



ರಾಜ್ಯದ ಹಲವೆಡೆ ಕೆರೆಗಳು ಬತ್ತುತ್ತಿವೆ, ಮಳೆ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದಾರೆ ಹಾಗೂ ಆತ್ಮಹತ್ಯೆಗಳೂ ನಡೆಯುತ್ತಿವೆ. ಇಂತಹ ಗಂಭೀರ ಪರಿಸ್ಥಿತಿಯಲ್ಲಿ ಸರ್ಕಾರದಿಂದ ಸಮರ್ಪಕ ಕ್ರಮಗಳು ಕಾಣಿಸುತ್ತಿಲ್ಲ. ಮುಖ್ಯಮಂತ್ರಿಗಳು ಡ್ರೋನ್ ಮೂಲಕ ಪರಿಶೀಲನೆ ನಡೆಸಿದ್ದನ್ನು ಬಿಟ್ಟರೆ ಪರಿಣಾಮಕಾರಿ ಕೆಲಸ ಮಾಡಿಲ್ಲ ಎಂದು ಅವರು ಟೀಕಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಘೋಷಿಸಿರುವ ಯಾವುದೇ ಪ್ರಮುಖ ಯೋಜನೆ ಇದುವರೆಗೆ ಜಾರಿಯಾಗಿಲ್ಲ. ಸರ್ಕಾರದಲ್ಲಿ ಅಭಿವೃದ್ಧಿಗಿಂತ ರಿಯಲ್ ಎಸ್ಟೇಟ್ ಮಾಫಿಯಾದ ಪ್ರಭಾವವೇ ಹೆಚ್ಚಾಗಿದೆ ಎಂದು ಆರೋಪಿಸಿದ ಅವರು, ಜನರು ಹಾಗೂ ರೈತರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ ಎಂದರು.

ಕಾವೇರಿ ನೀರಿನ ವಿಷಯದಲ್ಲೂ ರಾಜ್ಯ ಸರ್ಕಾರ ಸಮರ್ಪಕವಾಗಿ ಹೋರಾಟ ನಡೆಸಿಲ್ಲ. ಹಳೆಯ ಮೈಸೂರು ಭಾಗದಲ್ಲಿ ನೀರಿನ ಸಮಸ್ಯೆ ತೀವ್ರವಾಗಿದ್ದರೂ ಸರ್ಕಾರ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ. ತಮಿಳುನಾಡಿನ ಮುಖ್ಯಮಂತ್ರಿ ಕರ್ನಾಟಕಕ್ಕೆ ಆಗಮಿಸುತ್ತಿರುವ ಸಂದರ್ಭದಲ್ಲಿ ನೀರು ಹರಿಸಿ ಸ್ವಾಗತಿಸುವುದು ಸರಿಯಲ್ಲ. ಮೇಕೆದಾಟು ಯೋಜನೆಯನ್ನು ವಿರೋಧಿಸುವವರಿಗೆ ಸ್ವಾಗತ ಏಕೆ ನೀಡಬೇಕು ಎಂದು ಪ್ರಶ್ನಿಸಿದರು. ಡಿ.ಕೆ. ಶಿವಕುಮಾರ್ ಅವರು ರಾಜಕೀಯ ನಾಟಕ ಮಾಡುತ್ತಿದ್ದಾರೆ ಎಂದು ಆರೋಪಿಸಿದ ಶ್ರೀರಾಮುಲು, ದೆಹಲಿಯಲ್ಲಿನ ರಾಜಕೀಯ ಚಟುವಟಿಕೆಗಳನ್ನು ಬಿಟ್ಟು ರಾಜ್ಯಕ್ಕೆ ಮರಳಿ ಜನರ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡಬೇಕು ಎಂದು ಆಗ್ರಹಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಜುಲೈ 30 2026, ಗುರುವಾರ

## ಒಳಪುಟಗಳಲ್ಲಿ

ರಾಜ್ಯದ ವಿವಿಧೆಡೆ ಕಾವೇರಿ ಕಿಚ್ಚು: ರೈತರು, ಕನ್ನಡಪರ ಸಂಘಟನೆಗಳ ಆಕ್ರೋಶ - ಪು.5

ತಕ್ಷಣ ಬರ ಘೋಷಣೆ ಮಾಡಿ ಪರಿಹಾರ ಕೈಕೊಳ್ಳಲು ಸಿ.ಟಿ.ರವಿ ಆಗ್ರಹ - ಪು.6

ಸಿವಿಲ್ ಎಂಜಿನಿಯರಿಂಗ್‌ನಲ್ಲಿ ಪ್ರಸ್ತುತ ಪ್ರವೃತ್ತಿ ಭವಿಷ್ಯದ ನಿರೀಕ್ಷೆ ಕಾರ್ಯಾಗಾರ ಉದ್ಘಾಟನೆ - ಪು.7

# ತಮಿಳುನಾಡಿಗೆ ನೀರು ಹರಿಸುವ ಆದೇಶದ ವಿರುದ್ಧ ಮೇಲ್ಮನವಿಗೆ ತೀರ್ಮಾನ

### ಬೆಂಗಳೂರಿನಲ್ಲಿ ವಿರೋಧ



**ನವದೆಹಲಿ, ಜು.29:** ತಮಿಳುನಾಡಿಗೆ ಕಾವೇರಿ ನೀರು ಹರಿಸುವ ವಿಚಾರವಾಗಿ ಕಾವೇರಿ ನೀರು ನಿಯಂತ್ರಣ ಸಮಿತಿ ಆದೇಶದ ವಿರುದ್ಧ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಲು ನಿರ್ಧಾರ ಮಾಡಲಾಗಿದೆ.

ಅಡ್ವೊಕೇಟ್ ಜನರಲ್, ಕಾನೂನು ತಜ್ಞರು ಹಾಗೂ ಅಧಿಕಾರಿಗಳ ಜೊತೆ ಸಭೆ ಮಾಡಲಾಗಿದ್ದು, ಮೇಲ್ಮನವಿಗೆ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ? ಎಂದು ಸಿಎಂ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು. ದೆಹಲಿಯ ಕರ್ನಾಟಕ ಭವನದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಬುಧವಾರ ಪ್ರತಿಕ್ರಿಯೆ ನೀಡಿದರು.

ತಮಿಳುನಾಡಿಗೆ ನೀರು ಹರಿಸುವ ಬಗ್ಗೆ ಅಥಖಿಅ ನೀಡಿರುವ ಆದೇಶದ ಬಗ್ಗೆ ಕೇಳಿದಾಗ, ಈ ವಿಚಾರವಾಗಿ ಸಭೆ ಮಾಡಿದ್ದೇವೆ. ಈ ಬಾರಿ ವರುಣ ಕೃಪೆ ತೋರಿಲ್ಲ. ಈ ಹಿಂದೆ ಸಮಿತಿಯು ಕಾವೇರಿ ನೀರು ಹರಿಸಬೇಕು ಎಂಬ ತಮಿಳುನಾಡಿನ ಮನವಿಯನ್ನು ಎರಡು ಬಾರಿ ತಿರಸ್ಕರಿಸಿತ್ತು. ಈ ಬಾರಿ ನೀರು ಹರಿಸಲು ಸೂಚಿಸಿದೆ. ಈ ಆದೇಶದ ವಿರುದ್ಧ ಮೇಲ್ಮನವಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಜೊತೆ ಚರ್ಚೆ ಮಾಡಿದ್ದೇವೆ ಎಂದರು.

ಬೆಂಗಳೂರಿಗೆ ಮರಳಿದ ನಂತರ ವಿರೋಧ ಪಕ್ಷದ ನಾಯಕರ ಜೊತೆಯೂ ಈ ಬಗ್ಗೆ ಚರ್ಚೆ ಮಾಡಲಾಗುವುದು. ಈ ಮಧ್ಯೆ ತಮಿಳುನಾಡು ಸಿಎಂ ನನ್ನ ಜೊತೆ ಚರ್ಚೆ ಮಾಡಲು ಇಂಗಿತ ವ್ಯಕ್ತಪಡಿಸಿ ಮುಖ್ಯಕಾರ್ಯದರ್ಶಿಗಳಿಗೆ ಪತ್ರ ಬರೆದಿದ್ದು, ನನ್ನ ಜತೆ ದೂರವಾಣಿ ಮೂಲಕ ಮಾತನಾಡಿದ್ದಾರೆ.

ನಾವು ಅವರಿಗೆ ಕೊಡಬೇಕಾದ ಗೌರವ ನೀಡಿ, ಸಭೆಗೆ ಬನ್ನಿ ಎಂದು ಹೇಳಿದ್ದೇನೆ. ನಮ್ಮ ರಾಜ್ಯಕ್ಕೆ ಬರುತ್ತೇವೆ ಎನ್ನುವ ಅತಿಥಿಗಳನ್ನು ಗೌರವದಿಂದ ಸ್ವೀಕಾರ ಮಾಡುವುದು ನಮ್ಮ ಕರ್ತವ್ಯ. ಹೀಗಾಗಿ ಬನ್ನಿ ಎಂದು ಹೇಳಿದ್ದು, ಅದಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದರು.

### ವಿದ್ಯಾರ್ಥಿಗಳ ಮೇಲೆ ಪೆಲೆಟ್ ಗನ್ ಪ್ರಯೋಗ, ನನ್ನ ರಾಜಕೀಯದಲ್ಲೇ ಮೊದಲ ಬಾರಿಗೆ ಕಂಡಿದ್ದೇನೆ

ಸಂಸತ್ತಿನಲ್ಲಿ ರಾಹುಲ್ ಗಾಂಧಿ ಅವರು ವಿದ್ಯಾರ್ಥಿಗಳ ಪ್ರತಿಭಟನೆ ವೇಳೆ ಪೊಲೀಸರ ದಾಳಿಗೆ ಗೃಹ ಸಚಿವ ಅಮಿತ್ ಶಾ ಅವರೇ ಹೊಣೆ ಎಂದು ಹೇಳಿರುವ ಬಗ್ಗೆ ಕೇಳಿದಾಗ, ಇದು ಕೇವಲ ರಾಹುಲ್ ಗಾಂಧಿ ಅವರ ಹೇಳಿಕೆ ಮಾತ್ರವಲ್ಲ. ಇದು ದೇಶದ ಪ್ರಶ್ನೆ. ಇದು ದೊಡ್ಡ ವಿಚಾರವಾದರೂ, ರಾಹುಲ್ ಗಾಂಧಿ ಅವರು ಕೇಳಿರುವುದು ಸಣ್ಣ ಪ್ರಶ್ನೆ ಅಷ್ಟೆ. ವಿದ್ಯಾರ್ಥಿಗಳ ಮೇಲೆ ಪೆಲೆಟ್ ಗನ್ ಪ್ರಯೋಗಕ್ಕೆ ಅನುಮತಿ ಕೊಟ್ಟವರು ಯಾರು? ದೆಹಲಿ ಪೊಲೀಸರು ಕೇಂದ್ರ ಸರ್ಕಾರದ ಅಧೀನದಲ್ಲಿರುತ್ತಾರೆ. ಇಂತಹ ಪರಿಸ್ಥಿತಿಯಲ್ಲಿ ಮೂಲಭೂತ ಪ್ರಶ್ನೆ ಕೇಳುವುದು ವಿರೋಧ ಪಕ್ಷದ ನಾಯಕರು ಹಾಗೂ ಪ್ರತಿಯೊಬ್ಬರ ಕರ್ತವ್ಯವಾಗಿದೆ. ನನ್ನ ರಾಜಕೀಯ ಇತಿಹಾಸದಲ್ಲಿ ಇಂತಹ ವಿದ್ಯಾರ್ಥಿಗಳ ಮೇಲೆ ಪೆಲೆಟ್ ಗನ್ ಪ್ರಯೋಗವಾಗಿರುವುದನ್ನು ನೋಡುತ್ತಿರುವುದು ಇದೇ ಮೊದಲು. ಈ ಬಗ್ಗೆ ವಿವರಣೆ ನೀಡುವುದು ಗೃಹ ಸಚಿವರ ಕರ್ತವ್ಯ ಎಂದು ಸಿಎಂ ತಿಳಿಸಿದರು.

**ಕಾವೇರಿ ಭಾಗದ ಪರಿಸ್ಥಿತಿ ವೀಕ್ಷಿಸಲು ಸಿಎಂ ವಿಜಯ್‌ಗೆ ಮನವಿ**

ನಮ್ಮ ಕಾವೇರಿ ಜಲಾನಯನ ಪ್ರದೇಶದ ಪರಿಸ್ಥಿತಿ ನೋಡಿ ಎಂದು ಸಿಎಂ ವಿಜಯ್ ಅವರಿಗೆ ನಾವು ಮನವಿ ಮಾಡಿದ್ದೇವೆ. ಅದಕ್ಕೆ ಅಗತ್ಯವಿರುವ ಹೆಲಿಕಾಪ್ಟರ್ ವ್ಯವಸ್ಥೆ ಕೂಡ ಮಾಡಲಾಗುವುದು ಎಂದೂ ಹೇಳಿದ್ದೇನೆ. ಅವರಿಗೂ ವಾಸ್ತವ ಪರಿಸ್ಥಿತಿ ಅನುಭವ ಆಗಬೇಕು. ಅವರ ತೀರ್ಮಾನ ಏನು ಎಂದು ನೋಡೋಣ ಎಂದು ತಿಳಿಸಿದರು.

## ಮಹಿಳಾ ಮೀಸಲಾತಿ ಎಂದಿಗೂ ಜಾರಿಯಾಗಲ್ಲ: ಸಭಾಪತಿ ಬಸವರಾಜ ಹೊರಟ್ಟಿ ಅನುಮಾನ



**ವಿಜಯಪುರ, ಜು.29:** ಮಹಿಳಾ ಮೀಸಲಾತಿ ಮಸೂದೆ ಯಾವತ್ತಿಗೂ ಜಾರಿ ಆಗುವ ಸಾಧ್ಯತೆ ಇಲ್ಲ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅನುಮಾನ ವ್ಯಕ್ತಪಡಿಸಿದರು. ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಈಗಾಗಲೇ ಹಲವಾರು ಬಾರಿ ಸಂಸತ್ತಿನಲ್ಲಿ ಮಹಿಳಾ ಮೀಸಲಾತಿ ಮಸೂದೆ ಚರ್ಚೆಗೆ ಬಂದಿದೆ. ಆದರೆ, ಯಾವ ಸರ್ಕಾರದಲ್ಲೂ ಈ ಮಸೂದೆ ಜಾರಿಗೆ ಸಾಧ್ಯವಾಗಿಲ್ಲ. ಶೇ.53ರಷ್ಟು ಇರುವ ಮಹಿಳೆಯರು ಬುದ್ಧಿವಂತಿಕೆಯಿಂದ ನಿಮ್ಮವರನ್ನೇ ಮತ ಹಾಕಿ ನಿಮ್ಮದೇ ಸರ್ಕಾರ ರಚಿಸಿ ಈ ಮಸೂದೆಗೆ ಅನುಮೋದನೆ ಪಡೆದುಕೊಳ್ಳಿ ಎಂದು ಸಲಹೆ ನೀಡಿದರು. ಶಾಸಕ ಬಸನಗೌಡ ಪಾಟೀಲ ಯತ್ನಾಳ ಮಾತನಾಡಿ, 'ಹೊರಟ್ಟಿಯವರು ಮಹಿಳಾ ಮೀಸಲಾತಿ ಆಗುವುದಿಲ್ಲ ಎನ್ನುತ್ತಿದ್ದಾರೆ. ಆದರೆ, ಪ್ರಧಾನಿ ಮೋದಿ ಅವರು ಮಾಡಿಯೇ ಮಾಡುತ್ತಾರೆ, ಮೋದಿ ಒಂದು ಬಾರಿ ತಲೆಯಲ್ಲಿ ತೆಗೆದುಕೊಂಡಿದ್ದಾರೆ ಎಂದರೆ ಅದು ಮಾಡಿಯೇ ಬಿಡುತ್ತಾರೆ' ಎಂದು ಭರವಸೆ ವ್ಯಕ್ತಪಡಿಸಿದರು.

# ಸಂಪುಟ ವಿಸ್ತರಣೆ ಮತ್ತೆ ಮುಂದೂಡಿಕೆ ವರಿಷ್ಠರ ಭೇಟಿಗೆ ಸಿಗದ ಸಮಯ

- ಮಲ್ಲಿಕಾರ್ಜುನ ಖರ್ಗೆ–ರಾಹುಲ್ ಗಾಂಧಿ ಭೇಟಿಗೆ ಕಾಯುತ್ತಿರುವ ಸಿಎಂ
- ಬೆಂಗಳೂರಿಗೆ ಮರಳಿದ ಹಲವು ಶಾಸಕರು

**ನವದೆಹಲಿ, ಜು.29:** ಕರ್ನಾಟಕ ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿದ ಕಸರತ್ತು ಮತ್ತೊಮ್ಮೆ ಮುಂದೂಡಿಕೆಯಾಗಿದ್ದು, ಹೈಕಮಾಂಡ್ ನಾಯಕರ ಲಭ್ಯತೆ ಇಲ್ಲದ ಕಾರಣ ಬುಧವಾರ ಸಂಜೆ ನಡೆಯಬೇಕಿದ್ದ ಅಂತಿಮ ಸಭೆ ರದ್ದಾಗಿದೆ. ಇದರಿಂದ ಸಂಪುಟ ವಿಸ್ತರಣೆಯ ಘೋಷಣೆ ಇನ್ನಷ್ಟು ವಿಳಂಬವಾಗುವ ಸಾಧ್ಯತೆ ಹೆಚ್ಚಿದೆ.

ಕಳೆದ ಮೂರು ದಿನಗಳಿಂದ ನವದೆಹಲಿಯಲ್ಲಿ ಬೀಡುಬಿಟ್ಟಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ಸಂಪುಟ ವಿಸ್ತರಣೆಗೆ ಅಂತಿಮ ಒಪ್ಪಿಗೆ ಪಡೆಯಲು ಪ್ರಯತ್ನಿಸುತ್ತಿದ್ದರೂ, ಈವರೆಗೆ ವರಿಷ್ಠರಿಂದ ಸಮಯ ಸಿಕ್ಕಿಲ್ಲ.

ಮಂಗಳವಾರ ಕಾಂಗ್ರೆಸ್ ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ನಿವಾಸದಲ್ಲಿ ನಡೆದ ಸಭೆಯಲ್ಲಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಭಾಗವಹಿಸಿದ್ದರು. ಮುಖ್ಯಮಂತ್ರಿ ಹಾಗೂ ಮಾಜಿ ಮುಖ್ಯಮಂತ್ರಿಗಳಿಂದ ಸಲ್ಲಿಕೆಯಾಗಿರುವ ಸಚಿವ ಸ್ಥಾನ ಆಕಾಂಕ್ಷಿಗಳ ಪಟ್ಟಿಯನ್ನು ಪರಿಶೀಲಿಸಿದ ವೇಣುಗೋಪಾಲ್, ಬುಧವಾರ ಖರ್ಗೆ ಹಾಗೂ ರಾಹುಲ್ ಗಾಂಧಿ ಅವರ ಸಮ್ಮುಖದಲ್ಲಿ ಅಂತಿಮ ಚರ್ಚೆ ನಡೆಸುವ ಉದ್ದೇಶ ಹೊಂದಿದ್ದರು.

ಆದರೆ ಸಂಸತ್ತಿನ ಕಲಾಪ ಮತ್ತು ರಾಹುಲ್ ಗಾಂಧಿ ಅವರ ಸುದ್ದಿಗೋಷ್ಠಿ ಸೇರಿದಂತೆ ಪೂರ್ವನಿಗದಿತ ಕಾರ್ಯಕ್ರಮಗಳ ಹಿನ್ನೆಲೆಯಲ್ಲಿ ಸಭೆಯನ್ನು ಮುಂದೂಡಲಾಗಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಗುರುವಾರ ಸಭೆಗೆ ಸಮಯ ನಿಗದಿಯಾಗುವ ಸಾಧ್ಯತೆ ಇದೆ.

ಸಂಪುಟ ವಿಸ್ತರಣೆ ಕುರಿತ ಸಭೆಗಳು ಪದೇಪದೇ ಮುಂದೂಡಿಕೆಯಾಗುತ್ತಿರುವುದರಿಂದ ಸಚಿವ ಸ್ಥಾನಾಕಾಂಕ್ಷಿಗಳಲ್ಲಿ ಹಾಗೂ ಕಾಂಗ್ರೆಸ್ ಶಾಸಕರಲ್ಲಿ ಅಸಮಾಧಾನ ಹೆಚ್ಚುತ್ತಿದೆ. ವರಿಷ್ಠರ ನಿರ್ಧಾರ ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ ದೆಹಲಿಯಲ್ಲಿದ್ದ ಹಲವು ಶಾಸಕರು ಬೆಂಗಳೂರಿನತ್ತ ವಾಪಸಾಗಲು ಆರಂಭಿಸಿದ್ದಾರೆ.

**ಸಚಿವ ಸಂಪುಟ ವಿಸ್ತರಣೆ ಬಗ್ಗೆ ಕೇಳಿದಾಗ, ಚರ್ಚೆಗಳು ಆಗಿವೆ. ಹೈಕಮಾಂಡ್ ನಾಯಕರ ಜೊತೆ ಅಂತಿಮವಾಗಿ ಮಾತನಾಡುವುದು ಬಾಕಿ ಇದೆ. ನಮ್ಮ ನಾಯಕರು ಚರ್ಚೆ ಮಾಡಲು ಕರೆಯುವುದಾಗಿ ಹೇಳಿದ್ದಾರೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.**

# ನವದೆಹಲಿಯಲ್ಲಿ ಇಂದು 54ನೇ ತುರ್ತು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆ

### ಮಧ್ಯಾಹ್ನ 2.30ಕ್ಕೆ ಪ್ರಾಧಿಕಾರದ ಸಭೆ

**ಬೆಂಗಳೂರು, ಜು.29:** ಬೆಂಗಳೂರು–ತಮಿಳುನಾಡಿಗೆ ಕರ್ನಾಟಕದಿಂದ ಮುಂದಿನ 15 ದಿನಗಳ ಕಾಲ 3.500_ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯುಆರ್‌ಸಿ) ಶಿಫಾರಸು ಮಾಡಿರುವ ಬೆನ್ನಲ್ಲೇ, ಗುರುವಾರ ಮಹತ್ವದ ತುರ್ತು ಸಿಡಬ್ಲ್ಯುಎಂಎ ಸಭೆ ನಡೆಯಲಿದೆ.

ನವದೆಹಲಿಯಲ್ಲಿ ಗುರುವಾರ ಮಧ್ಯಾಹ್ನ 2:30ಕ್ಕೆ ಪ್ರಾಧಿಕಾರ ಸಭೆ ನಡೆಯಲಿದ್ದು, ಕರ್ನಾಟಕ, ತಮಿಳುನಾಡು, ಮತ್ತು ಪುದುಚೇರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ. ರಾಜ್ಯದಲ್ಲಿ ಈ ಬಾರಿ ಬರಗಾಲ ಆವರಿಸಿರುವ ಹಿನ್ನೆಲೆಯಲ್ಲಿ ಸದ್ಯಕ್ಕೆ ಕಾವೇರಿ ಜಲಾಶಯಗಳಿಂದ ತಮಿಳುನಾಡಿಗೆ ನೀರು ಹರಿಸಲು ಸಾಧ್ಯವಿಲ್ಲ ಎಂಬ ಅಭಿಪ್ರಾಯವನ್ನು ಕರ್ನಾಟಕ ಸರ್ಕಾರ ವ್ಯಕ್ತಪಡಿಸಿತ್ತು.

ಸಮಿತಿ ನೀಡಿರುವ ಶಿಫಾರಸನ್ನು ಪ್ರಶ್ನಿಸಿ ಕರ್ನಾಟಕ ಸರ್ಕಾರ ಕಾವೇರಿ ನೀರು ನಿರ್ವಹಣ ಪ್ರಾಧಿಕಾರಕ್ಕೆ ಸಲ್ಲಿಸಲು ಮುಂದಾಗಿದೆ. ಈಗಾಗಲೇ ಭಾರಿ ಮತ್ತು ಮಧ್ಯಮ ಜಲಸಂಪನ್ಮೂಲ ಸಚಿವ ರಾಮಲಿಂಗ ರೆಡ್ಡಿಯವರ ಕಾನೂನು ತಜ್ಞರು ಮತ್ತು ಇಲಾಖೆಯ ಹಿರಿಯ ಅಧಿಕಾರಿಗಳ ಜೊತೆ ಮಹತ್ವದ ಸಭೆ ನಡೆಸಿ ಕಾನೂನು ಹೋರಾಟಗಳ ಬಗ್ಗೆ ಅಭಿಪ್ರಾಯವನ್ನು ಪಡೆದುಕೊಂಡಿದ್ದಾರೆ.

### ವಕೀಲರ ಜತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಚರ್ಚೆ

**ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆಗೆ ಕಾವೇರಿ ನೀರು ನಿಯಂತ್ರಣ ಸಮಿತಿಯು ಆದೇಶ ನೀಡಿರುವ ಹಿನ್ನೆಲೆಯಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಕರ್ನಾಟಕ ಪರ ವಕೀಲರ ಜತೆ ದೆಹಲಿಯಲ್ಲಿ ಗುರುವಾರ ಬೆಳಗ್ಗೆ 11.30 ಕ್ಕೆ ಚರ್ಚೆ ನಡೆಸಲಿದ್ದಾರೆ. ಸುಪ್ರೀಂ ಕೋರ್ಟ್ ನಲ್ಲಿ ಕರ್ನಾಟಕ ರಾಜ್ಯ ಸರಕಾರದ ಪರ ವಕೀಲ ಮೋಹನ್ ಕಾತರಕಿ ಅವರು ಸೇರಿದಂತೆ ಕಾನೂನು ತಜ್ಞರ ಜತೆ ಸಿಎಂ ಸಮಾಲೋಚನೆ ನಡೆಸುವರು.**

ಗುರುವಾರ ನಡೆಯಲಿರುವ ಸಭೆಯಲ್ಲಿ ಕರ್ನಾಟಕ ರಾಜ್ಯದ ಪ್ರಸ್ತುತ ಜಲಾಶಯಗಳಲ್ಲಿ ಸಂಗ್ರಹವಾಗಿರುವ ನೀರಿನ ಸಾಮರ್ಥ್ಯ, ಹಾಗೂ ವಸ್ತು ಸ್ಥಿತಿಯನ್ನು ಮನವರಿಕೆ ಮಾಡಿಕೊಟ್ಟು ತಡೆಯಾಜ್ಞೆ ನೀಡಬೇಕೆಂದು ಕೋರಲಿದೆ. ಈ ಸಂಬಂಧ ಈಗಾಗಲೇ ಕಾನೂನು ತಜ್ಞರು ಮತ್ತು ಜಲಸಂಪನ್ಮೂಲ ಇಲಾಖೆಯ ಅಧಿಕಾರಿಗಳ ಮೇಲ್ಮನೆ ಸಲ್ಲಿಸಲು ಸೂಕ್ತ ಸಿದ್ಧತೆ ಮಾಡಿಕೊಂಡಿದ್ದಾರೆ.

ಇದೀಗ ಗುರುವಾರ ನಡೆಯಲಿರುವ ಸಭೆಯು ಎಲ್ಲರ ಚಿತ್ತ ನೆಟ್ಟಿದ್ದು ಕರ್ನಾಟಕದ ಮನವಿಯನ್ನು ಪುರಸ್ಕರಿಸಿ ಸಮಿತಿಯ ಶಿಫಾರಸಿಗೆ ನಿರ್ವಹಣಾ ಪ್ರಾಧಿಕಾರ ತಡೆಯಾಜ್ಞೆ ನೀಡಲಿದೆಯೇ ಎಂಬ ಯಕ್ಷಪ್ರಶ್ನೆ ಮೂಡಿದೆ.

# ವಿದ್ಯಾರ್ಥಿಗಳ ಮೇಲೆ ಪೊಲೀಸ್ ಬಲಪ್ರಯೋಗ: ಅಮಿತ್ ಶಾ ರಾಜೀನಾಮೆಗೆ ರಾಹುಲ್ ಒತ್ತಾಯ



**ಇಡೀ ಪ್ರಕರಣದಲ್ಲಿ ಗೃಹ ಸಚಿವರು ತಪ್ಪತಸ್ಥರು ಇಲ್ಲ ಅಸಮರ್ಥರು**

**ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ತನಿಖೆಗೆ ಒತ್ತಾಯ**

**ನವದೆಹಲಿ, ಜು.29:** ಸಂಸದ್ ಚಲೋ ಮೆರವಣಿಗೆಯ ಸಂದರ್ಭದಲ್ಲಿ ವಿದ್ಯಾರ್ಥಿ ಪ್ರತಿಭಟನಾಕಾರರ ಮೇಲೆ ನಡೆದ ಪೊಲೀಸರ ಲಾಠಿಚಾರ್ಜ್, ಪೆಲೆಟ್ ಗುಂಡುಗಳ ಬಳಕೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನೇರ ಹೊಣೆ. ಕೂಡಲೇ ರಾಜೀನಾಮೆ ನೀಡುವಂತೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಒತ್ತಾಯಿಸಿದ್ದಾರೆ.

ಬುಧವಾರ ನವದೆಹಲಿಯಲ್ಲಿ ಮಾತನಾಡಿದ ಅವರು, ಕಾನೂನು ಜಾರಿ ಸಂಸ್ಥೆಗಳಿಂದ ಬಲಪ್ರಯೋಗದ ಬಗ್ಗೆ ಸ್ವತಂತ್ರ ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ತನಿಖೆ ನಡೆಸಬೇಕೆಂದು ಕರೆ ನೀಡಿದ್ದಾರೆ.

ಗೃಹ ಸಚಿವರು ನಮ್ಮ ವಿದ್ಯಾರ್ಥಿಗಳ ಮೇಲೆ ಗುಂಡು ಹಾರಿಸಲು ಅಧಿಕಾರ ನೀಡಿದರು. ಅವರು ನಮ್ಮ ವಿದ್ಯಾರ್ಥಿಗಳ ರಕ್ತಕ್ಕೆ ಪೆಲೆಟ್‌ಗಳನ್ನು ಹಾಕಿದರು. ಅವರು ಭಾರತದ ವಿದ್ಯಾರ್ಥಿಗಳನ್ನು ಗುಂಡು ಹಾರಿಸಲು ಆದೇಶಿಸಿದರು ಎಂದು ಗಾಯಗೊಂಡ ಪ್ರತಿಭಟನಾಕಾರರ ಛಾಯಾಚಿತ್ರಗಳನ್ನು ಪ್ರದರ್ಶಿಸುತ್ತಾ ಗಾಂಧಿ ಆರೋಪಿಸಿದರು. ಶಾಂತಿಯುತ ಪ್ರದರ್ಶನಗಳನ್ನು ಹತ್ತಿಕ್ಕಲು ಭದ್ರತಾ ಸಿಬ್ಬಂದಿ ಪೆಲೆಟ್ ಗನ್‌ಗಳು, ಉಗುರುಗಳಿಂದ ಜೋಡಿಸಲಾದ ಲಾಠಿ ಮತ್ತು ಮುಖ ಗುರುತಿಸುವಿಕೆ ತಂತ್ರಜ್ಞಾನವನ್ನು ಬಳಸಿದ್ದಾರೆ ಎಂದು ಹೇಳಿದ್ದಾರೆ.

ಶಾ ಅವರ ಪಾತ್ರವನ್ನು ಪ್ರಶ್ನಿಸಿದ ಗಾಂಧಿ, ಘಟನೆಗೆ ಕೇವಲ ಎರಡು ವಿವರಣೆಗಳಿರಬಹುದು ಎಂದು ಹೇಳಿದರು. "ಗೃಹ ಸಚಿವರು ಗುಂಡು ಹಾರಿಸಲು ಆದೇಶಿಸಿರಬಹುದು ಅಥವಾ ಅವರಿಗೆ ಅದರ ಬಗ್ಗೆ ತಿಳಿದಿರಲಿಲ್ಲ. ಮೊದಲ ಪ್ರಕರಣದಲ್ಲಿ ಅವರು ತಪ್ಪಿತಸ್ಥರು; ಎರಡನೇ ಪ್ರಕರಣದಲ್ಲಿ ಅವರು ಅಸಮರ್ಥರು" ಎಂದು ಹೇಳಿದರು.

ನನ್ನ ಆರೋಪಗಳಿಗೆ ಪ್ರತಿಕ್ರಿಯಿಸಲು ಗೃಹ ಸಚಿವರು ಲೋಕಸಭೆಯಲ್ಲಿ ಹಾಜರಿಲ್ಲವೇಕೆ ಎಂದು ಪ್ರಶ್ನಿಸಿದರು.

ಪೊಲೀಸರ ಅತಿರೇಕದ ತನಿಖೆ ನಡೆಸಲು ಮತ್ತು ವಿದ್ಯಾರ್ಥಿಗಳ ವಿರುದ್ಧ ಬಲಪ್ರಯೋಗಕ್ಕೆ ಹೊಣೆಗಾರಿಕೆಯನ್ನು ನಿಗದಿಪಡಿಸಲು ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ಸ್ವತಂತ್ರ ಸಮಿತಿಯನ್ನು ರಚಿಸಬೇಕೆಂದು ಗಾಂಧಿ ಒತ್ತಾಯಿಸಿದರು.

ದಮನ ಕ್ರಮವನ್ನು ಉನ್ನತ ಮಟ್ಟದಲ್ಲಿ ಅನುಮೋದಿಸಲಾಗಿದೆ ಎಂದು ಹೇಳಿಕೊಂಡ ಗಾಂಧಿ, ಸರ್ಕಾರದ ಹಿರಿಯ ಸದಸ್ಯರು ಬೆಳವಣಿಗೆಗಳ ಬಗ್ಗೆ ಸಂಪೂರ್ಣವಾಗಿ ತಿಳಿದಿದ್ದಾರೆ ಎಂದರು.

ಪ್ರತಿಭಟನೆಯ ಸಮಯದಲ್ಲಿ ರಾಜಕೀಯ ನಾಯಕರು ಪೊಲೀಸ್ ಸಿಬ್ಬಂದಿಯೊಂದಿಗೆ ಸಂವಹನ ನಡೆಸುವುದನ್ನು ನಾನು ವೈಯಕ್ತಿಕವಾಗಿ ನೋಡಿದ್ದೇನೆ ಎಂದು ಅವರು ಹೇಳಿದರು. ಪರೀಕ್ಷಾ ಅಕ್ರಮ ಮತ್ತು ವಿದ್ಯಾರ್ಥಿಗಳ ಪ್ರತಿಭಟನೆಗಳಿಗೆ ಪೊಲೀಸರ ಪ್ರತಿಕ್ರಿಯೆ ಎರಡರ ಬಗ್ಗೆಯೂ ಹೊಣೆಗಾರಿಕೆಗಾಗಿ ವಿರೋಧ ಪಕ್ಷದ ಬೇಡಿಕೆಯನ್ನು ಪುನರುಚ್ಚರಿಸಿದ ಗಾಂಧಿ, ವಾರಗಳ ಕಾಲ ರಾಷ್ಟ್ರವ್ಯಾಪಿ ಪ್ರತಿಭಟನೆಗಳ ನಂತರ ಧರ್ಮೇಂದ್ರ ಪ್ರಧಾನ್ ಶಿಕ್ಷಣ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದರಿಂದ ಶಿಕ್ಷಣ ಕ್ಷೇತ್ರ ಎದುರಿಸುತ್ತಿರುವ ದೊಡ್ಡ ಸಮಸ್ಯೆಗಳು ಬಗೆಹರಿಯಲಿಲ್ಲ ಎಂದು ಹೇಳಿದರು.

ಧರ್ಮೇಂದ್ರ ಪ್ರಧಾನ್ ಕೇವಲ ಸಂಕೇತವಾಗಿದ್ದರು. ಅವರು ನಿಜವಾಗಿಯೂ ಶಿಕ್ಷಣ ಸಚಿವಾಲಯವನ್ನು ಎಂದಿಗೂ ನಡೆಸಲಿಲ್ಲ. ಆರ್‌ಎಸ್‌ಎಸ್ ಅದನ್ನು ನಡೆಸುತ್ತದೆ. ನಮ್ಮ ಶಿಕ್ಷಣ ವ್ಯವಸ್ಥೆಯ ಆತ್ಮವನ್ನು ಆರ್‌ಎಸ್‌ಎಸ್ ವಶಪಡಿಸಿಕೊಂಡಿದೆ" ಎಂದು ಆರೋಪಿಸಿದರು.

ಪ್ರತಿಯೊಂದು ವಿಶ್ವವಿದ್ಯಾಲಯದಲ್ಲಿ ಆರ್‌ಎಸ್‌ಎಸ್ ಬೆಂಬಲಿತ ಉಪಕುಲಪತಿ ಇರುತ್ತಾರೆ. ನಿಜವಾದ ಶತ್ರು ಒಬ್ಬ ಸಚಿವರಲ್ಲ; ನಿಜವಾದ ಶತ್ರು ಆರ್‌ಎಸ್‌ಎಸ್" ಎಂದು ಗಾಂಧಿ ಆರೋಪಿಸಿದರು. ಸಾರ್ವಜನಿಕ ಪರೀಕ್ಷೆಗಳು (ಅನ್ಯಾಯಯುತ ವಿಧಾನಗಳ ತಡೆಗಟ್ಟುವಿಕೆ) ತಿದ್ದುಪಡಿ ಮಸೂದೆ, 2026 ರ ಲೋಕಸಭೆಯ ಚರ್ಚೆಯ ಸಮಯದಲ್ಲಿ, ಖಜಾನೆ ಪೀಠದ ಸದಸ್ಯರು ಗೃಹ ಸಚಿವರ ವಿರುದ್ಧ ರಾಹುಲ್ ಆರೋಪಗಳಿಗೆ ತೀವ್ರವಾಗಿ ಆಕ್ಷೇಪ ವ್ಯಕ್ತಪಡಿಸಿದಾಗ ವಿವಾದ ಭುಗಿಲೆದ್ದಿತು. ಸಭಾಪತಿಗಳು ಕಲಾಪದ ಸಮಯದಲ್ಲಿ ಪದೇ ಪದೇ ಮಧ್ಯಪ್ರವೇಶಿಸಿ ಅವರ ಭಾಷಣದ ಕೆಲವು ಭಾಗಗಳನ್ನು ತೆಗೆದುಹಾಕಲು ಆದೇಶಿಸಿದರು. ಸದನದೊಳಗೆ ಮಾಡಲು ಅನುಮತಿ ಇಲ್ಲದ ವಾದಗಳನ್ನು ಪೂರ್ಣಗೊಳಿಸಲು ಪತ್ರಿಕಾಗೋಷ್ಠಿ ಕರೆದಿದ್ದೇನೆ ಎಂದು ಗಾಂಧಿ ಹೇಳಿದರು.

ಬಿಜೆಪಿ, ಆರ್‌ಎಸ್‌ಎಸ್ ಅಥವಾ ಅವರೊಂದಿಗೆ ಸಂಪರ್ಕ ಹೊಂದಿರುವ ಯಾರಿಗಾದರೂ ನಾನು ಎಂದಿಗೂ ಕ್ಷಮೆಯಾಚಿಸುವುದಿಲ್ಲ.

ಜನರಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಎತ್ತುವುದು ನನ್ನ ಪ್ರಜಾಸತ್ತಾತ್ಮಕ ಹಕ್ಕು ಮತ್ತು ವಿರೋಧ ಪಕ್ಷದ ನಾಯಕನಾಗಿ ನನ್ನ ಜವಾಬ್ದಾರಿ" ಎಂದು ಗಾಂಧಿ ಹೇಳಿದರು. ಕೇಂದ್ರ ಗೃಹ ಸಚಿವರನ್ನು ಹೆಸರಿಸಿದಾಗ ಲೋಕಸಭೆಯಲ್ಲಿ ಮೈಕ್ರೊಫೋನ್ ಸ್ವಿಚ್ ಆಫ್ ಆಗಿತ್ತು ಮತ್ತು ಸಂಸದೀಯ ದಾಖಲೆಯಲ್ಲಿ ಆರೋಪಗಳನ್ನು ಮಂಡಿಸಲು ಅವಕಾಶ ನಿರಾಕರಿಸಲಾಗಿದೆ ಎಂದು ಆರೋಪಿಸಿದರು.

# ಪಿಎಂ ಇಂಟರ್ನ್‌ಶಿಪ್ ಯೋಜನೆ: ಕರ್ನಾಟಕದಲ್ಲಿ 32 ಸಾವಿರಕ್ಕೂ ಹೆಚ್ಚು ಅವಕಾಶ

### ರಾಜ್ಯಸಭೆಯಲ್ಲಿ ಮನ್ಸೂರ್ ಅಲಿ ಖಾನ್, ರಂಜೀತ್ ರಂಜನ್ ಪ್ರಶ್ನೆಗೆ ಕೇಂದ್ರದ ಮಾಹಿತಿ






**ನವದೆಹಲಿ, ಜು.29:** ಕರ್ನಾಟಕದಲ್ಲಿ ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಯೋಜನೆ (ಪಿಎಂಐಎಸ್) ಅಡಿಯಲ್ಲಿ ಮೂರು ಸುತ್ತುಗಳಲ್ಲಿ ಒಟ್ಟು 32,817 ಇಂಟರ್ನ್‌ಶಿಪ್ ಅವಕಾಶಗಳನ್ನು ಪ್ರಕಟಿಸಲಾಗಿದ್ದು, ಸಾವಿರಾರು ಯುವಕರಿಗೆ ಪ್ರಮುಖ ಕಂಪನಿಗಳಲ್ಲಿ ತರಬೇತಿ ಪಡೆಯುವ ಅವಕಾಶ ಕಲ್ಪಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಆದರೆ, ಈ ಯೋಜನೆ ಉದ್ಯೋಗ ನೀಡುವುದಕ್ಕಾಗಿ ಅಲ್ಲ; ಯುವಕರನ್ನು ಉದ್ಯೋಗಕ್ಕೆ ಸಜ್ಜುಗೊಳಿಸುವ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವಾಗಿದೆ ಎಂದು ಸ್ಪಷ್ಟಪಡಿಸಿದೆ.

ರಾಜ್ಯಸಭೆಯಲ್ಲಿ ಸಂಸದರಾದ ಮನ್ಸೂರ್ ಅಲಿ ಖಾನ್ ಹಾಗೂ ರಂಜೀತ್ ರಂಜನ್ ಕೇಳಿದ ಪ್ರಶ್ನೆಗೆ ಕೇಂದ್ರ ಕಾರ್ಪೊರೇಟ್ ವ್ಯವಹಾರಗಳ ರಾಜ್ಯ ಸಚಿವ ಹರ್ಷ್ ಮಲ್ಹೋತ್ರಾ ಲಿಖಿತ ಉತ್ತರ ನೀಡಿದ್ದು, ರಾಜ್ಯವಾರು ಹಾಗೂ ಕಂಪನಿವಾರು ಅಂಕಿ–ಅಂಶಗಳನ್ನು ಪ್ರಕಟಿಸಿದ್ದಾರೆ.

ಕರ್ನಾಟಕದಲ್ಲಿ ಮೊದಲ ಸುತ್ತಿನಲ್ಲಿ 10,022 ಇಂಟರ್ನ್‌ಶಿಪ್ ಅವಕಾಶಗಳು ಪ್ರಕಟವಾಗಿದ್ದು, 23,115 ಅರ್ಜಿಗಳು ಬಂದಿದ್ದವು. 3,098 ಅಭ್ಯರ್ಥಿಗಳಿಗೆ ಅವಕಾಶ ನೀಡಲಾಗಿದ್ದು, 92 ಮಂದಿ ಇಂಟರ್ನ್‌ಶಿಪ್ ಪೂರ್ಣಗೊಳಿಸಿದ್ದಾರೆ. ಎರಡನೇ ಸುತ್ತಿನಲ್ಲಿ 9,928 ಅವಕಾಶಗಳಿಗೆ 12,275 ಅರ್ಜಿಗಳು ಸಲ್ಲಿಕೆಯಾಗಿದ್ದು, 2,409 ಅಭ್ಯರ್ಥಿಗಳಿಗೆ ಅವಕಾಶ ದೊರೆತಿದೆ. ಇದರಲ್ಲಿ 99 ಮಂದಿ ತರಬೇತಿ ಪೂರ್ಣಗೊಳಿಸಿದ್ದಾರೆ.

ಪ್ರಸ್ತುತ ನಡೆಯುತ್ತಿರುವ ಮೂರನೇ ಸುತ್ತಿನಲ್ಲಿ ಕರ್ನಾಟಕದಲ್ಲಿ 12,867 ಇಂಟರ್ನ್‌ಶಿಪ್ ಅವಕಾಶಗಳು ಪ್ರಕಟವಾಗಿದ್ದು, 9,587 ಅರ್ಜಿಗಳು ಬಂದಿವೆ. 1,033 ಅಭ್ಯರ್ಥಿಗಳಿಗೆ ಆಫರ್ ನೀಡಲಾಗಿದ್ದು, 412 ಮಂದಿ ಈಗಾಗಲೇ ಇಂಟರ್ನ್‌ಶಿಪ್‌ಗೆ ಸೇರ್ಪಡೆಯಾಗಿದ್ದಾರೆ. ಮೂರನೇ ಸುತ್ತು ಇನ್ನೂ ಮುಂದುವರಿದಿರುವುದರಿಂದ ತರಬೇತಿ ಪೂರ್ಣಗೊಳಿಸಿದವರ ಸಂಖ್ಯೆ ಇನ್ನೂ ಲಭ್ಯವಿಲ್ಲ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಕರ್ನಾಟಕದ ಕರ್ನಾಟಕ ಬ್ಯಾಂಕ್, ಟೊಯೋಟಾ ಕಿರ್ಲೋಸ್ಕರ್, ಮಂಗಳೂರು ರಿಫೈನರಿ ಮತ್ತು ಪೆಟ್ರೋಕೆಮಿಕಲ್ಸ್ (ಎಂಆರ್‌ಪಿಎಲ್), ಎಂಎಸ್‌ಪಿಎಲ್, ಬಾಗ್ಮನೆ ಡೆವಲಪರ್ಸ್, ಯುನೈಟೆಡ್ ಬ್ರೂವರೀಸ್ ಸೇರಿದಂತೆ ಹಲವು ಕಂಪನಿಗಳು ಈ ಯೋಜನೆಯಲ್ಲಿ ಇಂಟರ್ನ್‌ಶಿಪ್ ಅವಕಾಶಗಳನ್ನು ಒದಗಿಸಿವೆ.

ಇದೇ ವೇಳೆ, ಮೊದಲ ಎರಡು ಸುತ್ತಿನ ಅನುಭವದ ಆಧಾರದ ಮೇಲೆ ಯೋಜನೆಯಲ್ಲಿ ಬದಲಾವಣೆ ಮಾಡಲಾಗಿದ್ದು, ಇಂಟರ್ನ್‌ಶಿಪ್ ಅವಧಿಯನ್ನು 12 ತಿಂಗಳಿಂದ 6 ಅಥವಾ 9 ತಿಂಗಳಿಗೆ ಇಳಿಸಲಾಗಿದೆ. ಮಾಸಿಕ ಭತ್ಯೆಯನ್ನು ರೂ. 5,000ರಿಂದ ರೂ. 9,000ಕ್ಕೆ ಹೆಚ್ಚಿಸಲಾಗಿದೆ. ಜೊತೆಗೆ ವಯೋಮಿತಿ ಹಾಗೂ ಅರ್ಹತಾ ನಿಯಮಗಳಲ್ಲಿ ಸಡಿಲಿಕೆ ನೀಡಲಾಗಿದ್ದು, ಹೆಚ್ಚಿನ ಕಂಪನಿಗಳಿಗೆ ಯೋಜನೆಯಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

## ಹಣದ ಕೊರತೆ: ಲಖನೌದಲ್ಲಿ ಬೃಹತ್ ಬದಲಾಗಿ ಸಣ್ಣ ಮಸೀದಿ ನಿರ್ಮಾಣ

- ಇಂಡೋ–ಇಸ್ಲಾಮಿಕ್ ಕಲ್ಚರಲ್ ಫೌಂಡೇಶನ್ ಟ್ರಸ್ಟ್ ನಿರ್ಧಾರ

**ಲಖನೌ, ಜು.29:** ಅಯೋಧ್ಯೆಯ ಧನ್ನಿಪುರದಲ್ಲಿ ಭವ್ಯ ಬಾಬ್ರಿ ಮಸೀದಿ ನಿರ್ಮಿಸುವ ಯೋಜನೆಗೆ ಭಾರೀ ಹಿನ್ನಡೆಯಾಗಿದ್ದು, ಹಣದ ಕೊರತೆಯಿಂದ ಇಂಡೋ–ಇಸ್ಲಾಮಿಕ್ ಕಲ್ಚರಲ್ ಫೌಂಡೇಶನ್ ಟ್ರಸ್ಟ್ ಬೃಹತ್ ಯೋಜನೆಯನ್ನು ಕೈಬಿಟ್ಟಿದ್ದು ಬದಲಾಗಿ ಸಣ್ಣ ಮಸೀದಿ ನಿರ್ಮಿಸಲು ನಿರ್ಧರಿಸಿದೆ ಎಂದು ವರದಿಯಾಗಿದೆ. ಅಯೋಧ್ಯೆಯ ಧನ್ನಿಪುರದಲ್ಲಿ ಸುಮಾರು 300 ಕೋಟಿ ರೂಪಾಯಿ ವೆಚ್ಚದ ಬೃಹತ್ ಯೋಜನೆಗೆ ಕೇವಲ 1.5 ಕೋಟಿ ದೇಣಿಗೆ ಸಂಗ್ರಹವಾಗಿದೆ. ಹೀಗಾಗಿ ಈಗ ಕೇವಲ 3 ಕೋಟಿ ರೂ. ವೆಚ್ಚದಲ್ಲಿ ಸಣ್ಣ ಮಸೀದಿ ನಿರ್ಮಿಸಲು ಟ್ರಸ್ಟ್ ನಿರ್ಧರಿಸಿದೆ. ಮೂಲಗಳ ಪ್ರಕಾರ, ಮಸೀದಿ, ಆಸ್ಪತ್ರೆ, ಗ್ರಂಥಾಲಯ, ಸಮುದಾಯ ಅಡುಗೆಮನೆ ಮತ್ತು ಇತರ ಸಾರ್ವಜನಿಕ ಸೌಲಭ್ಯಗಳನ್ನು ಒಳಗೊಂಡಂತೆ ಇಡೀ ಯೋಜನೆಗೆ 300 ಕೋಟಿ ರೂ. ವೆಚ್ಚವಾಗಬಹುದು ಎಂದು ಟ್ರಸ್ಟ್ ಅಂದಾಜಿಸಿತ್ತು. ಆದರೆ ಇದುವರೆಗೆ ಕೇವಲ 1.5 ಕೋಟಿ ರೂ.ಗಳ ದೇಣಿಗೆ ಪಡೆದಿರುವುದರಿಂದ ಮಸೀದಿಯ ಗಾತ್ರವನ್ನು ಕಡಿಮೆ ಮಾಡಬೇಕಾಯಿತು. ಆಸ್ಪತ್ರೆ ಮತ್ತು ಇತರ ಸೌಲಭ್ಯಗಳನ್ನು ನಿರ್ಮಿಸುವ ಯೋಜನೆಯನ್ನು ಸಹ ಮುಂದೂಡಬೇಕಾಯಿತು ಎಂದು ಮೂಲಗಳು ತಿಳಿಸಿವೆ.




ರಾಷ್ಟ್ರಪತಿ ದ್ರೌಪದಿ ಮುರ್ಮು ಬುಧವಾರ ನವದೆಹಲಿಯಲ್ಲಿ ಭಾರತೀಯ ಸಾಂಪ್ರದಾಯಿಕ ಕಲಾ ಪ್ರಕಾರಗಳ ಕಲಾವಿದರ ಗುಂಪನ್ನು ಭೇಟಿ ಮಾಡಿ ಅವರ ಕಲಾಕೃತಿಗಳನ್ನು ವೀಕ್ಷಿಸಿದರು.

# ಬಳ್ಳಾರಿ-ವಿಜಯನಗರದಲ್ಲಿ ರಾಷ್ಟ್ರೀಯ ಉಕ್ಕು ಸಂಶೋಧನೆ ಮತ್ತು ನವೋದ್ಯಮ ಕೇಂದ್ರ - ಗ್ರೀನ್ ಸ್ಟೀಲ್ ಶ್ರೇಷ್ಠತಾ ಕೇಂದ್ರ ಸ್ಥಾಪನೆ

### ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸಿಗೆ ಸಂಸದ ಗೋವಿಂದ ಕಾರಜೋಳ ಸ್ಥಾಯಿ ಸಮಿತಿ ಅಧ್ಯಕ್ಷ ಅನುರಾಗ್ ಸಿಂಗ್ ಠಾಕೂರ್‌ಗೆ ಮನವಿ



ನವದೆಹಲಿ, ಜು.29: ಕರ್ನಾಟಕದ ಬಳ್ಳಾರಿ-ವಿಜಯನಗರ ಪ್ರದೇಶದಲ್ಲಿ ರಾಷ್ಟ್ರೀಯ ಉಕ್ಕು ಸಂಶೋಧನೆ ಮತ್ತು ನವೋದ್ಯಮ ಕೇಂದ್ರ ಹಾಗೂ ಗ್ರೀನ್ ಸ್ಟೀಲ್ ಶ್ರೇಷ್ಠತಾ ಕೇಂದ್ರವನ್ನು ಸ್ಥಾಪಿಸಲು ಕೇಂದ್ರ ಉಕ್ಕು ಸಚಿವಾಲಯಕ್ಕೆ ಶಿಫಾರಸು ಮಾಡುವಂತೆ ಲೋಕಸಭಾ ಸದಸ್ಯ ಗೋವಿಂದ ಎಂ. ಕಾರಜೋಳ ಅವರು ಕಲ್ಲಿದ್ದಲು, ಗಣಿ ಮತ್ತು ಉಕ್ಕು ಸಂಬಂಧಿತ ಸಂಸತ್ತಿನ ಸ್ಥಾಯಿ ಸಮಿತಿಯ ಅಧ್ಯಕ್ಷ ಅನುರಾಗ್ ಸಿಂಗ್ ಠಾಕೂರ್ ಅವರಿಗೆ ಪತ್ರ ಬರೆದು ಮನವಿ ಮಾಡಿದ್ದಾರೆ.

ತಮ್ಮ ಪತ್ರದಲ್ಲಿ ಕಾರಜೋಳ ಅವರು ಕರ್ನಾಟಕವು ದೇಶದ ಪ್ರಮುಖ ಕಬ್ಬಿಣದ ಅಯಸ್ಕಾಂತ ಮತ್ತು ಉಕ್ಕು ತಯಾರಿಕಾ ರಾಜ್ಯವಾಗಿದ್ದು, ಬಳ್ಳಾರಿ-ವಿಜಯನಗರ ಉಕ್ಕು ವಲಯವು ದೇಶದ ಅತಿದೊಡ್ಡ ಸಮಗ್ರ ಉಕ್ಕು ಉತ್ಪಾದನಾ ಕೇಂದ್ರಗಳಲ್ಲಿ ಒಂದಾಗಿದೆ ಎಂದು ತಿಳಿಸಿದ್ದಾರೆ.

ಈ ಪ್ರದೇಶವು ದೇಶದ ಉಕ್ಕು ಉತ್ಪಾದನೆ, ರಫ್ತು, ಕೈಗಾರಿಕಾ ಬೆಳವಣಿಗೆ ಮತ್ತು ಉದ್ಯೋಗ ಸೃಷ್ಟಿಗೆ ಮಹತ್ವದ ಕೊಡುಗೆ ನೀಡುತ್ತಿರುವುದರಿಂದ ಉನ್ನತ ಮಟ್ಟದ ಉಕ್ಕು ಸಂಶೋಧನೆ ಮತ್ತು ನವೋದ್ಯಮ ಸಂಸ್ಥೆಗಳನ್ನು ಸ್ಥಾಪಿಸಲು ಅತ್ಯಂತ ಸೂಕ್ತವಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಭಾರತವು ರಾಷ್ಟ್ರೀಯ ಉಕ್ಕು ನೀತಿಯಡಿ ಉಕ್ಕು ಉತ್ಪಾದನೆಯನ್ನು ಹೆಚ್ಚಿಸುವ ಮಹತ್ವಾಕಾಂಕ್ಷಿ ಗುರಿ ಹೊಂದಿದ್ದು, ಪರಿಸರಸ್ನೇಹಿ ಮತ್ತು ತಾಂತ್ರಿಕವಾಗಿ ಮುಂದುವರಿದ ಉಕ್ಕು ಉತ್ಪಾದನೆಯಲ್ಲಿ ಜಾಗತಿಕ ನಾಯಕತ್ವ ಸಾಧಿಸಲು ಪ್ರಯತ್ನಿಸುತ್ತಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕದಲ್ಲಿ ಇಂತಹ ರಾಷ್ಟ್ರೀಯ ಮಟ್ಟದ ಸಂಶೋಧನಾ ಸಂಸ್ಥೆಗಳನ್ನು ಸ್ಥಾಪಿಸುವುದರಿಂದ ಸ್ವದೇಶಿ ತಂತ್ರಜ್ಞಾನ ಅಭಿವೃದ್ಧಿಗೆ ಉತ್ತೇಜನ ದೊರೆತು, ಜಾಗತಿಕ ಮಟ್ಟದ ಉಕ್ಕು ತಂತ್ರಜ್ಞಾನ ಅಭಿವೃದ್ಧಿಗೆ ವೇಗ ಸಿಗುತ್ತದೆ ಎಂದು ಅವರು ಹೇಳಿದ್ದಾರೆ.

ಪ್ರಸ್ತಾವಿತ ಕೇಂದ್ರಗಳಲ್ಲಿ ಹೈಡ್ರೋಜನ್ ಆಧಾರಿತ ಉಕ್ಕು ಉತ್ಪಾದನೆ, ಕಾರ್ಬನ್ ಹಿಡಿತ-ಬಳಕೆ-ಸಂಗ್ರಹಣೆ, ಕೃತಕ ಬುದ್ಧಿಮತ್ತೆ, ಡಿಜಿಟಲ್ ಮ್ಯಾನುಫ್ಯಾಕ್ಚರಿಂಗ್, ಕಡಿಮೆ ಗುಣಮಟ್ಟದ ಕಬ್ಬಿಣದ ಅಯಸ್ಕಾಂತ ಶೋಧನೆ, ವಲಯ ಆರ್ಥಿಕತೆ, ತ್ಯಾಜ್ಯ ಬಳಕೆ, ಉನ್ನತ ದರ್ಜೆಯ ಉಕ್ಕು ಉತ್ಪನ್ನಗಳು ಮತ್ತು ಇಂಧನ ಉಳಿತಾಯ ತಂತ್ರಜ್ಞಾನಗಳ ಕುರಿತು ಸಂಶೋಧನೆ ನಡೆಸಬಹುದು ಎಂದು ಅವರು ಸೂಚಿಸಿದ್ದಾರೆ.

ಜೊತೆಗೆ ಕೈಗಾರಿಕೆ, ಉನ್ನತ ಶಿಕ್ಷಣ ಸಂಸ್ಥೆಗಳು, ಸಂಶೋಧನಾ ಸಂಸ್ಥೆಗಳು ಮತ್ತು ಸ್ಟಾರ್ಟ್‌ಅಪ್‌ಗಳ ನಡುವಿನ ಸಹಕಾರವನ್ನು ಬಲಪಡಿಸಿ ಹೊಸ ತಂತ್ರಜ್ಞಾನಗಳ ವಾಣಿಜ್ಯೀಕರಣಕ್ಕೆ ನೆರವಾಗಬಹುದು ಎಂದಿದ್ದಾರೆ.

ಈ ಯೋಜನೆ ಕೇವಲ ಬಳ್ಳಾರಿ-ವಿಜಯನಗರಕ್ಕಷ್ಟೇ ಸೀಮಿತವಾಗದೆ, ಕೊಪ್ಪಳ, ರಾಯಚೂರು, ಕಲಬುರಗಿ, ಯಾದಗಿರಿ ಮತ್ತು ಬೀದರ್ ಸೇರಿದಂತೆ ಸಂಪೂರ್ಣ ಕಲ್ಯಾಣ ಕರ್ನಾಟಕ ಪ್ರದೇಶದ ಆರ್ಥಿಕ ಮತ್ತು ಕೈಗಾರಿಕಾ ಅಭಿವೃದ್ಧಿಗೆ ಮಹತ್ತರ ಉತ್ತೇಜನ ನೀಡಲಿದೆ ಎಂದು ಕಾರಜೋಳ ಹೇಳಿದ್ದಾರೆ. ಇದರಿಂದ ಉನ್ನತ ಕೌಶಲ್ಯಯುತ ಉದ್ಯೋಗಗಳು ಸೃಷ್ಟಿಯಾಗುವುದರ ಜೊತೆಗೆ ತಾಂತ್ರಿಕ ಶಿಕ್ಷಣ, ಸಂಶೋಧನೆ, ಹೂಡಿಕೆ ಮತ್ತು ಉದ್ಯಮಶೀಲತೆಗೂ ಉತ್ತೇಜನ ಸಿಗಲಿದೆ ಎಂದು ಅವರು ತಿಳಿಸಿದ್ದಾರೆ.

ತಮ್ಮ ಮನವಿಯಲ್ಲಿ ಅವರು ಕೇಂದ್ರ ಉಕ್ಕು ಸಚಿವಾಲಯಕ್ಕೆ ಕೆಳಗಿನ ಶಿಫಾರಸುಗಳನ್ನು ಮಾಡುವಂತೆ ಸಂಸತ್ತಿನ ಸ್ಥಾಯಿ ಸಮಿತಿಯನ್ನು ಕೋರಿದ್ದಾರೆ:

- ಬಳ್ಳಾರಿ-ವಿಜಯನಗರದಲ್ಲಿ ರಾಷ್ಟ್ರೀಯ ಉಕ್ಕು ಸಂಶೋಧನೆ ಮತ್ತು ನವೋದ್ಯಮ ಕೇಂದ್ರ ಸ್ಥಾಪನೆ.
- ಹೈಡ್ರೋಜನ್ ಆಧಾರಿತ ಮತ್ತು ಕಡಿಮೆ ಕಾರ್ಬನ್ ಉಕ್ಕು ತಂತ್ರಜ್ಞಾನಗಳಿಗಾಗಿ ಗ್ರೀನ್ ಸ್ಟೀಲ್ ಶ್ರೇಷ್ಠತಾ ಕೇಂದ್ರ ಸ್ಥಾಪನೆ.
- ಪರೀಕ್ಷೆ, ಪ್ರಮಾಣೀಕರಣ, ತಂತ್ರಜ್ಞಾನ ಇನ್‌ಕ್ಯೂಬೇಶನ್ ಮತ್ತು ಕೌಶಲ್ಯಾಭಿವೃದ್ಧಿ ಸೌಲಭ್ಯಗಳ ನಿರ್ಮಾಣ.
- ಐಐಎಸ್‌ಸಿ ಬೆಂಗಳೂರು, ಐಐಟಿಗಳು, ಎನ್‌ಐಟಿ ಸುರತ್ಕಲ್, ಸಿಎಸ್‌ಐಆರ್ ಪ್ರಯೋಗಾಲಯಗಳು ಮತ್ತು ಕರ್ನಾಟಕದ ಉಕ್ಕು ಕೈಗಾರಿಕೆಗಳೊಂದಿಗೆ ಸಂಯುಕ್ತ ಸಂಶೋಧನೆಗೆ ಉತ್ತೇಜನ.
- ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸಂಶೋಧನೆ, ನವೋದ್ಯಮ ಮತ್ತು ಕೌಶಲ್ಯಾಭಿವೃದ್ಧಿಗೆ ವಿಶೇಷ ಕಾರ್ಯಕ್ರಮ ಆರಂಭಿಸುವುದು.
- ಈ ಯೋಜನೆಗಳು ಭಾರತವನ್ನು ಉಕ್ಕು ತಂತ್ರಜ್ಞಾನ ಮತ್ತು ಗ್ರೀನ್ ಸ್ಟೀಲ್ ಕ್ಷೇತ್ರದಲ್ಲಿ ಜಾಗತಿಕ ನಾಯಕತ್ವದತ್ತ ಕೊಂಡೊಯ್ಯಲಿದ್ದು, ಆತ್ಮನಿರ್ಭರ ಭಾರತ, ಮೇಕ್ ಇನ್ ಇಂಡಿಯಾ, ರಾಷ್ಟ್ರೀಯ ಗ್ರೀನ್ ಹೈಡ್ರೋಜನ್ ಮಿಷನ್, ಪಿಎಂ ಗತಿ ಶಕ್ತಿ ಮತ್ತು ವಿಕಸಿತ ಭಾರತ 2047 ಗುರಿಗಳನ್ನು ಸಾಧಿಸಲು ಸಹಕಾರಿಯಾಗಲಿವೆ ಎಂದು ಶ್ರೀ ಕಾರಜೋಳ ವಿಶ್ವಾಸ ವ್ಯಕ್ತಪಡಿಸಿದ್ದಾರೆ.
- ಈ ಮಹತ್ವಾಕಾಂಕ್ಷಿ ಯೋಜನೆಯನ್ನು ಸಂಸತ್ತಿನ ಸ್ಥಾಯಿ ಸಮಿತಿ ಆದ್ಯತೆಯಿಂದ ಪರಿಗಣಿಸಿ ಕೇಂದ್ರ ಉಕ್ಕು ಸಚಿವಾಲಯಕ್ಕೆ ಅನುಕೂಲಕರ ಶಿಫಾರಸು ಮಾಡಲಿದೆ ಎಂಬ ನಿರೀಕ್ಷೆಯನ್ನು ಅವರು ವ್ಯಕ್ತಪಡಿಸಿದ್ದಾರೆ ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದ್ದಾರೆ.

# ನೀರು ಹರಿಸಬೇಕೆಂಬ ಆದೇಶ ಕರ್ನಾಟಕದ ಪಾಲಿಗೆ ಮರಣಶಾಸನ: ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ



### ರಾಜ್ಯ ಸಂಕಷ್ಟದಲ್ಲಿರುವಾಗ ಕಾವೇರಿ ನೀರು ನಿಯಂತ್ರಣ ಸಮಿತಿಯಿಂದ ಅವೈಜ್ಞಾನಿಕ ಆದೇಶ

**ಹಾಸನ, ಜು.29**: ಕಾವೇರಿ ನೀರು ನಿಯಂತ್ರಣ ಸಮಿತಿ ತಮಿಳುನಾಡಿಗೆ ಹದಿನೈದು ದಿನಗಳ ಕಾಲ ನಿತ್ಯವೂ 3,500 ಕ್ಯೂಸೆಕ್ ನೀರು ಹರಿಸಬೇಕು ಎಂದು ನೀಡುವ ಆದೇಶವು ರಾಜ್ಯದ ಪಾಲಿಗೆ ಮರಣಶಾಸನವಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅಭಿಪ್ರಾಯಪಟ್ಟರು.

ಜಿಲ್ಲೆಯ ಹರದನಹಳ್ಳಿಯ ಮಾವಿನಕೆರೆ ರಂಗನಾಥ ಸ್ವಾಮಿ ಬೆಟ್ಟದ ತಪ್ಪಲಿನಲ್ಲಿರುವ ಚನ್ನಮ್ಮ ಅವರ ಸಮಾಧಿ ಬಳಿ ಮಾಧ್ಯಮಗಳ ಜತೆ ಮಾತನಾಡಿದ ಸಚಿವರು; ರಾಜ್ಯದಲ್ಲಿ ಒಂದೆಡೆ ಬರ ಉಂಟಾಗಿದೆ. ಇನ್ನೊಂದು ಕಡೆ ಮಳೆ ಇಲ್ಲದೆ ಜಲಾಶಗಳು ಭರ್ತಿ ಆಗಿಲ್ಲ. ರೈತರಿಗೂ ನೀರು ಕೊಡಲಾಗದ ಸಂಕಷ್ಟದಲ್ಲಿದೆ ರಾಜ್ಯ. ಕುಡಿಯುವ ಉದ್ದೇಶಕ್ಕೆ ನೀರು ಕೊರತೆ ಆಗಬಾರದು. ಇಂತಹ ಕಠಿಣ ಸಂದರ್ಭದಲ್ಲಿ ಸಮಿತಿ ನೆರೆ ರಾಜ್ಯಕ್ಕೆ ನೀರು ಹರಿಸಿ ಎಂದು ರಾಜ್ಯಕ್ಕೆ ಆದೇಶ ನೀಡುವುದು ಅವೈಜ್ಞಾನಿಕ ಎಂದರು.

ಮುಂದಿನ ದಿನಗಳಲ್ಲಿ ಮಳೆ ಆಗದಿದ್ದರೆ ಪರಿಸ್ಥಿತಿ ಇನ್ನೂ ಬಿಗಡಾಯಿಸುತ್ತಿದೆ. ಈ ಆದೇಶದ ವಿರುದ್ಧ ಎಲ್ಲರೂ ಒಗ್ಗಟ್ಟಾಗಿ ಹೋರಾಟ ನಡೆಸಬೇಕಾಗುತ್ತದೆ. ಈಗಾಗಲೇ ರೈತರು, ಸಂಘ ಸಂಸ್ಥೆಗಳು ವಿರೋಧ ವ್ಯಕ್ತಪಡಿಸಿ ಹೋರಾಟಕ್ಕೆ ಇಳಿದಿದ್ದಾರೆ. ನೀರು ಇಲ್ಲದ ಸಮಯದಲ್ಲಿ ತಮಿಳುನಾಡಿನವರು ಒತ್ತಡ ಹಾಕುತ್ತಿದ್ದಾರೆ. ಆದರೆ ನಮ್ಮ ನಾಡಿನ ಪರಿಸ್ಥಿತಿಯನ್ನು ಕಾವೇರಿ ಪ್ರಾಧಿಕಾರಕ್ಕೆ ಅರ್ಥ ಮಾಡಿಸಬೇಕು. ನಮ್ಮ ಕಾನೂನು ಪಂಡಿತರು, ಅಧಿಕಾರಿಗಳು ಸಮರ್ಪಕವಾಗಿ ವಾದ ಮಂಡಿಸಿಲ್ಲ ಎಂದು ಹೇಳಲಾರೆ. ಆದರೆ ನೀರಿನ ನಿರ್ವಹಣೆಯಲ್ಲಿ ನಾವೆಷ್ಟು ಉತ್ತಮವಾಗಿ ಕೆಲಸ ಮಾಡಿದ್ದೇವೆ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ ಎಂದು ಹೇಳಿದರು.

### ಎಚ್‌ಡಿಕೆ ಅಸಮಾಧಾನ

ಕಳೆದ ವರ್ಷ ಮೂರು ಬಾರಿ ನಮ್ಮ ಜಲಾಶಯಗಳು ತುಂಬಿದ್ದವು. ಆ ಸಂದರ್ಭ ಕೆರೆಗಳನ್ನು ತುಂಬಿಸುವಂತಹ ಕೆಲಸವನ್ನು ನಾವು ಮುನ್ನೆಚ್ಚರಿಕೆಯಿಂದ ಮಾಡಬೇಕಾಗಿತ್ತು. ನೀರಾವರಿ ಇಲಾಖೆಯ ಅಧಿಕಾರಿಗಳು ಮತ್ತು ರಾಜ್ಯ ಸರಕಾರ ಸಕಾಲಿಕ ಕ್ರಮ ವಹಿಸಿದ್ದರೆ ಕೆರೆಗಳಲ್ಲಿ ನೀರನ್ನು ಹಿಡಿದಿಟ್ಟುಕೊಳ್ಳಬಹುದಿತ್ತು. ಉತ್ತಮ ಮಳೆಯಾಗಿ ಜಲಾಶಯಗಳು ಭರ್ತಿಯಾದಾಗ ಕೆರೆಗಳಿಗೆ ನೀರು ತುಂಬಿಸದೆ ನೀರನ್ನು ಹೊರಗೆ ಬಿಟ್ಟರು. ತಮಿಳುನಾಡು ರಾಜ್ಯ ಕೂಡ ಮಳೆಯಿಂದ ದೊರೆತ ಹೆಚ್ಚುವರಿ ನೀರನ್ನು ಬಳಕೆ ಮಾಡಿಕೊಳ್ಳದೆ ಸಮುದ್ರಕ್ಕೆ ಬಿಟ್ಟಿತು. ಅದರ ಫಲವನ್ನು ಈಗ ಅನುಭವಿಸುತ್ತಿದ್ದೇವೆ ಎಂದು ಎಚ್.ಡಿ. ಕುಮಾರಸ್ವಾಮಿ ಅವರು ಅಸಮಾಧಾನ ವ್ಯಕ್ತಪಡಿಸಿದರು. ಪದೇಪದೇ ಇಂಥ ಬಿಕ್ಕಟ್ಟು ಎದುರಾಗುತ್ತಿದ್ದರೂ ಎರಡು ರಾಜ್ಯಗಳು ಪಾಠ ಕಲಿಯುತ್ತಿಲ್ಲ. ಹೆಚ್ಚಿನ ಮಳೆಯಾದ ವರ್ಷದಲ್ಲಿ ನಾವು ನೀರನ್ನು ಹಿಡಿದಿಟ್ಟುಕೊಳ್ಳಬೇಕು. ಅಂತಹ ಜವಾಬ್ದಾರಿಯನ್ನು ನಿರ್ವಹಿಸದೆ ನಾವು ಎಡವಿದ್ದೇವೆ ಎಂದು ಹೇಳಿದರು.

### ಕೆರೆ ತುಂಬಿಸುವ ಯೋಜನೆ ರೂಪಿಸಲು ಸಲಹೆ

ನಮಗೆ ಹತ್ತು ವರ್ಷದ ಸರಾಸರಿಯಲ್ಲಿ ಐದಾರು ವರ್ಷ ಉತ್ತಮ ಮಳೆಯಾಗುತ್ತದೆ. ಉಳಿದ ಮೂರು ನಾಲ್ಕು ವರ್ಷಗಳು ಈ ರೀತಿಯ ಬರ ಪರಿಸ್ಥಿತಿಯನ್ನು ಎದುರಿಸುತ್ತೇವೆ. ಈ ಹಿಂದಿನ ಅನುಭವಗಳು ಮತ್ತು ತಮಿಳುನಾಡಿನ ರೈತರ ಒತ್ತಡವನ್ನು ಈಗಾಗಲೇ ಗಮನಿಸಿದ್ದೇವೆ. ಮಳೆಯಾದ ಅವಧಿಯಲ್ಲಿ ನಾವು ಕೆರೆಗಳನ್ನು ತುಂಬಿಸುವುದನ್ನು ಮಾಡಬೇಕಾಗಿತ್ತು. ಇಂಥ ಕಾರ್ಯಕ್ರಮಗಳನ್ನು ಸರಕಾರ ರೂಪಿಸಬೇಕು ಎಂದು ಕೇಂದ್ರ ಸಚಿವರು ಸಲಹೆ ಮಾಡಿದರು. ನಾವು ಒಕ್ಕೂಟ ವ್ಯವಸ್ಥೆಯಲ್ಲಿ ಇದ್ದೇವೆ. ವಾಸ್ತವವಾಗಿ ನೋಡುವುದಾದರೆ ಹಲವು ವರ್ಷಗಳಿಂದ ನಮ್ಮ ರಾಜ್ಯಕ್ಕೆ ನೀರಿನ ವಿಷಯದಲ್ಲಿ ಅನ್ಯಾಯವಾಗಿದೆ. ಕೇವಲ ಟೀಕೆ, ಪ್ರತಿ ಟೀಕೆಗೆ ಆಸ್ಪದ ಕೊಡದೆ ಮುನ್ನೆಚ್ಚರಿಕೆಯಿಂದ ನೀರಿನ ಬಳಕೆಗೆ ಆದ್ಯತೆ ಕೊಡಬೇಕು. ನಮ್ಮ ರೈತರು ನಮ್ಮ ನಾಡಿನ ಜನತೆಗೆ ಅನಾನುಕೂಲ ಆಗದ ರೀತಿಯಲ್ಲಿ ಕ್ರಮ ವಹಿಸಬೇಕು. ಕಾನೂನು ಪರಿಧಿ ಒಳಗಡೆ ನಾವು ಯಾವ ಕ್ರಮ ವಹಿಸಬೇಕು ಎಂದು ಎಚ್.ಡಿ. ಕುಮಾರಸ್ವಾಮಿ ಕಿವಿಮಾತು ಹೇಳಿದರು.

## ನೀರು ಹರಿಸಲು ನಕಾರ, ವಿಧಾನಸೌಧದಲ್ಲಿ ರಾಮಲಿಂಗಾರೆಡ್ಡಿ ತುರ್ತು ಸಭೆ

ಬೆಂಗಳೂರು, ಜು.29: ಕಾವೇರಿ ನೀರು ಹಂಚಿಕೆ ವಿವಾದ ಮತ್ತೊಮ್ಮೆ ತೀವ್ರಗೊಂಡಿದ್ದು, ಕಾವೇರಿ ನೀರು ನಿಯಂತ್ರಣ ಸಮಿತಿ ನೀಡಿರುವ ಆದೇಶದಂತೆ ತಮಿಳುನಾಡಿಗೆ ನೀರು ಬಿಡುಗಡೆ ಮಾಡಲು ಕರ್ನಾಟಕ ಸರ್ಕಾರ ನಿರಾಕರಿಸಿದೆ. ರಾಜ್ಯದಲ್ಲಿ ಮಳೆಯ ಕೊರತೆ ಹಾಗೂ ಜಲಾಶಯಗಳಲ್ಲಿ ನೀರಿನ ಅಭಾವವನ್ನು ಉಲ್ಲೇಖಿಸಿರುವ ಸರ್ಕಾರ, ಈ ಆದೇಶದ ವಿರುದ್ಧ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮುಂದೆ ಮೇಲ್ಮನವಿ ಸಲ್ಲಿಸಲು ತೀರ್ಮಾನಿಸಿದೆ. ವಿಧಾನಸೌಧದಲ್ಲಿ ಸಚಿವರ ಕೊಠಡಿಯಲ್ಲಿ ಜಲಸಂಪನ್ಮೂಲ ಸಚಿವ ರಾಮಲಿಂಗಾ ರೆಡ್ಡಿ ತುರ್ತು ಸಭೆ ನಡೆಸಿದ್ದು, ಮೀಟಿಂಗ್ನಲ್ಲಿ ಅಫಘಖಅ ಆದೇಶದ ವಿರುದ್ಧ ಸಿಡಬ್ಲ್ಯುಎಂಎಗೆ ಮೇಲ್ಮನವಿ ಸಲ್ಲಿಸಲು ನಿರ್ಧರಿಸಲಾಗಿದೆ .ಸರ್ಕಾರದ ಪ್ರಕಾರ, ಕಾವೇರಿ ಜಲಾನಯನ ಪ್ರದೇಶದಲ್ಲಿ ಈ ವರ್ಷ ನಿರೀಕ್ಷಿತ ಪ್ರಮಾಣದ ಮಳೆ ಸುರಿದಿಲ್ಲ. ಪರಿಣಾಮವಾಗಿ ಕೆಆರ್‌ಎಸ್, ಕಬಿನಿ, ಹಾರಂಗಿ ಹಾಗೂ ಹೇಮಾವತಿ ಜಲಾಶಯಗಳಿಗೆ ನೀರಿನ ಒಳಹರಿವು ಕಡಿಮೆಯಾಗಿದ್ದು, ಮೊದಲು ರಾಜ್ಯದ ಕುಡಿಯುವ ನೀರು ಹಾಗೂ ರೈತರ ಬೆಳೆಗಳಿಗೆ ಆದ್ಯತೆ ನೀಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದೇ ಕಾರಣದಿಂದ ತಮಿಳುನಾಡಿಗೆ ನೀರು ಹರಿಸಲು ಸಾಧ್ಯವಿಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿದೆ.

# ಬರದ ಛಾಯೆ ಆವರಿಸಿರುವಾಗ ತಮಿಳುನಾಡಿಗೆ ನೀರು ಹರಿಸಿ ಎನ್ನುವುದು ಸರಿಯಲ್ಲ: ಪರಂ

### ಸಿಡಬ್ಲ್ಯುಎಂಎ ಆದೇಶಕ್ಕೆ ಡಿಸಿಎಂ ಡಾ.ಜಿ. ಪರಮೇಶ್ವರ್ ಪ್ರತಿಕ್ರಿಯೆ

**ಬೆಂಗಳೂರು, ಜು.29:** ಕರ್ನಾಟಕದಲ್ಲಿ ಬರದ ಛಾಯೆ ಆವರಿಸಿರುವ ಈ ಸಂದರ್ಭದಲ್ಲಿ ತಮಿಳುನಾಡಿಗೆ 3,500 ಕ್ಯುಸೆಕ್ ಕಾವೇರಿ ನೀರನ್ನು ಹರಿಸಬೇಕು ಎಂದು ಹೇಳುವುದು ಸರಿಯಲ್ಲ. ಕುಡಿಯುವುದಕ್ಕೇ ನೀರು ಇಲ್ಲದಿರುವಾಗ ಈ ಆದೇಶ ಸರಿಯಲ್ಲ ಎಂದು ಡಿಸಿಎಂ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.

ನಗರದ ಸದಾಶಿವನಗರದ ನಿವಾಸದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಸರ್ವಪಕ್ಷ ಸಭೆಯನ್ನು ಕರೆಯುವುದಾಗಿ ಪ್ರಸ್ತಾಪಿಸಿದ್ದಾರೆ. ನೀರು ಇದ್ದಾಗ ತಮಿಳುನಾಡಿನವರು ಕೇಳದಿದ್ದರೂ ಕೊಡುತ್ತೇನೆ. ಕೆಲವೊಮ್ಮೆ ನಿಗದಿಗಿಂತ ಹೆಚ್ಚು ನೀರು ಕೊಟ್ಟಿದ್ದೇವೆ. ನೀರು ಇಲ್ಲದಿದ್ದಾಗ 3,500 ಟಿಎಂಸಿ ನೀರನ್ನು ಕೊಡಬೇಕು ಎಂದು ಹೇಳುವುದು ಎಷ್ಟು ಸರಿ ಎಂದು ಪ್ರಶ್ನಿಸಿದ್ದಾರೆ.

ಆಗಸ್ಟ್ 3ರಂದು ತಮಿಳುನಾಡು ಮುಖ್ಯಮಂತ್ರಿಗಳು ಬೆಂಗಳೂರಿಗೆ ಬರುವ ಸಾಧ್ಯತೆ ಇದೆ. ಅದು ಇನ್ನೂ ಖಚಿತವಾಗಿಲ್ಲ. ಒಂದು ವೇಳೆ ಬಂದರೆ, ಅವರ ಜೊತೆಗೂ ಈ ಬಗ್ಗೆ ಪ್ರಸ್ತಾಪಿಸುತ್ತೇವೆ. ಇಂದು ಮುಖ್ಯಮಂತ್ರಿಗಳು ದೆಹಲಿಯಲ್ಲಿ ಕಾನೂನು ತಜ್ಞರ ಜೊತೆ ಸಭೆ ನಡೆಸಿ ಒಂದು ನಿರ್ಧಾರವನ್ನು ಕೈಗೊಳ್ಳಬಹುದು ಎಂದು ಪರಮೇಶ್ವರ್ ತಿಳಿಸಿದರು.

**ಹೋರಾಟಗಾರರ ಆತಂಕ ಅರಿವಿದೆ**

ಕಾವೇರಿ ಹೋರಾಟಕ್ಕೆ ಕನ್ನಡಪರ ಸಂಘಟನೆಗಳು ಕರೆ ಕೊಟ್ಟಿರುವ ಬಗ್ಗೆ ಪ್ರತಿಕ್ರಿಯಿಸಿ, ಸ್ವಾಭಾವಿಕವಾಗಿ ಮಂಡ್ಯ ಮತ್ತು ಸುತ್ತಲಿನ ಭಾಗಗಳಲ್ಲಿ ರೈತ ಸಂಘಟನೆಗಳು, ಬೇರೆ ಬೇರೆ ಸಂಘ ಸಂಸ್ಥೆಗಳು ಪ್ರತಿಭಟನೆಯನ್ನು ಮಾಡುತ್ತಾರೆ. ನಿನ್ನೆ ಕೂಡ ಪ್ರತಿಭಟನೆ ಮಾಡಿದ್ದಾರೆ. ನೀರು ಇಲ್ಲ ಅನ್ನೋದು ಅವರಿಗೂ ಗೊತ್ತಿದೆ. ಸರ್ಕಾರ ಒಂದು ವೇಳೆ ಇರುವ ನೀರನ್ನು ಕೊಟ್ಟುಬಿಡಬಹುದು ಎಂಬ ಆತಂಕ ಅವರಿಗೆ ಇದೆ. ಹಾಗಾಗಿ ಪ್ರತಿಭಟಿಸುತ್ತಿದ್ದಾರೆ ಎಂದು ಹೇಳಿದರು.




ಆಗಸ್ಟ್ ತಿಂಗಳ ಕೊನೆಯವರೆಗೂ ಮಳೆ ಪರಿಸ್ಥಿತಿ ಅವಲೋಕಿಸಿ ಬಳಿಕ ಮತ್ತೊಮ್ಮೆ ವರದಿಯನ್ನು ಸಲ್ಲಿಸುತ್ತೇವೆ. ಸಾಮಾನ್ಯವಾಗಿ ವರದಿಯನ್ನು ಆಗಸ್ಟ್‌ನಲ್ಲಿ ಸಲ್ಲಿಸಿದ ನಂತರ, ಸೆಪ್ಟೆಂಬರ್‌ನಲ್ಲಿ ಕೇಂದ್ರದ ತಂಡ ಭೇಟಿ ನೀಡಿ ಪರಿಶೀಲನೆ ನಡೆಸುತ್ತದೆ. ಆ ಬಳಿಕ ನಾವು ಕೇಳಿರುವ ನೆರವಿನ ಮೊತ್ತವನ್ನು ಪರಿಶೀಲಿಸಿ, ಎಷ್ಟು ಅನುದಾನ ನೀಡಬೇಕು ಎಂಬುದನ್ನು ನಿರ್ಧರಿಸುತ್ತಾರೆ.
-ಡಾ.ಜಿ.ಪರಮೇಶ್ವರ್, ಉಪಮುಖ್ಯಮಂತ್ರಿ

ಮೇಕೆದಾಟು ಯೋಜನೆ ವಿರೋಧಿಸಿ ತಮಿಳುನಾಡು ಸರ್ಕಾರ ಕೇಂದ್ರಕ್ಕೆ ಪತ್ರ ಬರೆದಿರುವ ಕುರಿತ ಮಾಧ್ಯಮದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಡಿಸಿಎಂ, ಮೇಕೆದಾಟು ವಿಚಾರದಲ್ಲಿ ಕರ್ನಾಟಕಕ್ಕೆ ಕಾನೂನುಬದ್ಧ ಹಕ್ಕು ಇದೆ, ತಮಿಳುನಾಡಿನ ಸಮ್ಮತಿಯ ಅಗತ್ಯವಿಲ್ಲ ಎಂದು ಕೋರ್ಟ್ ಹೇಳಿದೆ. ಪತ್ರ ಬರೆಯಲಿ, ಅದಕ್ಕೆ ನಮ್ಮ ಆಕ್ಷೇಪ ಇಲ್ಲ. ಆದರೆ, ಪ್ರಧಾನ ಮಂತ್ರಿಗಳು ಕೋರ್ಟ್‌ಗಿಂತ ಮೇಲೆ ಇರುವುದಿಲ್ಲ. ಕೋರ್ಟ್ ನೀಡುವ ತೀರ್ಮಾನವೇ ಅಂತಿಮ ಎಂದರು.

ರಾಜ್ಯದಲ್ಲಿನ ಪ್ರಸ್ತುತ ಬರ ಪರಿಸ್ಥಿತಿಯ ಕುರಿತು ಕೇಂದ್ರ ಸರ್ಕಾರಕ್ಕೆ ಸಮಗ್ರ ವರದಿಯನ್ನು ಸಲ್ಲಿಸಲಾಗಿದೆ. ಅದರಲ್ಲಿ ಪ್ರಮುಖವಾಗಿ ಕರ್ನಾಟಕದ ಬರಪೀಡಿತ ಪ್ರದೇಶಗಳನ್ನು ಪ್ರಕೃತಿ ವಿಕೋಪದಡಿ ಘೋಷಿಸುವಂತೆ ಮನವಿ ಮಾಡಲಾಗಿದೆ. ಬರ ಘೋಷಣೆಗೆ ಕೇಂದ್ರ ಸರ್ಕಾರ ನಿಗದಿಪಡಿಸಿರುವ ಕೆಲವು ಮಾನದಂಡಗಳನ್ನು ಸಡಿಲಗೊಳಿಸುವಂತೆ ಕೋರಿದ್ದೇವೆ. ಪ್ರಸ್ತುತ ಜಾರಿಯಲ್ಲಿರುವ ಮಾನದಂಡಗಳ ಕಾರಣ, ಶೇ.80ರವರೆಗೆ ಮಳೆ ಕೊರತೆ ಎದುರಿಸುತ್ತಿರುವ ಕೆಲವು ತಾಲ್ಲೂಕುಗಳನ್ನು ಬರಪೀಡಿತವೆಂದು ಘೋಷಿಸಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಮಾನದಂಡಗಳನ್ನು ಸಡಿಲಗೊಳಿಸುವಂತೆ ಹೇಳಿದ್ದೇವೆ ಎಂದರು.

**ನೆರೆ ರಾಜ್ಯಗಳು ಚರ್ಚೆ ಮೂಲಕ ಸಮಸ್ಯೆ ಬಗೆಹರಿಸಿಕೊಂಡರೆ ಬಿಜೆಪಿ ಆಕ್ಷೇಪವೇಕೆ?**

ಇತ್ತೀಚೆಗೆ ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಲಾದ ಗೇಟುಗಳ ಲೋಕಾರ್ಪಣೆ ಸಮಾರಂಭಕ್ಕೆ ಚಂದ್ರಬಾಬು ನಾಯ್ಡು, ರೇವಂತ್ ರೆಡ್ಡಿ ಅವರು ಬಂದಿದ್ದರು. ನಮ್ಮ ಮುಖ್ಯಮಂತ್ರಿಗಳೂ ಇದ್ದರು. ನದಿ ಜೋಡಣೆ, ನೀರಿನ ಹಂಚಿಕೆಯ ಬಗ್ಗೆ ಅವರು ಪ್ರಸ್ತಾಪಿಸಿ, ನಾವೇ ಬಗೆಹರಿಸಿಕೊಳ್ಳುತ್ತೇವೆ ಎಂದು ಮಾತನಾಡಿಕೊಂಡಿದ್ದಾರೆ. ಇನ್ನೊಂದು ಜಲಾಶಯ ಕಟ್ಟುವ ಬಗ್ಗೆ ಪ್ರಸ್ತಾಪಿಸಿದ್ದಕ್ಕೆ 90% ಕೇಂದ್ರ ಕೊಡುತ್ತದೆ, 10% ರಾಜ್ಯ ಕೊಡಬೇಕು ಎಂದು ಕೇಂದ್ರ ನೀರಾವರಿ ಸಚಿವರು ಅದೇ ಸಭೆಯಲ್ಲಿ ಪ್ರಸ್ತಾಪಿಸಿದ್ದಾರೆ. ಹೀಗೆ ಅಕ್ಕಪಕ್ಕದ ರಾಜ್ಯಗಳು ಸಮಸ್ಯೆಗಳನ್ನು ಮಾತಾಡಿಕೊಂಡು ಬಗೆಹರಿಸುವುದಾದರೆ, ಇದಕ್ಕೆ ಬಿಜೆಪಿ ಯಾಕೆ ಆಕ್ಷೇಪಿಸುತ್ತಿದೆ. ಅವರು ಹೇಳೋ ಪ್ರಕಾರ ರಾಜ್ಯಗಳು ಜಗಳ ಆಡಿಕೊಂಡೇ ಇರಬೇಕಾ? ಬಹುಶಃ ಹೊಂದಾಣಿಕೆಯಲ್ಲಿ ಹೋಗಬಾರದು ಅನ್ನೋದು ಬಿಜೆಪಿಯ ನೀತಿ ಇರಬೇಕು ಎಂದು ಡಾ.ಜಿ. ಪರಮೇಶ್ವರ್ ಹೇಳಿದ್ದಾರೆ.

# ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ವೇಳೆ 80 ಲಕ್ಷ ಮತದಾರರಿಗೆ ಕೊಕ್: ಕೆಪಿಸಿಸಿ ಗಂಭೀರ ಕಳವಳ: ಮಾಧ್ಯಮ ಮುಖ್ಯಸ್ಥ ರಮೇಶ್ ಬಾಬು ಮೇಲ್ಮನವಿ ಸಲ್ಲಿಕೆ

ಬೆಂಗಳೂರು, ಜು.29: ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಸಂದರ್ಭದಲ್ಲಿ 80 ಲಕ್ಷಕ್ಕೂ ಹೆಚ್ಚು ಮತದಾರರನ್ನು ಕೈಬಿಡುವ ಪ್ರಸ್ತಾವಿತ ಕ್ರಮಗಳ ಕುರಿತು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯು ಮಾಧ್ಯಮ ವರದಿಗಳು ಹಾಗೂ ಲಭ್ಯವಿರುವ ಅಂಕಿ-ಅಂಶಗಳ ಆಧಾರದ ಮೇಲೆ ಗಂಭೀರ ಕಳವಳವನ್ನು ವ್ಯಕ್ತಪಡಿಸುತ್ತಾ ಈ ಮನವಿಯನ್ನು ಸಲ್ಲಿಸುತ್ತದೆ: ರಮೇಶ್ ಬಾಬು, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ

ಮಾಧ್ಯಮ ವರದಿಗಳು ಹಾಗೂ SIR ಪ್ರಕ್ರಿಯೆಯ ಸಂದರ್ಭದಲ್ಲಿ ಲಭ್ಯವಾಗಿರುವ ಮಾಹಿತಿಯ ಪ್ರಕಾರ, 80 ಲಕ್ಷಕ್ಕೂ ಹೆಚ್ಚು ಮತದಾರರನ್ನು, ಅಂದರೆ ಒಟ್ಟು ಮತದಾರರ ಸಂಖ್ಯೆಯ ಸುಮಾರು ಶೇ.15ರಷ್ಟು ಮಂದಿಯನ್ನು ಗೈರುಹಾಜರು, ಸ್ಥಳಾಂತರಗೊಂಡವರು, ಸಹಿ ಮಾಡಲು ನಿರಾಕರಿಸಿದವರು (ಖಜಜಿಣಜಜ ಣಾಂ ಖುರಟ), ಬಹು ನೋಂದಣಿ, ASDDO ಹಾಗೂ ಇತರ ಸಮಾನ ವರ್ಗೀಕರಣಗಳ ಅಡಿ ಗುರುತಿಸಲಾಗಿದೆ. ಸಮರ್ಪಕ ಪರಿಶೀಲನೆ ಇಲ್ಲದೆ ಅಂತಿಮ ಕ್ರಮಕ್ಕೆ ಒಳಪಡಿಸಿದಲ್ಲಿ, ಹೆಚ್ಚಿನ ಸಂಖ್ಯೆಯ ನೈಜ ಮತ್ತು ಅರ್ಹ ಮತದಾರರು ತಪ್ಪಾಗಿ ಮತದಾರರ ಪಟ್ಟಿಯಿಂದ ಕೈಬಿಡಲ್ಪಡುವ ಗಂಭೀರ ಸಾಧ್ಯತೆ ಇದೆ. ಇದರಿಂದ ಅವರ ಸಂವಿಧಾನಾತ್ಮಕ ಮತದಾನದ ಹಕ್ಕಿಗೆ ದಕ್ಕೆ ಉಂಟಾಗುತ್ತದೆ.

ಅನರ್ಹರು ಅಥವಾ ನಕಲಿ ನೋಂದಣಿಗಳನ್ನು ತೆಗೆದುಹಾಕುವುದು




ಅಗತ್ಯವಾದರೂ, ಆಡಳಿತಾತ್ಮಕ ಲೋಪಗಳು, ಅಪೂರ್ಣ ಪರಿಶೀಲನೆ ಅಥವಾ ತಪ್ಪಾದ ವರ್ಗೀಕರಣದ ಕಾರಣದಿಂದ ಯಾವುದೇ ಅರ್ಹ ನಾಗರಿಕನು ಹಕ್ಕಿನಿಂದ ವಂಚಿತರಾಗದಂತೆ ನೋಡಿಕೊಳ್ಳುವುದು ಅಷ್ಟೇ ಮುಖ್ಯವಾಗಿದೆ. ಈ ಹಿನ್ನೆಲೆಯಲ್ಲಿ, ನಿಮ್ಮ ಕಚೇರಿಯು ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳು, ಮತದಾರರ ನೋಂದಣಿ ಅಧಿಕಾರಿಗಳು, ಸಹಾಯಕ ಮತದಾರರ ನೋಂದಣಿ ಅಧಿಕಾರಿಗಳು ಹಾಗೂ ಬೂತ್ ಮಟ್ಟದ ಅಧಿಕಾರಿಗಳಿಗೆ ಕೆಳಗಿನ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ತಕ್ಷಣದ ನಿರ್ದೇಶನಗಳನ್ನು ನೀಡಬೇಕೆಂದು ವಿನಂತಿಸುತ್ತೇವೆ:

1. ಗೈರುಹಾಜರು, ಸ್ಥಳಾಂತರಗೊಂಡವರು, ನಿರಾಕರಿಸಿದವರು, ASDDO ಅಥವಾ ಮತದಾರರನ್ನು ಅಳಿಸುವ ಸಾಧ್ಯತೆಯಿರುವ ಇತರ ಯಾವುದೇ ವರ್ಗಗಳಡಿ ಗುರುತಿಸಲಾದ ಎಲ್ಲಾ ಪ್ರಕರಣಗಳಲ್ಲಿ ಎರಡನೇ ಹಂತದ ಭೌತಿಕ ಪರಿಶೀಲನೆ ನಡೆಸಬೇಕು.

2. ಒಂದು ಬಾರಿ ಮನೆ ಭೇಟಿ ಅಥವಾ ಅಪೂರ್ಣ ಪರಿಶೀಲನೆಯ ಆಧಾರದ ಮೇಲೆ ಯಾವುದೇ ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆಯಬಾರದು.

3. ಯಾವುದೇ ಮತದಾರರ ಹೆಸರು ತೆಗೆಯುವ ಮೊದಲು, ಸಂಬಂಧಪಟ್ಟ ಮತದಾರರಿಗೆ ಸೂಕ್ತ ನೋಟಿಸ್ ನೀಡಿ, ಸಮಂಜಸವಾದ ಅವಕಾಶವನ್ನು ಒದಗಿಸಬೇಕು.

4 ಗ್ರಾಮ, ವಾರ್ಡ್ ಹಾಗೂ ಮತಗಟ್ಟೆ ಮಟ್ಟದಲ್ಲಿ ಸಾಕಷ್ಟು ಮತದಾರರ ಸಹಾಯ ಕೇಂದ್ರಗಳನ್ನು ಸ್ಥಾಪಿಸಿ, ಮತದಾರರು ತಮ್ಮ ವಿವರಗಳನ್ನು ಸರಿಪಡಿಸಲು ಹಾಗೂ ಅಗತ್ಯ ದಾಖಲೆಗಳನ್ನು ಸಲ್ಲಿಸಲು ನೆರವು ಒದಗಿಸಬೇಕು. ವಿಶೇಷವಾಗಿ ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಆದ್ಯತೆಯ ಮೇಲೆ ಈ ಕಾರ್ಯವನ್ನು ಕೈಗೊಳ್ಳಬೇಕು.

5 ಪ್ರಸ್ತಾವಿತ ಮತದಾರರ ಹೆಸರುಗಳ ಅಳಿಸುವಿಕೆಗಳ ಕುರಿತು ವರ್ಗವಾರು ಮತ್ತು ವಿಧಾನಸಭಾ ಕ್ಷೇತ್ರವಾರು ಅಂಕಿ-ಅಂಶಗಳನ್ನು ಸಾರ್ವಜನಿಕಗೊಳಿಸಿ ಪಾರದರ್ಶಕತೆಯನ್ನು ಕಾಪಾಡಬೇಕು.

6. ಮಾನ್ಯತೆ ಪಡೆದ ರಾಜಕೀಯ ಪಕ್ಷಗಳಿಗೆ ಪರಿಶೀಲನಾ ಪ್ರಕ್ರಿಯೆಯನ್ನು ಗಮನಿಸಲು ಹಾಗೂ ನೈಜ ಮತದಾರರ ಹೆಸರುಗಳು ಕೈಬಿಡುವ ಅಪಾಯವಿದ್ದಲ್ಲಿ ಆಕ್ಷೇಪಣೆ ಮತ್ತು ಪೂರಕ ದಾಖಲೆಗಳನ್ನು ಸಲ್ಲಿಸಲು ಅವಕಾಶ ನೀಡಬೇಕು.

7 ವಯೋವೃದ್ಧರು, ಅಂಗವಿಕಲರು, ಮಹಿಳೆಯರು, ವಲಸೆ ಕಾರ್ಮಿಕರು, ದಿನಗೂಲಿ ಕಾರ್ಮಿಕರು, ವಿದ್ಯಾರ್ಥಿಗಳು ಹಾಗೂ ಇತರ ದುರ್ಬಲ ವರ್ಗದ ಜನರು ಪ್ರಕ್ರಿಯಾತ್ಮಕ ತೊಂದರೆಗಳಿಂದಾಗಿ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ವಿಶೇಷ ಕ್ರಮಗಳನ್ನು ಕೈಗೊಳ್ಳಬೇಕು.

ಇದಲ್ಲದೆ, ಕೆಲವು ವ್ಯಕ್ತಿಗಳು ಮತ್ತು ರಾಜಕೀಯ ಸಂಘಟನೆಗಳು ಮತದಾರರ ನೋಂದಣಿ ಪ್ರಕ್ರಿಯೆಯ ಕುರಿತು ತಪ್ಪು ಮಾಹಿತಿ ಹಾಗೂ ದಾರಿತಪ್ಪಿಸುವ ಪ್ರಚಾರವನ್ನು ನಡೆಸುತ್ತಿರುವ ಬಗ್ಗೆ ನಿಮ್ಮ ಗಮನಕ್ಕೆ ತರಲು ಬಯಸುತ್ತೇವೆ. ಇಂತಹ ತಪ್ಪು ಮಾಹಿತಿಯು ಅರ್ಹ ನಾಗರಿಕರು ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸುವುದನ್ನು ನಿರುತ್ಸಾಹಗೊಳಿಸುವ ಸಾಧ್ಯತೆಯಿದ್ದು, ನಿಖರವಾದ ಮತದಾರರ ಪಟ್ಟಿಯ ತಯಾರಿಕೆಗೆ ಹಾನಿಕಾರಕವಾಗಬಹುದು.

ಆದ್ದರಿಂದ ನಿಮ್ಮ ಕಚೇರಿಯು ಕೆಳಗಿನ ಕ್ರಮಗಳನ್ನು ಕೈಗೊಳ್ಳಬೇಕೆಂದು ವಿನಂತಿಸುತ್ತೇವೆ:

* ಕೆಲವು ರಾಜಕೀಯ ಪಕ್ಷಗಳು ನಡೆಸುತ್ತಿರುವ ಸುಳ್ಳು ಮತ್ತು ದಾರಿತಪ್ಪಿಸುವ ಖಐಖ ಸಂಬಂಧಿತ ಪ್ರಚಾರಗಳ ವಿರುದ್ಧ ತಕ್ಷಣ ಸಾರ್ವಜನಿಕ ಸ್ಪಷ್ಟೀಕರಣಗಳನ್ನು ನೀಡಬೇಕು.

* ಮತದಾರರ ನೋಂದಣಿ ಪ್ರಕ್ರಿಯೆಯನ್ನು ತಡೆಯುವ ಅಥವಾ ಅರ್ಹ ನಾಗರಿಕರನ್ನು ನೋಂದಣಿಯಿಂದ ದೂರವಿಡುವ ಉದ್ದೇಶದಿಂದ ಉದ್ದೇಶಪೂರ್ವಕವಾಗಿ ತಪ್ಪು ಮಾಹಿತಿ ಹರಡುವ ಯಾವುದೇ ವ್ಯಕ್ತಿ, ರಾಜಕೀಯ ಪಕ್ಷ ಅಥವಾ ಸಂಘಟನೆಯ ವಿರುದ್ಧ ಕಾನೂನುಗಳಡಿ ಸೂಕ್ತ ಕ್ರಮ ಕೈಗೊಳ್ಳಬೇಕು.

* ಚುನಾವಣಾ ಅಧಿಕಾರಿಗಳು ಮತದಾರರ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ನಿರ್ದೇಶಿಸಬೇಕು.

SIR ಪ್ರಕ್ರಿಯೆಯ ಮೂಲ ಉದ್ದೇಶ ಅನರ್ಹ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕುವುದು ಆಗಿರುತ್ತದೆ. ಆದರೆ ಅದೇ ಸಮಯದಲ್ಲಿ ಯಾವುದೇ ನೈಜ ಮತದಾರ ತಪ್ಪಾಗಿ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ರಕ್ಷಿಸುವುದು ಅತ್ಯಂತ ಮುಖ್ಯವಾಗಿದೆ.

ಈ ಮನವಿಯೊಂದಿಗೆ ವಿವಿಧ ದಿನಪತ್ರಿಕೆಗಳಲ್ಲಿ ಪ್ರಕಟವಾದ ಸಂಬಂಧಿತ ಸುದ್ದಿಗಳನ್ನು ತಮ್ಮ ಕ್ರಮಕ್ಕಾಗಿ ಲಗತ್ತಿಸಲಾಗಿದೆ.

ಆದ್ದರಿಂದ, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯು ನಿಮ್ಮ ಮಧ್ಯ ಪ್ರವೇಶವನ್ನು ಕೋರುತ್ತಿದ್ದು, ಯಾವುದೇ ಅರ್ಹ ಮತದಾರನು ಆಡಳಿತಾತ್ಮಕ ಅಥವಾ ಪ್ರಕ್ರಿಯೆಯ ಲೋಪಗಳಿಂದಾಗಿ ತನ್ನ ಮತದಾನದ ಹಕ್ಕನ್ನು ಕಳೆದುಕೊಳ್ಳದಂತೆ ಸೂಕ್ತ ನಿರ್ದೇಶನ ನೀಡಬೇಕೆಂದು ವಿನಂತಿಸುತ್ತದೆ.

## ಸಂಕಷ್ಟದಿಂದ ಹೊರಬರಲು ಮೇಕೆದಾಟು ಜಲಾಶಯ ನಿರ್ಮಾಣವೇ ದಾರಿ: ಸಚಿವ ಎಂ.ಬಿ. ಪಾಟೀಲ್

**ಬೆಂಗಳೂರು, ಜು.29:** ರಾಜ್ಯದ ಕಾವೇರಿ ಜಲಾನಯನ ಪ್ರದೇಶದಲ್ಲಿ ಈ ವರ್ಷ ಒಳ್ಳೆಯ ಮಳೆಯೇ ಆಗಿಲ್ಲ. ಹೀಗಾಗಿ ಈ ವ್ಯಾಪ್ತಿಯ ಜಲಾಶಯಗಳಲ್ಲಿ ನೀರಿಲ್ಲ. ಹೀಗಿರುವಾಗ ಕಾವೇರಿ ನೀರು ನಿಯಂತ್ರಣ ಸಮಿತಿ ತಮಿಳುನಾಡಿಗೆ 4.50 ಟಿಎಂಸಿ ನೀರು ಹರಿಸುವಂತೆ ರಾಜ್ಯಕ್ಕೆ ಹೇಳಿರುವುದು ಸರಿಯಲ್ಲ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ.

ಮಾಧ್ಯಮ ಪ್ರತಿನಿಧಿಗಳ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿರುವ ಅವರು, ಚೆನ್ನಾಗಿ ಮಳೆಯಾದರೆ ಕಾವೇರಿ ನೀರಿನ ಹಂಚಿಕೆಯಲ್ಲಿ ಯಾವ ಸಮಸ್ಯೆಯೂ ಬರುವುದಿಲ್ಲ. ಅಂತಹ ವರ್ಷಗಳಲ್ಲಿ ನಾವು ನಿಗದಿತ 177 ಟಿಎಂಸಿಗಿಂತ ಹೆಚ್ಚು ನೀರನ್ನೇ ತಮಿಳುನಾಡಿಗೆ ಹರಿಸುತ್ತಿದ್ದೇವೆ.

ಆದರೆ ಬರಗಾಲ ಬಂದಾಗ ಯಾವ ಸಂಕಷ್ಟ ಸೂತ್ರವೂ ಇಲ್ಲ. ಇದಕ್ಕೆಲ್ಲ ಮೇಕೆದಾಟು ಜಲಾಶಯ ನಿರ್ಮಾಣವೇ ಉತ್ತರ ಎಂದು ಪ್ರತಿಪಾದಿಸಿದ್ದಾರೆ.

ಕಾವೇರಿ ನೀರು ಹಂಚಿಕೆಯ ಅಂತಿಮ ತೀರ್ಪಿನಲ್ಲಿ ನಮಗೆ ಹೆಚ್ಚುವರಿಯಾಗಿ ಸಿಕ್ಕಿದ 14 ಟಿಎಂಸಿ ನೀರೂ ಸೇರಿ ಒಟ್ಟು 65 ಟಿಎಂಸಿ ನೀರನ್ನು ಸಂಗ್ರಹಿಸಿ ಇಟ್ಟುಕೊಳ್ಳಲು ವ್ಯವಸ್ಥೆ ಬೇಕಾಗಿದೆ. ಹೀಗಾಗಿ ನಾನು ಹಿಂದೆ ಜಲ ಸಂಪನ್ಮೂಲ ಸಚಿವನಾಗಿದ್ದಾಗಲೇ ಮೇಕೆದಾಟು ಯೋಜನೆಯ ಪರಿಕಲ್ಪನೆ ಬಂತು. ಇದರಿಂದ ತಮಿಳುನಾಡಿಗೂ ಪ್ರಯೋಜನವಿದೆ. ಆದರೆ ಅಲ್ಲಿಯ ಆಂತರಿಕ ರಾಜಕಾರಣವು ಇದಕ್ಕೆ ಆಸ್ಪದ ಕೊಡುತ್ತಿಲ್ಲ. ಇದರ ಬದಲು ಅವರು ಮೇಕೆದಾಟು ಜಲಾಶಯದಿಂದ ತಮಿಳುನಾಡಿಗೂ ಲಾಭವಿದೆ ಎನ್ನುವ ಸರಳ ಸತ್ಯವನ್ನು ಒಪ್ಪಿಕೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಹಿಂದೆ ಜಲ ಸಂಪನ್ಮೂಲ ಖಾತೆಯನ್ನೂ ನಿರ್ವಹಿಸಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಈಗಿನ ಜಲ ಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಕೂತು, ಈಗಿನ ಬಿಕ್ಕಟ್ಟಿಗೆ ಪರಿಹಾರವನ್ನು ಹುಡುಕಲಿದ್ದಾರೆ. ಕೇಂದ್ರ ಸರಕಾರದ ಸಮಿತಿ ಕೂಡ ಈಗಿನ ನೀರು ಸಂಗ್ರಹಣೆಗೆ ಸಂಬಂಧಿಸಿದ ವಿಡಿಯೋ ಮತ್ತು ಅಂಕಿಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಬೇಕು ಎಂದು ಪಾಟೀಲ ನುಡಿದಿದ್ದಾರೆ.

### ಬರಗಾಲ ಘೋಷಿಸದೆ ಕೇಂದ್ರದ ಪರಿಹಾರ ಪಡೆಯಲು ಸಾಧ್ಯವಿಲ್ಲ

# ರೈತರ ಸಂಕಷ್ಟಕ್ಕಿಂತ ರಾಜಕೀಯವೇ ಮುಖ್ಯ: ಕಾಂಗ್ರೆಸ್‌ಗೆ ಅಶೋಕ್ ತರಾಟೆ

**ಬೆಂಗಳೂರು, ಜು.29:** ಮಳೆಯ ಕೊರತೆಯಿಂದ ರಾಜ್ಯದಲ್ಲಿ ರೈತರು ತೀವ್ರ ಸಂಕಷ್ಟದಲ್ಲಿದ್ದರೂ ಕಾಂಗ್ರೆಸ್ ಸರ್ಕಾರ ಇದುವರೆಗೆ ಬರಗಾಲ ಘೋಷಣೆ ಮಾಡದೇ ರೈತರ ಬದುಕಿನೊಂದಿಗೆ ಚೆಲ್ಲಾಟವಾಡುತ್ತಿದೆ. ರಾಜ್ಯಾದ್ಯಂತ ಪ್ರವಾಸ ಮಾಡಿ ರೈತರ ಸಮಸ್ಯೆ ಆಲಿಸಬೇಕಾದವರು ದೆಹಲಿಯಲ್ಲೇ ಕಾಲ ಕಳೆಯುತ್ತಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಟೀಕಿಸಿದರು.



ಬರ ಅಧ್ಯಯನ ಪ್ರವಾಸದ ಅಂಗವಾಗಿ ದಾವಣಗೆರೆ ಜಿಲ್ಲೆಯ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ರೈತರ ಸಮಸ್ಯೆಗಳನ್ನು ಆಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದ್ದರೂ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ, ರಾಜ್ಯ ಸರ್ಕಾರ ಬರಗಾಲ ಘೋಷಣೆ ಮಾಡದಿದ್ದರೆ ಕೇಂದ್ರ ಸರ್ಕಾರದಿಂದ ಪರಿಹಾರ ಪಡೆಯಲು ಸಾಧ್ಯವಿಲ್ಲ. ಬೆಳೆ ವಿಮೆ ಕಂಪನಿಗಳೂ ಪ ರಿ ಹಾ ರ ಬಿಡುಗಡೆ ಮಾಡುವುದಿಲ್ಲ. ಮೊದಲು ಬರಗಾಲ ಘೋಷಣೆ ಮಾಡಿ, ಕನಿಷ್ಠ ಬೆಳೆ ವಿಮೆಯಾದರೂ ಸಿಗುವಂತೆ ಮಾಡಿ ಎಂದು ರೈತರು ಮನವಿ ಮಾಡುತ್ತಿದ್ದಾರೆ. ಆದರೆ ಸರ್ಕಾರಕ್ಕೆ ರೈತರ ಸಂಕಷ್ಟಕ್ಕಿಂತ ರಾಜಕೀಯವೇ ಮುಖ್ಯವಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಮಳೆ ಕೊರತೆ ತೀವ್ರವಾಗಿದ್ದು, ಮಲೆನಾಡಿನಲ್ಲಿ ಶೇ.44, ಕರಾವಳಿಯಲ್ಲಿ ಶೇ.35, ಉ ತ್ತ ರ ಒಳನಾಡಿನಲ್ಲಿ ಶೇ.33 ಹಾಗೂ ದಕ್ಷಿಣ ಒಳನಾಡಿನಲ್ಲಿ ಶೇ.31 ಮಳೆ ಕೊರತೆ ದಾಖಲಾಗಿದೆ. ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಗಳಲ್ಲಿ ಕೇವಲ ಶೇ.19ರಷ್ಟು ಮಾತ್ರ ಬಿತ್ತನೆ ನಡೆದಿದ್ದು, ಉಳಿದ ಶೇ.81ರಷ್ಟು ಬಿತ್ತನೆ ಆಗಿಲ್ಲ. ಸೂರ್ಯಕಾಂತಿ ಸೇರಿ ಹಲವು ಬೆಳೆಗಳು ಸಂಪೂರ್ಣ ಹಾನಿಯಾಗಿವೆ. ಅಡಿಕೆ ತೋಟಗಳಲ್ಲಿ ಗಿಡಗಳು ಒಣಗಿ ಹೋಗಿದ್ದು, ಐದು ವರ್ಷ ಬೆಳೆಸುವ ಗಿಡಕ್ಕೆ ಸರ್ಕಾರ ಕೇವಲ 16 ರೂ. ಪರಿಹಾರ ಘೋಷಿಸಿರುವುದು ರೈತರಿಗೆ ಮಾಡುವ ಅವಮಾನವಾಗಿದೆ. ಸರ್ಕಾರದ ಖಜಾನೆ ಖಾಲಿಯಾಗಿರುವುದರಿಂದಲೇ ಬರ ಘೋಷಣೆ ಮಾಡಲು ಹಿಂದೇಟು ಹಾಕುತ್ತಿದೆ ಎಂದು ಅಶೋಕ್ ಹೇಳಿದರು.

**2 ತಿಂಗಳಲ್ಲಿ 31 ರೈತರು ಆತ್ಮಹತ್ಯೆ**

ಕಳೆದ ಎರಡು ತಿಂಗಳಲ್ಲಿ ರಾಜ್ಯದಲ್ಲಿ 31 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮೂರು ವರ್ಷಗಳಲ್ಲಿ ಸುಮಾರು 2,800 ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ. 2025–26ನೇ ಸಾಲಿನಲ್ಲಿ ಮಾತ್ರ 787 ರೈತರ ಆತ್ಮಹತ್ಯೆ ಪ್ರಕರಣಗಳು ದಾಖಲಾಗಿವೆ. ರಾಜ್ಯ ಸರ್ಕಾರ ಮೊದಲು ಬರಗಾಲ ಘೋಷಿಸಿ ಎಸ್‌ಡಿಆರ್‌ಎಫ್ ನಿಯಮಗಳಂತೆ ಪರಿಹಾರ ಬಿಡುಗಡೆ ಮಾಡಬೇಕು. ನಂತರ ಕೇಂದ್ರ ಸರ್ಕಾರದ ನೆರವು ಕೇಳಬೇಕು. ಸರ್ಕಾರ ತನ್ನ ಜವಾಬ್ದಾರಿ ನಿರ್ವಹಿಸದೆ ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡುತ್ತಿರುವುದು ಸರಿಯಲ್ಲ. ರೈತರ ಹಿತದೃಷ್ಟಿಯಿಂದ ಪ್ರತಿ ಎಕರೆಗೆ 50,000 ಪರಿಹಾರ ನೀಡಬೇಕು.

ಹಾನಿಗೊಳಗಾದ ತೆಂಗು ಹಾಗೂ ಅಡಿಕೆ ಮರಗಳಿಗೆ ಪ್ರತಿ ಮರಕ್ಕೆ 10,000 ಪರಿಹಾರ ನೀಡಬೇಕು. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 50 ಕೋಟಿ ಬಿಡುಗಡೆ ಮಾಡಿ ಸ್ಥಳೀಯ ಮಟ್ಟದಲ್ಲಿ ಟಾಸ್ಕ್ ಫೋರ್ಸ್ ರಚಿಸಿ ಪರಿಹಾರ ಕಾರ್ಯ ಕೈಗೊಳ್ಳಬೇಕು. ರಾಜ್ಯದಿಂದ ಮೇವು ಹೊರ ರಾಜ್ಯಗಳಿಗೆ ಸಾಗಿಸುವುದನ್ನು ತಡೆದು, ಜಾನುವಾರುಗಳಿಗೆ ಮೇವು ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಅಶೋಕ್ ಆಗ್ರಹಿಸಿದರು.

## ಕಾವೇರಿ ನೀರು ಹಂಚಿಕೆಯಲ್ಲಿ ಸರ್ಕಾರ ಸಂಪೂರ್ಣ ವಿಫಲ

ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ರಾಜ್ಯ ಸರ್ಕಾರದ ವೈಫಲ್ಯ ಸ್ಪಷ್ಟವಾಗಿದೆ. ತಮಿಳುನಾಡಿಗೆ 3,500 ಕ್ಯೂಸೆಕ್ ನೀರು ಬಿಡುವ ಪರಿಸ್ಥಿತಿ ಸರ್ಕಾರದ ನಿರ್ಲಕ್ಷ್ಯದಿಂದ ಬಂದಿದೆ. ಕಾನೂನು ತಜ್ಞರೊಂದಿಗೆ ಸಮರ್ಪಕವಾಗಿ ಸಮಾಲೋಚನೆ ನಡೆಸಿಲ್ಲ. ವಕೀಲರಿಗೆ 300 ಕೋಟಿ ಶುಲ್ಕ ನೀಡಿದ್ದರೂ ರಾಜ್ಯದ ಹಿತ ಕಾಯುವಲ್ಲಿ ವಿಫಲವಾಗಿದೆ ಎಂದು ಆರ್. ಅಶೋಕ ಹೇಳಿದರು.

ಬೆಂಗಳೂರು ಸೇರಿದಂತೆ ಕಾವೇರಿ ನೀರನ್ನು ಅವಲಂಬಿಸಿರುವ ಲಕ್ಷಾಂತರ ಜನರ ಕುಡಿಯುವ ನೀರಿನ ಭವಿಷ್ಯ ಅಪಾಯದಲ್ಲಿದೆ. ಸರ್ಕಾರ ತಕ್ಷಣ ಕಾನೂನು ಹೋರಾಟವನ್ನು ಬಲಪಡಿಸಿ ರಾಜ್ಯದ ಹಕ್ಕು ಕಾಪಾಡಬೇಕು. ಅಗತ್ಯವಿದ್ದರೆ ವಕೀಲರ ತಂಡವನ್ನೂ ಬದಲಾಯಿಸಬೇಕು ಎಂದು ಅಶೋಕ್ ಒತ್ತಾಯಿಸಿದರು.

## ಕಾಂಗ್ರೆಸ್‌ನ ಗಂಜಿಕೇಂದ್ರಕ್ಕೆ ಕೋಟಿ ಕೋಟಿ ವ್ಯರ್ಥ

ಭಾರತ್ ಜೋಡೋ ಕ್ಲಬ್‌ಗಳ ಸ್ಥಾಪನೆಗೆ ನೂರಾರು ಕೋಟಿ ಕೋಟಿ ರೂಪಾಯಿ ವೆಚ್ಚ ಮಾಡಲಾಗುತ್ತಿದೆ. ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ನಡೆದ ರಾಹುಲ್ ಗಾಂಧಿಯವರ ಭಾರತ್ ಜೋಡೋ ಯಾತ್ರೆಯ ಹೆಸರಿನಲ್ಲಿ ರಾಜ್ಯದ ಪ್ರತಿ ಹಳ್ಳಿ, ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲೂ ಕ್ಲಬ್‌ಗಳನ್ನು ಸ್ಥಾಪಿಸಲು ಕೋಟ್ಯಂತರ ರೂಪಾಯಿ ಖರ್ಚು ಮಾಡಲಾಗುತ್ತಿದೆ. ಗ್ಯಾರಂಟಿ ಯೋಜನೆಗಳ ಸಮಿತಿಗಳಿಗೆ ಅಧ್ಯಕ್ಷರನ್ನು ನೇಮಿಸಿ, ಅವರಿಗೆ ಬಂಗಲೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಉದಾರವಾಗಿ ಹಣ ವೆಚ್ಚ ಮಾಡುತ್ತಿದೆ. ಆದರೆ ವಿರೋಧ ಪಕ್ಷದ ನಾಯಕರಿಗೆ ಮೂಲಭೂತ ಸೌಲಭ್ಯಗಳನ್ನೂ ನೀಡಲು ಸರ್ಕಾರ ಮುಂದಾಗುತ್ತಿಲ್ಲ. ಕಾಂಗ್ರೆಸ್‌ನ ರಾಜಕೀಯ ಚಟುವಟಿಕೆಗಳು ಮತ್ತು ಪ್ರಚಾರಕ್ಕೆ ಕೋಟ್ಯಂತರ ರೂಪಾಯಿ ವೆಚ್ಚ ಮಾಡುವ ಸರ್ಕಾರ, ಅನ್ನದಾತರ ನೆರವಿಗೆ ಹಿಂಜರಿಯುತ್ತಿರುವುದು ಅತ್ಯಂತ ಖಂಡನೀಯ ಎಂದು ಅಶೋಕ್ ಕಿಡಿಕಾರಿದರು.

# ರಾಜ್ಯದ ವಿವಿಧೆಡೆ ಕಾವೇರಿ ಕಿಚ್ಚು; ರೈತರು, ಕನ್ನಡಪರ ಸಂಘಟನೆಗಳ ಆಕ್ರೋಶ

**ಬೆಂಗಳೂರು, ಜು..29:** ತಮಿಳುನಾಡಿಗೆ ಕಾವೇರಿ ನೀರು ಹರಿಸದಂತೆ ಆಗ್ರಹಿಸಿ ಬೆಂಗಳೂರು, ಮಂಡ್ಯ ಹಾಗೂ ಮೈಸೂರು ಜಿಲ್ಲೆಯಲ್ಲಿ ರೈತರು ಹಾಗೂ ಕನ್ನಡಪರ ಸಂಘಟನೆಗಳ ಕಾರ್ಯಕರ್ತರಿಂದ ಬುಧವಾರ ಪ್ರತಿಭಟನೆಗಳು ನಡೆದವು. ಅದೇ ರೀತಿ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ ನಾರಾಯಣ ಗೌಡರ ನೇತೃತ್ವದಲ್ಲಿ ಕಾವೇರಿ ಉಳಿಸಿ, ಕರ್ನಾಟಕ ಉಳಿಸಿ ಎಂಬ ಘೋಷ ವಾಕ್ಯದಡಿ ಸಿಡಬ್ಲ್ಯುಆರ್‌ಸಿ ಆದೇಶದ ವಿರುದ್ಧ ಬೃಹತ್ ಪ್ರತಿಭಟನೆ ನಡೆಸಲಾಗಿದೆ.




ಪ್ರತಿಭಟನೆ ವೇಳೆ ಕರವೇ ಅಧ್ಯಕ್ಷ ಟಿ.ಎ.ನಾರಾಯಣ ಗೌಡ ಪ್ರತಿಕ್ರಿಯಿಸಿ, ಕಾವೇರಿ ಜಲ ನಿಯಂತ್ರಣ ಸಮಿತಿ ತೀರ್ಪನ್ನು ಯಾವುದೇ ಕಾರಣಕ್ಕೂ ಸರ್ಕಾರ ಒಪ್ಪಿಕೊಳ್ಳಬಾರದು. 4 ಟಿಎಂಸಿ ನೀರು ನಾವು ಬಿಡೋದಕ್ಕೆ ಆಗಲ್ಲ. ರಾಜ್ಯದಲ್ಲಿ ಮೊದಲೇ ನೀರಿಲ್ಲ. ಅಷ್ಟೊಂದು ನೀರು ಎಲ್ಲಿಂದ ಬಿಡುವುದು. ಇವತ್ತು ಡ್ಯಾಂನಲ್ಲಿ ಇರೋದು ಕೇವಲ 12 ಟಿಎಂಸಿ ನೀರು ಮಾತ್ರ ಇದೆ. ಇದರಲ್ಲಿ ಬೆಂಗಳೂರಿಗೆ ತಿಂಗಳಿಗೆ 3 ಟಿಎಂಸಿಯಷ್ಟು ನೀರು ಬೇಕಾಗುತ್ತದೆ. ತಮಿಳುನಾಡಿನ ರಾಜಕೀಯ ನಾಯಕರು ಕೇಂದ್ರದ ಜತೆ ಲಾಬಿ ಮಾಡಿದ್ದಾರೆ. ರಾಜ್ಯ ಸರ್ಕಾರ ಇದಕ್ಕೆ ಮೇಲ್ಮನವಿ ಸಲ್ಲಿಸಬೇಕು ಎಂದು ಹೇಳಿದ್ದಾರೆ.

ನಮ್ಮ ಜಲಾಶಯಗಳ ಸ್ಥಿತಿಗತಿ ಬಗ್ಗೆ ಸರ್ಕಾರ ಮನವರಿಕೆ ಮಾಡಬೇಕು. ರಾಜ್ಯ ಸರ್ಕಾರ ಕರ್ನಾಟಕದ ರೈತರ ಹಿತ ಕಾಪಾಡಬೇಕು. ಕಾವೇರಿ ಅನ್ನೋದು ಕನ್ನಡಿಗರ ಭಾವನೆ, ಅದರ ಜೊತೆ ಹುಡುಗಾಟ ಆಡಬಾರದು. ಆವತ್ತು ಬಂಗಾರಪ್ಪನವರ ಹೇಗೆ ಆದೇಶ ತಿರಸ್ಕಾರ ಮಾಡಿದರೋ ಇವತ್ತು ಬಂಗಾರಪ್ಪನವರ ಶಿಷ್ಯ ಅಂತ ಹೇಳಿಕೊಳ್ಳುವ ಸಿಎಂ ಡಿ.ಕೆ ಶಿವಕುಮಾರ್ ಅವರು ಆದೇಶವನ್ನು ಧಿಕ್ಕರಿಸಬೇಕು. ನಾವು ನೀರು ಬಿಡೋಕೆ ಆಗಲ್ಲ ಅಂತ ಸ್ಪಷ್ಟವಾಗಿ ಹೇಳಬೇಕು ಎಂದು ಹೇಳಿದ್ದಾರೆ.

ಆದೇಶವನ್ನು ಖಂಡಿಸಿ ನಾವೆಲ್ಲ ಹೋರಾಟ ಮಾಡುತ್ತಿದ್ದೇವೆ. ಕರ್ನಾಟಕ ಬಂದ್ ಮಾಡೋದರಲ್ಲಿ ನನಗೆ ವಿಶ್ವಾಸ ಇಲ್ಲ. ಪದೇಪದೆ ಕರ್ನಾಟಕ ಬಂದ್ ಮಾಡಿಕೊಂಡು ಕುಳಿತುಕೊಳ್ಳಲು ಆಗಲ್ಲ. ಇದರ ಹೊರತಾಗಿ ಹಲವು ಹೋರಾಟದ ಚಳವಳಿ ಮಾದರಿ ಇದೆ. ಆ ಪ್ರಕಾರ ಚಳವಳಿ ರೂಪಿಸುತ್ತೇವೆ, ಹೋರಾಟ ಮುಂದುವರೆಸುತ್ತೇವೆ. ಸರ್ಕಾರ ದೃಢ ನಿಲುವು ತಾಳಬೇಕು ಎಂದು ಹೇಳಿದ್ದಾರೆ.

ತಮಿಳುನಾಡು ಸಿಎಂ ವಿಜಯ್ ಅವರು ಸಿಎಂ ಡಿ.ಕೆ ಶಿವಕುಮಾರ್ ಜೊತೆ ಚರ್ಚೆ ಮಾಡಬೇಕು ಎಂದು ಹೇಳುತ್ತಿದ್ದಾರೆ. ಆದರೆ ಅವರು ಏನಾದರೂ ಮಾಡಲಿ, ನಾವು ಕಾವೇರಿ ನೀರು ಕೊಡುವುದಕ್ಕೆ ಆಗಲ್ಲ ಎಂದು ಡಿ.ಕೆ ಶಿವಕುಮಾರ್ ಅವರು ಹೇಳಬೇಕು. ತಮಿಳುನಾಡಿನ ಸಿಎಂ ಬರಲಿ ಕರ್ನಾಟಕಕ್ಕೆ, ನಮ್ಮ ಜಲಾಶಯಗಳ ಸ್ಥಿತಿ ನೋಡಲಿ, ಮಳೆ ಇಲ್ಲದ ಕಾರಣ ನಮ್ಮ ಜಲಾಶಯಗಳಲ್ಲೂ ನೀರಿಲ್ಲ. ಮಳೆ ಇಲ್ಲದ ಕಾರಣ ಕುಡಿಯುವ ನೀರಿಗೂ ಆಹಾಕಾರ ಸಂಭವಿಸುವ ಸಾಧ್ಯತೆ ಇದೆ. ಹೀಗಾಗಿ ನೀರು ಕೊಡಲು ಆಗಲ್ಲ ಎಂದು ಟಿಎ ನಾರಾಯಣ ಗೌಡ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನ ಮೈಸೂರು ಬ್ಯಾಂಕ್ ವೃತ್ತದಲ್ಲಿ ಕಾವೇರಿ ನೀರು ನಿಯಂತ್ರಣ ಸಮಿತಿ ಆದೇಶದ ವಿರುದ್ಧ , ಕರವೇ ಪ್ರವೀಣ್ ಶೆಟ್ಟಿ ಬಣದಿಂದ ಬೃಹತ್ ಪ್ರತಿಭಟನೆ ನಡೆಸಲಾಯಿತು. ರಾಜ್ಯದಲ್ಲಿ ಈ ವೇಳೆಗಾಗಲೇ ಶೇಕಡಾ 70 ರಷ್ಟು ಮಳೆಯಾಗಬೇಕಿತ್ತು, ಬದಲಾಗಿ ಕೇವಲ ಶೇಕಡಾ 20 ರಷ್ಟು ಮಾತ್ರ ಮಳೆಯಾಗಿದೆ. ತೀವ್ರ ಮುಂಗಾರು ಮಳೆಯ ಕೊರತೆ ಇರುವುದರಿಂದ ತಮಿಳುನಾಡಿಗೆ ನೀರು ಬಿಡಲು ಯಾವುದೇ ಕಾರಣಕ್ಕೂ ಸಾಧ್ಯವಿಲ್ಲ ಎಂದು ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷರಾದ ಪ್ರವೀಣ್ ಕುಮಾರ್ ಶೆಟ್ಟಿ ಅವರು ತೀವ್ರವಾಗಿ ಖಂಡಿಸಿದ್ದಾರೆ. ಒಂದು ವೇಳೆ ರಾಜ್ಯ ಸರ್ಕಾರ ನೀರು ಹರಿಸಲು ಮುಂದಾದರೆ ಕರ್ನಾಟಕ ಬಂದ್ ಮಾಡುವ ಎಚ್ಚರಿಕೆಯನ್ನು ನೀಡಿದ್ದಾರೆ.ತಮಿಳುನಾಡಿಗೆ ನೀರು ಹರಿಸದಂತೆ ಒತ್ತಾಯಿಸಿ ಮಂಡ್ಯದಲ್ಲಿ ರೈತರ ಪ್ರತಿಭಟನೆ ತೀವ್ರಗೊಂಡಿದೆ. ರಸ್ತೆಯಲ್ಲಿ ಅರೆಬೆತ್ತಲೆ ಪ್ರತಿಭಟನೆ ನಡೆಸಿದ ರೈತರು, ಪ್ರಾಣ ಬಿಟ್ಟೇವು, ನೀರು ಬಿಡಲ್ಲ ಎಂದು ಘೋಷಣೆ ಕೂಗಿ ಆಕ್ರೋಶ ಹೊರಹಾಕಿದ್ದಾರೆ.

ಮತ್ತೊಂದೆಡೆ ಕರವೇ ಜಿಲ್ಲಾಧ್ಯಕ್ಷ ವೇಣು ಡಿ.ಎಸ್. ನೇತೃತ್ವದಲ್ಲಿ ಹೋರಾಟ ನಡೆದಿದ್ದು, ನೀರು ಹರಿಸಲು ಆದೇಶ ನೀಡಿದ ಆಥಾರಿಟಿ ವಿರುದ್ಧ ಘೋಷಣೆ ಕೂಗಿ ಅಸಮಾಧಾನ ಹೊರಹಾಕಲಾಗಿದೆ. ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಮಾಡದಂತೆ ಆಗ್ರಹಿಸಿ ರೈತ ಸಂಘದಿಂದ ಮೈಸೂರಿನ ಹಳೇ ಕೋರ್ಟ್ ಮುಂಭಾಗ ಪ್ರತಿಭಟನೆ ನಡೆಸಲಾಗಿದೆ. ರಾಜ್ಯದ ರೈತರ ಹಿತಾಸಕ್ತಿ ಕಾಪಾಡಬೇಕು, ಕರ್ನಾಟಕದ ನೀರಿನ ಅಗತ್ಯಕ್ಕೆ ಮೊದಲ ಆದ್ಯತೆ ನೀಡಬೇಕು ಎಂದು ರೈತರು ಆಗ್ರಹಿಸಿದ್ದಾರೆ.



ತಮಿಳುನಾಡಿಗೆ ಪ್ರತಿದಿನ 3,500 ಕ್ಯೂಸೆಕ್ ನೀರು ಬಿಡುವಂತೆ ಕರ್ನಾಟಕಕ್ಕೆ ಆದೇಶಿಸಿರುವ ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯೂಆರ್‌ಸಿ)ಯ ಇತ್ತೀಚಿನ ನಿರ್ದೇಶನ ವಿರೋಧಿಸಿ ಕನ್ನಡ ಚಳವಳಿ ವಾಟಾಳ್ ಪಕ್ಷದ ನಾಯಕ ವಾಟಾಳ್ ನಾಗರಾಜ್, ಸಾ.ರಾ.ಗೋವಿಂದು ಮತ್ತು ಇತರರು ಬುಧವಾರ ಬೆಂಗಳೂರಿನ ಎಸ್‌ಬಿಎಂ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

# ರಾಜ್ಯದ ಉಷ್ಣ ವಿದ್ಯುತ್ ಸ್ಥಾವರಗಳಲ್ಲಿ ಹೆಚ್ಚಿದ ಉತ್ಪಾದನೆ: ಹೆಚ್ಚುವರಿ ಕಲ್ಲಿದ್ದಲು ತರಿಸಿಕೊಳ್ಳಲು ಸಿದ್ಧತೆ

**ಬೆಂಗಳೂರು, ಜು.29:** ಮಳೆ ಕೊರತೆ ಹಿನ್ನೆಲೆಯಲ್ಲಿ ಶಾಖೋತ್ಪನ್ನ ವಿದ್ಯುತ್ ಉತ್ಪಾದನೆ ಹೆಚ್ಚಿಸಿ ರಾಜ್ಯದ ವಿದ್ಯುತ್ ಬೇಡಿಕೆ ಪೂರೈಸುತ್ತಿರುವ ಕರ್ನಾಟಕ ವಿದ್ಯುತ್ ನಿಗಮ ನಿಯಮಿತ (ಕೆಪಿಸಿಎಲ್), ಅದಕ್ಕೆ ಅಗತ್ಯ ಕಲ್ಲಿದ್ದಲು ಸಂಗ್ರಹಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತವಾಗಿದೆ.



ಇದಕ್ಕೆ ಪೂರಕವಾಗಿ ಕೆಪಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ರಾಜೇಂದ್ರ ಚೋಳನ್ ನೇತೃತ್ವದಲ್ಲಿ ನಿಗಮದ ಹಿರಿಯ ಅಧಿಕಾರಿಗಳು ಮಹಾರಾಷ್ಟ್ರದ ನಾಗಪುರದಲ್ಲಿರುವ ವೆಸ್ಟರನ್ ಕೋಲ್ ಫೀಲ್ಡ್, ಬಾರಂಜ್ ಕ್ಯಾಪ್ಟಿವ್ ಕಲ್ಲಿದ್ದಲು ಗಣಿಗಳಿಗೆ ಭೇಟಿ ನೀಡಿದ್ದರು. ಅಲ್ಲದೆ, ಇತರೆ ಕಲ್ಲಿದ್ದಲು ಗಣಿ ಹಾಗೂ ಕೋಲ್ ಇಂಡಿಯಾ ಲಿಮಿಟೆಡ್ ಜತೆ ನಿರಂತರ ಸಂಪರ್ಕದಲ್ಲಿದ್ದಾರೆ.

ಕೆಪಿಸಿಎಲ್ ವ್ಯವಸ್ಥಾಪಕ ನಿರ್ದೇಶಕರ ರಾಜೇಂದ್ರ ಚೋಳನ್ ನೇತೃತ್ವದಲ್ಲಿ ಹಿರಿಯ ಅಧಿಕಾರಿಗಳು ವೆಸ್ಟರ್ನ್ ಕೋಲ್ ಫೀಲ್ಡ್ ಲಿಮಿಟೆಡ್ ಅಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕ ಡಾ. ಹೇಮಂತ್ ಶರತ್ ಪಾಂಡೆ ಅವರನ್ನು ಭೇಟಿಯಾಗಿ, ಕೆಪಿಸಿಎಲ್ ವತಿಯಿಂದ ನಿರ್ವಹಿಸಲಾಗುತ್ತಿರುವ ಆರ್‌ಟಿಪಿಎಸ್‌ಗೆ ಹೆಚ್ಚುವರಿ ಕಲ್ಲಿದ್ದಲು ರೇಕ್‌ಗಳನ್ನು ಒದಗಿಸುವಂತೆ ಮನವಿ ಮಾಡಿದರು. ಇದಕ್ಕೆ ಸಮ್ಮತಿಸಿದ ಡಬ್ಲ್ಯುಸಿಎಲ್ ಅಧಿಕಾರಿಗಳು, ಪ್ರಸ್ತುತ ಪ್ರತಿದಿನ ನೀಡುತ್ತಿರುವ ಕಲ್ಲಿದ್ದಲು ಜತೆಗೆ ಪ್ರತಿನಿತ್ಯ 4,000 ಮೆಟ್ರಿಕ್ ಟನ್ ಹೆಚ್ಚುವರಿ ಕಲ್ಲಿದ್ದಲು ಒದಗಿಸಲು ಸಮ್ಮತಿಸಿದ್ದಾರೆ.

ಅದೇರೀತಿ ಬಳ್ಳಾರಿ ಉಷ್ಣ ವಿದ್ಯುತ್ ಸ್ಥಾವರದ ಘಟಕ 1 ಮತ್ತು 2ಕ್ಕೆ ಮೀಸಲಾದ ಬಾರಂಜ್ ಕ್ಯಾಪ್ಟಿವ್ ಕಲ್ಲಿದ್ದಲು ಗಣಿಯಿಂದ ಪ್ರಸ್ತುತ ಪ್ರತಿನಿತ್ಯ ಬರುತ್ತಿರುವ 16 ಸಾವಿರ ಮೆಟ್ರಿಕ್ ಟನ್ ಕಲ್ಲಿದ್ದಲನ್ನು 25 ಸಾವಿರ ಮೆಟ್ರಿಕ್ ಟನ್‌ಗೆ ಹೆಚ್ಚಿಸಲು ವ್ಯವಸ್ಥೆ ಮಾಡಲಾಗಿದೆ. ಈ ಗಣಿಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಕೆಪಿಸಿಎಲ್ ಎಂಡಿ ರಾಜೇಂದ್ರ ಚೋಳನ್ ಹಾಗೂ ಹಿರಿಯ ಅಧಿಕಾರಿಗಳು ಕಲ್ಲಿದ್ದಲು ಉತ್ಪಾದನೆ, ತೂಕ ಮಾಪನ ವ್ಯವಸ್ಥೆ ಹಾಗೂ ಕಲ್ಲಿದ್ದಲು ಸಾಗಣೆ ವ್ಯವಸ್ಥೆಯನ್ನು ಪರಿಶೀಲಿಸಿದರು.

ಮಳೆ ಕೊರತೆ ಹಿನ್ನೆಲೆಯಲ್ಲಿ ರಾಜ್ಯದ ಉಷ್ಣ ವಿದ್ಯುತ್ ಸ್ಥಾವರದಲ್ಲಿ ಹೆಚ್ಚು ವಿದ್ಯುತ್ ಉತ್ಪಾದಿಸಲು ಅಗತ್ಯವಿರುವ ಹೆಚ್ಚುವರಿ ಕಲ್ಲಿದ್ದಲು ತರಿಸಿಕೊಳ್ಳಲು ಕೆಪಿಸಿಎಲ್ ವತಿಯಿಂದ ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಜತೆಗೆ ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳನ್ನೂ ಸಮರ್ಪಕ ನಿರ್ವಹಣೆಯೊಂದಿಗೆ ಸಜ್ಜುಗೊಳಿಸ ಲಾಗಿದೆ.– **ಕೆ.ಜೆ.ಜಾರ್ಜ್, ಇಂಧನ ಮತ್ತು ಪ್ರವಾಸೋದ್ಯಮ ಸಚಿವ**



"ರಾಯಚೂರು ಉಷ್ಣ ವಿದ್ಯುತ್ ಸ್ಥಾವರಕ್ಕೆ ಪ್ರಸ್ತುತ ಪೂರೈಕೆಯಾಗುತ್ತಿರುವ ಕಲ್ಲಿದ್ದಲು ಜತೆಗೆ ಪ್ರತಿನಿತ್ಯ 1ರಿಂದ 2 ಕೋಲ್ ರೇಕ್ ಹೆಚ್ಚುವರಿಯಾಗಿ ಒದಗಿಸುವಂತೆ ಕೋಲ್ ಇಂಡಿಯಾ ಜತೆಗೂ ಮಾತುಕತೆ ನಡೆಸಲಾಗಿದೆ. ಬೇಡಿಕೆಗೆ ತಕ್ಕಂತೆ ಕಲ್ಲಿದ್ದಲು ಪೂರೈಸಲು ಕೋಲ್ ಇಂಡಿಯಾ ಕಂಪನಿ ಅಧಿಕಾರಿಗಳು ಸಮ್ಮತಿಸಿದ್ದಾರೆ," ಎಂದು ಕೆಪಿಸಿಎಲ್ ವ್ಯವಸ್ಥಾಪಕರು ತಿಳಿಸಿದ್ದಾರೆ.

"ಮಳೆ ಕೊರತೆಯಿಂದಾಗಿ ಜಲ ವಿದ್ಯುತ್ ಉತ್ಪಾದನೆ ಕುಂಠಿತಗೊಂಡಿದ್ದು, ಈ ಕೊರತೆ ಭರಿಸಲು ರಾಯಚೂರು, ಯರಮರಸ್ ಮತ್ತು ಬಳ್ಳಾರಿಯ ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಲ್ಲಿ ಪ್ರತಿನಿತ್ಯ 100 ದಶಲಕ್ಷ ಯೂನಿಟ್ ವಿದ್ಯುತ್ ಉತ್ಪಾದನೆ ಮಾಡಲು ಕೆಪಿಸಿಎಲ್ ನಿರ್ಧರಿಸಿದೆ. ಅದಕ್ಕೆ ಪ್ರತಿನಿತ್ಯ 20 ಕೋಲ್ ರೇಕ್ ವರೆಗೂ ಕಲ್ಲಿದ್ದಲು ಅಗತ್ಯವಿದ್ದು, ಅಷ್ಟನ್ನು ತರಿಸಿಕೊಳ್ಳಲು ವ್ಯವಸ್ಥೆ ಮಾಡಲಾಗಿದೆ," ಎಂದರು.

**ರೈಲ್ವೆ ಅಧಿಕಾರಿಗಳ ಭೇಟಿ:**

ಈ ಮಧ್ಯೆ ಮಹಾರಾಷ್ಟ್ರದ ನಾಗಪುರದಲ್ಲಿ ರೈಲ್ವೆ ಹಿರಿಯ ವಿಭಾಗೀಯ ವ್ಯವಸ್ಥಾಪಕ (ಕಾರ್ಯಾಚರಣೆ) ಕೃಷ್ಣಾತ್ ಎಸ್. ಪಾಟೀಲ್ ಅವರನ್ನು ಕೆಪಿಸಿಎಲ್ ವ್ಯವಸ್ಥಾಪಕ ನಿರ್ದೇಶಕರಾದ ರಾಜೇಂದ್ರ ಚೋಳನ್ ನೇತೃತ್ವದ ಅಧಿಕಾರಿಗಳು ಭೇಟಿಯಾಗಿ, ರಾಜ್ಯದ ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಿಗೆ ಹೆಚ್ಚುವರಿ ಕಲ್ಲಿದ್ದಲು ಪೂರೈಸಲು ಅಗತ್ಯ ರೈಲು ಬೋಗಿಗಳನ್ನು ವ್ಯವಸ್ಥೆ ಮಾಡುವಂತೆ ಕೋರಿದ್ದಾರೆ. ಇದಕ್ಕೆ ಸಮ್ಮತಿಸಿದ ರೈಲ್ವೆ ಅಧಿಕಾರಿಗಳು, ಕೆಪಿಸಿಎಲ್‌ಗೆ ಅಗತ್ಯ ಖಾಲಿ ರೇಕುಗಳನ್ನು ಪೂರೈಸಲು ಸಮ್ಮತಿಸಿದ್ದಾರೆ.

# ಬೀಗಮುದ್ರೆ ತೆರವುಗೊಳಿಸದಿದ್ದರೆ ರಾಜ್ಯಾದ್ಯಂತ ಕಲ್ಲುಗಣಿ ಬಂದ್: ಗಣಿ ಮತ್ತು ಸ್ಟೋನ್ ಕ್ರಷರ್ ಮಾಲೀಕರ ಒಕ್ಕೂಟ ಎಚ್ಚರಿಕೆ



**ಬೆಂಗಳೂರು, ಜು.29:** ನಗರದ ಹೊರ ವಲಯದ ಕಲ್ಲುಗಣಿಯಲ್ಲಿ ಬಂಡೆ ಕುಸಿದು ಏಳು ಮಂದಿ ಆಕಸ್ಮಿಕವಾಗಿ ಮೃತಪಟ್ಟ ದುರ್ಘಟನೆಯನ್ನು ಮುಂದಿಟ್ಟುಕೊಂಡು ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ 65 ಕಲ್ಲುಗಣಿಗಳಿಗೆ ಬೀಗಮುದ್ರ ಹಾಕಿದ್ದು, ಇದನ್ನೇ ನಂಬಿಕೊಂಡಿದ್ದ ಹತ್ತು ಸಾವಿರ ಕೂಲಿ ಕಾರ್ಮಿಕರು ಇದರಿಂದ ಬೀದಿಗೆ ಬಿದ್ದಿದ್ದಾರೆ. ಸರ್ಕಾರದ ಧೋರಣೆ ಯಿಂದ ಪ್ರತಿ ಟನ್ ಎಂ.ಸ್ಯಾಂಡ್ ಮತ್ತು ಜಲ್ಲಿ 500 ರಿಂದ 600 ರೂಪಾಯಿ ಹೆಚ್ಚಾಗಿದೆ ಎಂದು ಕರ್ನಾಟಕ ರಾಜ್ಯ ಕಲ್ಲುಗಣಿ ಮತ್ತು ಸ್ಟೋನ್ ಕ್ರಷರ್ ಮಾಲೀಕರ ಒಕ್ಕೂಟದ ಅಧ್ಯಕ್ಷ ಡಿ. ಸಿದ್ದರಾಜು ಆರೋಪಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾವುದೋ ಒಂದು ಗಣಿಯಲ್ಲಿ ಆದ ದುರಂತವನ್ನು ಮುಂದಿಟ್ಟುಕೊಂಡು ಬೆಂಗಳೂರು ದಕ್ಷಿಣದ ಹೊರವಲಯದಲ್ಲಿರುವ ಮದಪಟ್ನ ಗ್ರಾಮದ (ತಾವರೆಕೆರೆ ಹೋಬಳಿ) ದೊಡ್ಡೇರಿ, ದೊಂಡೇಣಹಳ್ಳಿ, ಸೂಲೀವಾರ, ಮಾಧವಪಟ್ಟಣ ವಿಭಾಗದ ಕ್ರಷರ್‌ಗಳು ಮತ್ತು ಕಲ್ಲು ಕ್ವಾರಿಗಳನ್ನು ಸ್ಥಗಿತಗೊಳಿಸಲಾಗಿದೆ. ನಾವು ಪರಿಸರ ಇಲಾಖೆಯಿಂದ ಅನುಮತಿ ಪಡೆದಿದ್ದು, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಎಲ್ಲಾ ಅನುಮತಿಯೊಂದಿಗೆ 30 ವರ್ಷಗಳ ಅವಧಿಗೆ ಪರವಾನಗಿ ನೀಡಿದೆ. ಸರ್ಕಾರದ ಎಲ್ಲಾ ಸುರಕ್ಷತಾ ಮಾನದಂಡಗಳನ್ನು ಚಾಚು ತಪ್ಪದೇ ಪಾಲಿಸುತ್ತಿದ್ದೇವೆ. ಆದರೆ ಗಣಿಗಳ ಕಾರ್ಯನಿರ್ವಹಣೆಗೆ ತಾತ್ಕಾಲಿಕ ನಿರ್ಬಂಧ ಹೇರಿದ್ದು, ಇದರಿಂದ ಮನೆ ನಿರ್ಮಿಸುವವರಿಗೂ ಹೊರೆಯಾಗುತ್ತಿದೆ ಎಂದರು.

ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳ ಧೋರಣೆಯಿಂದ ಶಿವಮೊಗ್ಗದಲ್ಲಿ ಕ್ರಷರ್ ಮಾಲೀಕರೊಬ್ಬರು ಇಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸರ್ಕಾರ ಕೂಡಲೇ ಕ್ರಷರ್ ಮತ್ತು ಕಲ್ಲು ಗಣಿಗಾರಿಕೆಗೆ ಅವಕಾಶ ನೀಡದೇ ಇದ್ದಲ್ಲಿ ಆತ್ಮಹತ್ಯೆ ಸರಣಿ ಆರಂಭವಾಗಲಿದೆ. ಇದಕ್ಕೆ ಸರ್ಕಾರವೇ ಹೊಣೆಯಾಗಬೇಕಾಗುತ್ತದೆ. ಈ ಬಗ್ಗೆ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಮತ್ತು ಗಣಿ ಇಲಾಖೆ ಉನ್ನತಾಧಿಕಾರಿಗಳಿಗೆ ಮನವಿ ಪತ್ರ ನೀಡಿ ಕೂಡಲೇ ಕಲ್ಲುಗಾರಿಕೆ ಆರಂಭಕ್ಕೆ ಅನುಮತಿ ನೀಡಬೇಕೆಂದು ಕೋರಿದ್ದೇವೆ.

ಒಂದು ವೇಳೆ ನಮ್ಮ ಮನವಿಗೆ ಸ್ಪಂದಿಸದಿದ್ದರೆ ರಾಜ್ಯಾದ್ಯಂತ ಎಲ್ಲಾ ಕಲ್ಲುಗಣಿ ಮತ್ತು ಕ್ರಷರ್ ಗಳನ್ನು ಬಂದ್ ಮಾಡಿ ಹೋರಾಟ ಮಾಡುತ್ತೇವೆ. ಜೊತೆಗೆ ಶೀಘ್ರದಲ್ಲೇ ದುರಂತ ಸಂಭವಿಸಿದ ಮಾದಾಪಟ್ಟಣದಿಂದ ಫ್ರೀಡಂ ಪಾರ್ಕ್‌ವರೆಗೆ ಪಾದಯಾತ್ರೆ ಕೈಗೊಂಡು ಮೌನ ಪ್ರತಿಭಟನೆ ಮಾಡುತ್ತೇವೆ ಎಂದರು.

ಯಾರೋ ಮಾಡಿದ ತಪ್ಪಿಗೆ ಸರ್ಕಾರದ ಬೊಕ್ಕಸಕ್ಕೂ ಸಹ ನಷ್ಟವಾಗುತ್ತಿದೆ. ಕಳೆದ ವರ್ಷ 5 ಸಾವಿರ ಕೋಟಿ ಇದ್ದ ಗಣಿ ವಲಯದ ತೆರಿಗೆಯಲ್ಲಿ ಗುರಿ ಮೀರಿ ಒಂದು ಸಾವಿರ ಕೋಟಿ ರೂಗೂ ಅಧಿಕ ಮೊತ್ತವನ್ನು ತೆರಿಗೆ ರೂಪದಲ್ಲಿ ನೀಡಿದ್ದೇವೆ. ಈ ಬಾರಿ 11 ಸಾವಿರ ಕೋಟಿ ಗುರಿ ನಿಗದಿ ಮಾಡಿದ್ದು, ಸರ್ಕಾರ ಇದೇ ರೀತಿಯ ಧೋರಣೆ ಅನುಸರಿಸಿದರೆ ತೆರಿಗೆ ಸಂಗಹ್ರದ ಮೇಲೂ ಪ್ರತಿಕೂಲ ಪರಿಣಾಮ ಬೀರಲಿದೆ ಎಂದು ಡಿ. ಸಿದ್ದರಾಜು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷ ಮನೋಜ್ ಶೆಟ್ಟಿ, ಕಾರ್ಯದರ್ಶಿ ಮದನ್, ಗಿರೀಶ್, ಕೆ.ಎಸ್. ರಾಮಸ್ವಾಮಿ, ಖಜಾಂಚಿ ಉಮಾಶಂಕರಯ್ಯ, ನಿರ್ದೇಶಕರಾದ ಎಸ್. ಮಂಜುನಾಥ್, ಮಹೇಶ್ ಎಲ್.ಆರ್, ಮಂಜುನಾಥ್ ಎಸ್, ಕೆ.ಎಸ್. ವೆಂಕಟೇಶ್ವರ, ರಾಮಲಿಂಗಪ್ಪ ಕಾಮಾಜಿ ಮತ್ತಿತರರು ಉಪಸ್ಥಿತರಿದ್ದರು.

## ಕೆಇಎ: ವಿಎಒ ಅರ್ಜಿ ಸಲ್ಲಿಸಲು ಆ. 7ರವರೆಗೆ ಅವಕಾಶ: ಎಚ್.ಪ್ರಸನ್ನ

**ಬೆಂಗಳೂರು, ಜು.29:** ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗೆ ಅರ್ಜಿ ಸಲ್ಲಿಸುವ ಕೊನೆ ದಿನಾಂಕವನ್ನು ಆಗಸ್ಟ್ 7ರವರೆಗೆ ವಿಸ್ತರಿಸಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ.

ಶುಲ್ಕ ಪಾವತಿಸಲು ಆಗಸ್ಟ್ 10 ಕೊನೆ ದಿನ. ಸಾರ್ವಜನಿಕರ ಕೋರಿಕೆ ಮೇರೆಗೆ ದಿನಾಂಕ ವಿಸ್ತರಿಸಲಾಗಿದೆ ಎಂದು ತಿಳಿಸಿದ್ದಾರೆ.



## ಸಿವಿಲ್ ಪೊಲೀಸ್ ಪರೀಕ್ಷೆ: ಕಲ್ಯಾಣ ಕರ್ನಾಟಕ ಅಭ್ಯರ್ಥಿಗಳ ಸಮಯ ಬದಲು

**ಬೆಂಗಳೂರು, ಜು.29:** ಕಲ್ಯಾಣ ಕರ್ನಾಟಕ ವೃಂದದ ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಗಳ ಭರ್ತಿಗೆ ಆಗಸ್ಟ್ 2ರಂದು ನಡೆಯುವ ಲಿಖಿತ ಪರೀಕ್ಷೆಯ ಸಮಯವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬದಲಾವಣೆ ಮಾಡಿದೆ.

ಈ ಮೊದಲು ನಿರ್ಧರಿಸಿದಂತೆ ಮಧ್ಯಾಹ್ನ 2.30ರ ಬದಲಿಗೆ ಸಂಜೆ 4 ಗಂಟೆಗೆ ಪರೀಕ್ಷೆ ಆರಂಭವಾಗಲಿದೆ ಎಂದು ಪ್ರಾಧಿಕಾರದ ಕಾರ್ಯ ನಿರ್ವಾಹಕ ನಿರ್ದೇಶಕ ಹೆಚ್. ಪ್ರಸನ್ನ ತಿಳಿಸಿದ್ದಾರೆ.

ಕೆಲ ಅಭ್ಯರ್ಥಿಗಳು, ಮಧ್ಯಾಹ್ನದ ಪರೀಕ್ಷಾ ಕೇಂದ್ರಗಳು ಬೆಳಗಿನ ಪರೀಕ್ಷಾ ಕೇಂದ್ರದಿಂದ ದೂರ ಇದ್ದು ತೆರಳುವುದಕ್ಕೆ ಕಷ್ಟ ಎನ್ನುವ ಅಭಿಪ್ರಾಯ ವ್ಯಕ್ತಪಡಿಸಿದ್ದರು. ಈ ಹಿನ್ನೆಲೆಯಲ್ಲಿ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಸಮಯ ಬದಲಾವಣೆ ಮಾಡಿದ್ದು ಸಂಜೆ 4ರಿಂದ 5.30ರವರೆಗೆ ಪರೀಕ್ಷೆ ನಡೆಯಲಿದೆ.

ಉಳಿದಂತೆ ಬೆಳಗಿನ ಪರೀಕ್ಷೆಗಳು ನಿಗದಿಯಂತೆ ನಡೆಯಲಿವೆ. ಇದರಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ಅವರು ವಿವರಿಸಿದ್ದಾರೆ.

ರಾಯಚೂರು, ಕೊಪ್ಪಳ: ಹೊಸದಾಗಿ ಪ್ರವೇಶ ಪತ್ರ ಡೌನ್‌ಲೋಡ್ ಮಾಡಿಕೊಳ್ಳಲು ಸಲಹೆ ನೀಡಿದ್ದಾರೆ. ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ ಪರೀಕ್ಷೆ ಬರೆಯುತ್ತಿರುವ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ಎಲ್ಲ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ
KEA
Karnataka Examinations Authority

ಅಭ್ಯರ್ಥಿಗಳು ಹೊಸದಾಗಿ ಪ್ರವೇಶ ಪತ್ರ ಡೌನ್‌ಲೋಡ್ ಮಾಡಿಕೊಳ್ಳಲು ಕೋರಲಾಗಿದೆ.

ಈ ಹಿಂದೆ ಡೌನ್‌ಲೋಡ್ ಮಾಡಿಕೊಂಡಿರುವವರು ಕೂಡ ಹೊಸದಾಗಿ ಡೌನ್‌ಲೋಡ್ ಮಾಡಿಕೊಳ್ಳಬೇಕು ಎಂದು ಪ್ರಸನ್ನ ಅವರು ಸಲಹೆ ನೀಡಿದ್ದಾರೆ.

## ಅತ್ಯಾಚಾರಿಗಳನ್ನು ಸಮರ್ಥಿಸಿದ ಪ್ರಹ್ಲಾದ್ ಜೋಷಿ ಶಿಕ್ಷಣ ಮಂತ್ರಿಯಾಗಿರುವುದು ತಲೆ ತಗ್ಗಿಸುವಂತಾಗಿದೆ: ಸಿದ್ದರಾಮಯ್ಯ

**ಬೆಂಗಳೂರು, ಜು.29:** ಕರ್ನಾಟಕದ ಸಂಸದರೊಬ್ಬರು ದೇಶದ ಶಿಕ್ಷಣ ಸಚಿವರಾದರೆಂದು ನಾವೆಲ್ಲರೂ ಹೆಮ್ಮೆ ಪಡಬೇಕಾಗಿತ್ತು, ಆದರೆ ಪ್ರಧಾನಿ ನರೇಂದ್ರ ಮೋದಿ ಅವರು ಮಹಿಳೆಯ ಮೇಲಿನ ಅತ್ಯಾಚಾರಿಗಳನ್ನು ಸಮರ್ಥಿಸಿದ್ದ ಸಂಸದ ಪ್ರಹ್ಲಾದ ಜೋಷಿ ಅವರನ್ನು ಶಿಕ್ಷಣ ಸಚಿವನನ್ನಾಗಿ ಮಾಡಿ ಕನ್ನಡಿಗರೆಲ್ಲರೂ ತಲೆತಗ್ಗಿಸುವ ಹಾಗೆ ಮಾಡಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ನಿರ್ಗಮಿತ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರಿಗಿಂತ ಪ್ರಹ್ಲಾದ್ ಜೋಷಿ ಅವರು ಯಾವುದೇ ರೀತಿ ಭಿನ್ನರಲ್ಲ, ಇವರಿಬ್ಬರೂ ಸೈದ್ಧಾಂತಿಕವಾಗಿ ಅವಳಿ–ಜವಳಿಗಳು. ಇಬ್ಬರೂ ಸಂಘ ಪರಿವಾರದ ಎಬಿವಿಪಿಯಿಂದ ಬಂದವರು. ಮಹಿಳೆಯರು, ದಲಿತರು, ಬಡವರು, ಹಿಂದುಳಿದ ಜಾತಿಗಳು ಮತ್ತು ಮುಸ್ಲಿಂ – ಕ್ರಿಶ್ಚಿಯನರ ಬಗ್ಗೆ ಆರ್.ಎಸ್.ಎಸ್ ಹೊಂದಿರುವ ಅಭಿಪ್ರಾಯವನ್ನೇ ಹೊಂದಿದವರು. ಇದಕ್ಕಾಗಿಯೇ ಪ್ರಧಾನ್ ಅವರ ಸ್ಥಾನಕ್ಕೆ ಜೋಷಿ ಅವರನ್ನು ತಂದು ಕೂರಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿಯವರಿಗೆ ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಬಗ್ಗೆ ಒಂದಿಷ್ಟು ಕಾಳಜಿ ಹೊಂದಿದ್ದರೆ ತಕ್ಷಣ ಶಿಕ್ಷಣ ಖಾತೆಯನ್ನು ಜೋಷಿ ಅವರಿಂದ ಕಿತ್ತುಕೊಂಡು, ಯಾರಾದರೂ ಅರ್ಹರಿದ್ದರೆ ಅಂತವರಿಗೆ ಈ ಮಹತ್ವದ ಖಾತೆಯ ಹೊಣೆ ವಹಿಸಿ ಕೊಡಬೇಕು ಎಂದು ಒತ್ತಾಯಿಸಿದ್ದಾರೆ.

## ಎಸ್‌ಐಆರ್ ಜವಾಬ್ದಾರಿಯುತವಾಗಿ ನಿಭಾಯಿಸಿ: ಅನ್ಬುಕುಮಾರ್

**ಬೆಂಗಳೂರು, ಜು.29:** ಮತದಾರರ ನೊಂದಣಾಧಿಕಾರಿಗಳು ಹಾಗೂ ಬಿಎಲ್.ಓ ಗಳು ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯವನ್ನು ಜವಾಬ್ದಾರಿಯುತವಾಗಿ ನಿರ್ವಹಿಸಬೇಕೆಂದು ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್ ಕರೆ ನೀಡಿದ್ದಾರೆ.

ಬೆಂಗಳೂರು ಕೇಂದ್ರ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಭಾರತೀಯ ಚುನಾವಣಾ ಆಯೋಗದ ಮಾರ್ಗಸೂಚಿಗಳಂತೆ ಪಾರದರ್ಶಕವಾಗಿ, ನಿಖರವಾಗಿ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಾರ್ವಜನಿಕರಿಗೆ ಅನಾನುಕೂಲ ವಾಗದಂತೆ ಪ್ರಕ್ರಿಯೆ ನಡೆಸಬೇಕು. ವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿ ಯದಂತೆ, ಸಾರ್ವಜನಿಕರಿಗೆ ಯಾವುದೇ ಅನಾನುಕೂಲವಾಗದಂತೆ ಹಾಗೂ ಯಾವುದೇ ನೈಜ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಪಾರದರ್ಶಕತೆಯಿಂದ ನಿಗಧಿತ ಅವಧಿಯಲ್ಲಿ ಗುರಿ ತಲುಪಲು ಕ್ರಮ ಕೈಗೊಳ್ಳಲು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಎಸ್.ಐ.ಆರ್ ಕಾರ್ಯವನ್ನು ನಿಗದಿತ ಅವಧಿಯೊಳಗೆ ನಿಖರವಾಗಿ ಪೂರ್ಣಗೊಳಿಸಲು ಅಧಿಕಾರಿಗಳು ತಂಡಗಳಾಗಿ ಕಾರ್ಯನಿರ್ವಹಿಸಬೇಕು. ಪರಸ್ಪರ ಸಮನ್ವಯದಿಂದ ಕೆಲಸ ಮಾಡಿದರೆ ಕಾರ್ಯವನ್ನು ವೇಗವಾಗಿ ಹಾಗೂ ಗುಣಮಟ್ಟದೊಂದಿಗೆ ಪೂರ್ಣಗೊಳಿಸಲು ಸಾಧ್ಯವಾಗುತ್ತದೆ ಎಂದು ಸೂಚಿಸಿದರು.

ಸ್ಥಳದಲ್ಲಿ ದೊರೆಯದವರು, ಸ್ಥಳಾಂತರವಾದವರು, ಮೃತಪಟ್ಟವರು, ಒಂದಕ್ಕಿಂತ ಹೆಚ್ಚು ಕಡೆಗಳಲ್ಲಿ ಹೆಸರು ನೋಂದಣಿಯಾದವರ ಬಗ್ಗೆ ನಿಖರವಾದ ಪರಿಶೀಲನೆ ಅಗತ್ಯವಾಗಿದೆ. ಮೃತ ಮತದಾರರ ಪ್ರಕರಣಗಳಲ್ಲಿ ಮರಣ ಪ್ರಮಾಣಪತ್ರವನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು. ಒಂದು ವೇಳೆ ಅದು ಲಭ್ಯವಿಲ್ಲದಿದ್ದರೆ, ನೆರೆಹೊರೆಯವರು ಅಥವಾ ಬಿ.ಎಲ್.ಎ.ಗಳ ಸಹಿಯೊಂದಿಗೆ 'ಮಹಾಜರ್' ಸಿದ್ಧಪಡಿಸುವಂತೆ ಸೂಚನೆ ನೀಡಿದರು.



ಬಿ.ಎಲ್.ಓ. ಗಳು ಎಸ್.ಐ.ಆರ್.ನ ಯಶಸ್ವಿಗೆ ತಳಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಮೇಲಾಧಿಕಾರಿಗಳು ಹಾಗೂ ಮತದಾರರ ನೋಂದಣಾಧಿಕಾರಿಗಳು ಬಿ.ಎಲ್.ಓ. ಗಳೊಂದಿಗೆ ಸಂಯಮ ದಿಂದ ನಡೆದುಕೊಂಡು ಅವರಿಂದ ಎಸ್.ಐ.ಆರ್. ಕಾರ್ಯದ ಯಶಸ್ವಿ ಗೊಳಿಸಲು ಸೂಚಿಸಿದರು.

ಮನೆ ಮನೆ ತೆರಳಿ ಎಸ್.ಐ.ಆರ್ ಅರ್ಜಿಗಳ ವಿತರಣೆ ಹಾಗೂ ಸಂಗ್ರಹಣೆಯೊಂದಿಗೆ ಎಸ್.ಐ.ಆರ್ ಕಾರ್ಯದ ಯಶಸ್ವಿಗೆ ಶ್ರಮಿಸುತ್ತಿರುವ ಎಲ್ಲಾ ಬಿ.ಎಲ್.ಓ. ಗಳಿಗೆ ನೀಡಬೇಕಾದ ಬಾಕಿ ಸಂಭಾವನೆಯನ್ನು ಕೂಡಲೇ ಬಿಡುಗಡೆ ಮಾಡಲು ಅಪರ ಜಿಲ್ಲಾ ಚುನಾವಣಾಧಿಕಾರಿ (ಕೇಂದ್ರ) ವ್ಯಾಪ್ತಿಯ ಎಲ್ಲಾ ಮತದಾರರ ನೋಂದಣಾಧಿಕಾರಿಗಳಿಗೆ ಸೂಚನೆ ನೀಡಿದರು.

### ಕಲ್ಯಾಣ ಕರ್ನಾಟಕದಲ್ಲಿ ಶೇ. 40-90 ರಷ್ಟು ಮಳೆ ಕೊರತೆ

# ತಕ್ಷಣ ಬರ ಘೋಷಣೆ ಮಾಡಿ ಪರಿಹಾರ ಕೈಕೊಳ್ಳಲು ಸಿ.ಟಿ.ರವಿ ಆಗ್ರಹ



**ರಾಯಚೂರು, ಜು. 29:** ಕಲ್ಯಾಣ ಕರ್ನಾಟಕ ಭಾಗದಲ್ಲಿ ವಾಡಿಕೆಗಿಂತ ಅತ್ಯಂತ ಕಡಿಮೆ ಮಳೆಯಾಗಿದ್ದು, ಎಲ್ಲಾ ತಾಲೂಕುಗಳಲ್ಲೂ ಶೇಕಡಾ 40 ರಿಂದ 90 ರಷ್ಟು ಮಳೆ ಕೊರತೆಯಾಗಿದೆ. ಆದ್ದರಿಂದ ರಾಜ್ಯ ಸರ್ಕಾರ ತಕ್ಷಣವೇ ಈ ಭಾಗವನ್ನು ಬರಪೀಡಿತ ಪ್ರದೇಶ ಎಂದು ಘೋಷಿಸಿ ಪರಿಹಾರ ಕೈಕೊಳ್ಳಬೇಕು ಎಂದು ಭಾರತೀಯ ಜನತಾ ಪಕ್ಷದ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಒತ್ತಾಯಿಸಿದರು.

ಜಿಲ್ಲೆಯಲ್ಲಿ ಬಿಜೆಪಿ ತಂಡದೊಂದಿಗೆ ಬರ ವೀಕ್ಷಣೆಗಾಗಿ ಆಗಮಿಸಿದ್ದ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಕಲ್ಯಾಣ ಕರ್ನಾಟಕದ 5 ಜಿಲ್ಲೆಗಳಲ್ಲಿ ಬರ ಅಧ್ಯಯನ ನಡೆಸಲಾಗುತ್ತಿದೆ. ಈ ಭಾಗದಲ್ಲಿ ಹೆಚ್ಚಾಗಿ ತೊಗರಿ ಬೆಳೆದ ರೈತರು ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದು, ಭಾರಿ ಪ್ರಮಾಣದ ನಷ್ಟ ಅನುಭವಿಸುತ್ತಿದ್ದಾರೆ. ಹವಾಮಾನ ಇಲಾಖೆ ಮುಂಚಿತವಾಗಿಯೇ ಮಳೆ ಕೊರತೆಯ ಮುನ್ಸೂಚನೆ ನೀಡಿತ್ತು. ಪ್ರಸ್ತುತ ಮಲಪ್ರಭಾ, ಕೃಷ್ಣರಾಜ ಸಾಗರ ಹಾಗೂ ತುಂಗಭದ್ರಾ ಜಲಾಶಯಗಳಲ್ಲೂ ಸಾಕಷ್ಟು ಪ್ರಮಾಣದಲ್ಲಿ ನೀರು ಸಂಗ್ರಹಣೆಯಗಿಲ್ಲ ಎಂದು ಕಳವಳ ವ್ಯಕ್ತಪಡಿಸಿದರು.

ರೈತರಿಗೆ ಪರಿಹಾರ ಮತ್ತು ನೆರವಿಗೆ ಬೇಡಿಕೆ: ಸರ್ಕಾರ ಕೂಡಲೇ ಬರಪೀಡಿತ ಪ್ರದೇಶವೆಂದು ಘೋಷಿಸಿ, ಬಿತ್ತನೆ ಮಾಡಿರುವ ಬೆಳೆಯ ಆಧಾರದ ಮೇಲೆ ಪ್ರತಿ ಎಕರೆಗೆ ಸೂಕ್ತ ಪರಿಹಾರ ನೀಡಬೇಕು. ರೈತರಿಗೆ ಹೊಸ ಸಾಲಗಳನ್ನು ಶೀಘ್ರ ವಿತರಿಸಬೇಕು, ಹಳೆಯ ಸಾಲ ಮನ್ನಾ ಮಾಡಬೇಕು ಮತ್ತು ಬಡ ರೈತರಿಗೆ ಉಚಿತವಾಗಿ ರಸಗೊಬ್ಬರ ನೀಡಬೇಕು. ಪ್ರತಿಯೊಂದು ತಾಲೂಕಿನಲ್ಲಿ ಗೋಶಾಲೆ ಹಾಗೂ ಹಸಿರು ಮೇವಿನ ಕೇಂದ್ರಗಳನ್ನು ತೆರೆಯಬೇಕು. ಉದ್ಯೋಗ ಖಾತರಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೊಳಿಸಿ ಜನ ಗುಳೆ ಹೋಗುವುದನ್ನು ತಡೆಯಬೇಕು ಎಂದು ಆಗ್ರಹಿಸಿದರು.

ತುಂಗಭದ್ರಾ ಜಲಾಶಯದಲ್ಲಿ 30 ಟಿ.ಎಂ.ಸಿ. ನೀರಿದ್ದು, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳ ರೈತರ ಬೆಳೆಗಳ ಅಗತ್ಯ ನೋಡಿಕೊಂಡು ನೀರು ಹರಿಸಬೇಕು. ಹಿಂದೆ ನಮ್ಮ ಸರ್ಕಾರದ ಅವಧಿಯಲ್ಲಿ 27 ಟಿ.ಎಂ.ಸಿ. ನೀರಿದ್ದಾಗಲೂ ರೈತರಿಗೆ ನೀರು ಒದಗಿಸಲಾಗಿತ್ತು ಎಂದು ನೆನಪಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಡಾ. ಬಸವರಾಜ ಕ್ಯಾವಟರ್, ಶಾಸಕ ದೊಡ್ಡನಗೌಡ ಪಾಟೀಲ್, ಮಾಜಿ ಶಾಸಕರುಗಳಾದ ಹಾಲಪ್ಪ ಆಚಾರ, ಪರಣ್ಣ ಮುನವಳ್ಳಿ, ಬಸವರಾಜ ದಡೇಸುಗೂರು, ಮಾಜಿ ವಿಧಾನ ಪರಿಷತ್ ಸದಸ್ಯ ಅಮರನಾಥ ಪಾಟೀಲ್ ಹಾಗೂ ಇತರ ಸ್ಥಳೀಯ ನಾಯಕರು ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ಸಿ.ಟಿ. ರವಿ ಅವರು ತಾಲೂಕಿನ ಹುಲಿಹೈದರ ಗ್ರಾಮದಲ್ಲಿ ಬೆಳೆ ಸಮೀಕ್ಷೆ ನಡೆಸಿ, ರೈತರೊಂದಿಗೆ ಸಂವಾದ ನಡೆಸಿದರು. ಬಳಿಕ ಲಕ್ಷ್ಮೀದೇವಿ ಕೆರೆ ರಸ್ತೆಯಲ್ಲಿರುವ ವೆಂಕಟರಮಣ ದೇವಸ್ಥಾನಕ್ಕೆ ಭೇಟಿ

**ದೇಶದಲ್ಲಿ ಇತ್ತೀಚೆಗೆ ನಡೆದ ನೀಟ ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ ಕುರಿತಂತೆ ಜಿರಳೆಗಳ ಹೋರಾಟಕ್ಕೆ ಬೆಂಬಲಿಸಿ ಕಾಂಗ್ರೆಸ್ ಕೂಡ ಲೋಕಸಭೆಯಲ್ಲಿ ಸದನ ನಡೆಯಲು ಬಿಡುತ್ತಿಲ್ಲ. ವಾಸ್ತವದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯಾಗಿದ್ದು ಪ್ರೊಫೆಸರುಗಳಿಂದ. ಅವರನ್ನು ಈಗಾಗಲೇ ಬಂಧಿಸಿ ಕ್ರಮ ಜರುಗಿಸಲಾಗಿದೆ. ಧರ್ಮೇಂದ್ರ ಪ್ರಧಾನ ರಾಜಿನಾಮೆ ನೀಡಬೇಕೆಂದು ಹೋರಾಟ ನಡೆಸುವುದು ಸರಿಯೇ? 2016ರಲ್ಲಿ ಕರ್ನಾಟಕದಲ್ಲಿ ಸಿದ್ದರಾಮಯ್ಯ ಸರ್ಕಾರದ ಅವಧಿಯಲ್ಲಿ ಪಿಯುಸಿ ಪ್ರಶ್ನೆ ಪತ್ರಿಕೆ ಸೋರಿಕೆಯಾಯಿತು. ಮತ್ತೊಮ್ಮೆ ಪರೀಕ್ಷೆ ನಡೆಯಿತು. ಅದೂ ಸೋರಿಕೆಯಾಯಿತು. ಹತ್ತು ದಿನಗಳಲ್ಲಿ ಎರಡು ಬಾರಿ ಸೋರಿಕೆಯಾದರೂ ಅಂದು ಸಚಿವರಾಗಿದ್ದ ಕಿಮ್ಮನೆ ರತ್ನಾಕರ ರಾಜಿನಾಮೆ ನಿಡಲಿಲ್ಲ. ನಾವೆಲ್ಲ ಬೊಬ್ಬೆ ಹೊಡೆದರೂ ಸಿದ್ದರಾಮಯ್ಯ ರಾಜಿನಾಮೆ ಕೊಡಲಿಲ್ಲ. ಈಗ ಧರ್ಮೇಂದ್ರ ಪ್ರಧಾನ ರಾಜಿನಾಮೆ ಕೊಡಬೇಕಂತೆ ಯಾಕೆ? ಕಾಂಗ್ರೆಸ್ಸಿಗೊಂದು ನ್ಯಾಯ ಬಿಜೆಪಿಗೊಂದು ನ್ಯಾಯವೇ? ಇದೇ ವಿಷಯವನ್ನೆತ್ತಿಕೊಂಡು ರಾಜಕೀಯ ಪಪ್ಪು ರಾಹುಲ್ ಗಾಂದಿ ಸದನದಲ್ಲಿ ಗಲಾಟೆ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.**



ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಮಾವಿನಕರೆ ಶ್ರೀ ರಂಗನಾಥಸ್ವಾಮಿ ಬೆಟ್ಟದ ತಪ್ಪಲಿನಲ್ಲಿ ಚನ್ನಮ್ಮ ದೇವೇಗೌಡ ಪವಿತ್ರ ಸಮಾಧಿ ಸ್ಥಳಕ್ಕೆ ಮಾಜಿ ಪ್ರಧಾನಿ ಎಚ್.ಡಿ.ದೇವೆಗೌಡರ ಆಪ್ತಸಹಾಯಕ ಚಂದ್ರಶೇಖರ್ ಪತ್ನಿ ಸಮೇತ ಭೇಟಿ ನೀಡಿ ಗೌರವ ವಂದನೆ ಸಲ್ಲಿಸಿದರು.



ತಮಿಳುನಾಡಿಗೆ ಪ್ರತಿದಿನ 3,500 ಕ್ಯೂಸೆಕ್ ನೀರು ಬಿಡುವಂತೆ ಕರ್ನಾಟಕಕ್ಕೆ ಆದೇಶಿಸಿರುವ ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯೂಆರ್‌ಸಿ)ಯ ಇತ್ತೀಚಿನ ನಿರ್ದೇಶನ ವಿರೋಧಿಸಿ ಚಾಮರಾಜನಗರದಲ್ಲಿ ಬುಧವಾರ ರೈತರು ಪ್ರತಿಭಟನೆ ನಡೆಸಿದರು.

# ಸಿದ್ದರಾಮಯ್ಯ ಸ್ವಚ್ಛ ರಾಜಕಾರಣಿ, ಮಗನಿಂದಾಗಿ ಕಲುಷಿತ: ಬಸನಗೌಡ ಪಾಟೀಲ್ ಯತ್ನಾಳ್

**ವಿಜಯಪುರ, ಜು.29:** ಸಿದ್ದರಾಮಯ್ಯ ಪಾಪ ಬಹಳ ಅತ್ಯಂತ ಸ್ವಚ್ಛ ರಾಜಕಾರಣಿ. ಆದರೆ, ಮಗ ಮಾಡಿದ ಕರ್ಮಕಾಂಡದಿಂದ ಕಲುಷಿತರಾಗಿದ್ದಾರೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ.

ವಿಜಯಪುರದಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಕಲುಷಿತಗೊಳ್ಳಲು ಅವರ ಮಗ ಮತ್ತು ಭೈರತಿ ಸುರೇಶ್ ಕಾರಣ ಎಂದು ಯತ್ನಾಳ್ ಆರೋಪಿಸಿದ್ದಾರೆ. ಜಾತಿ ವ್ಯವಸ್ಥೆ, ಬಾಯಿತೆರೆದ್ರೆ ಅಲ್ಪ ಸಂಖ್ಯಾತರಿಗೆ ಅಷ್ಟು ಕೋಟಿ, ಇಷ್ಟು ಕೋಟಿ ಎಂದು ಹೇಳ್ತಾರೆ, ಅವರಿಗೆ ದಲಿತರ ಬಗ್ಗೆ ಸ್ವಲ್ಪವೂ ಕಾಳಜಿಯಿಲ್ಲ, ತಮ್ಮ ಸಮುದಾಯಕ್ಕೆ ಅವರು ಹೆಚ್ಚಿನದಾಗಿ ಏನು ಮಾಡಿಲ್ಲ. ಸಿದ್ದರಾಮಯ್ಯ ಸಂಪೂರ್ಣವಾಗಿ ಸಕ್ರಿಯ ರಾಜಕೀಯದಿಂದ ನಿವೃತ್ತಿ ಪಡೆಯಬೇಕು.



ಕಾಂಗ್ರೆಸ್ ಮಣ್ಣಾಗಬೇಕು ಎಂದರು.

ಸಿಎಂ ಡಿಕೆ ಶಿವಕುಮಾರ್ ಪ್ರಧಾನಿ ನರೇಂದ್ರ ಮೋದಿ ಮನೆ ಮುಂದೆ ಹೋಗಿ ಪ್ರತಿಭಟನೆ ಮಾಡುತ್ತಿದ್ದಾರೆ, ರಾಜ್ಯದಲ್ಲಿ 4.80 ಲಕ್ಷ ಹುದ್ದೆಗಳು ಖಾಲಿಯಿವೆ, ಕೆಪಿಎಸ್‌ಸಿ ಹಗರಣ ಸಂಬಂಧ ಮೊದಲು ಡಿ.ಕೆ ಶಿವ ಕುಮಾರ್ ರಾಜಿನಾಮೆ ನೀಡಬೇಕು. ಕೆಪಿಎಸ್‌ಸಿ ಯನ್ನು ಮೊದಲು ವಿಸರ್ಜನೆ ಮಾಡಬೇಕು ಎಂದು ಯತ್ನಾಳ್ ಆಗ್ರಹಿಸಿದ್ದಾರೆ.

## ಬಿಜೆಪಿಗೆ ಧಮ್ ಇಲ್ಲ

ಕರ್ನಾಟಕದಲ್ಲಿ ಬಿಜೆಪಿ ನರಸತ್ತಿದೆ. ಪಕ್ಷಕ್ಕೆ ಧಮ್ ಇಲ್ಲ. ಇದರಿಂದ ಕಾಂಗ್ರೆಸ್ ನವರಿಗೆ ವಿರೋಧ ಪಕ್ಷಗಳ ಬಗ್ಗೆ ಯಾವುದೇ ಭಯವಿಲ್ಲ. ವಿಜಯೇಂದ್ರನ ಕ್ಯಾಂಡಿಡೇಟ್ ಒಬ್ಬ 2 ಕೋಟಿ ಹಣ ಕೊಟ್ಟು ಕೆಲಸ ತೆಗೆದುಕೊಂಡಿರುವುದು ಬಹಿರಂಗ ಸತ್ಯವಾಗಿದೆ. ಪ್ರತಾಪ್ ಸಿಂಹನನ್ನು ಮೂಲೆಗುಂಪು ಮಾಡಿದ್ದಾರೆ. ಯಾವ ಕಾರಣಕ್ಕೆ ಟಿಕೆಟ್ ಕೊಟ್ಟಿಲ್ಲ ಎಂಬುದನ್ನು ಇದುವರೆಗೆ ತಿಳಿಸಿಲ್ಲ ಎಂದರು. ಪಕ್ಷಕ್ಕೆ ದುಡಿದವರಿಗಲ್ಲ ರಾತ್ರಿ ಯಾರು ಸೂಟ್‌ಕೇಸ್ ತಗೊಂಡು ಹೋಗಿ ಕೊಡ್ತಾರೋ ಅವರಿಗೆ ಟಿಕೆಟ್ ಇಲ್ಲ ಎಂದರು. ಕೆಪಿಎಸ್‌ಸಿ ಅಧ್ಯಕ್ಷರ ಮನೆಯಲ್ಲಿ ಯಡಿಯೂರಪ್ಪ ಮತ್ತು ವಿಜಯೇಂದ್ರ ಅವರ ಫೋಟೋ ಇದೆ, ದೇಶದ ಹೋರಾಟಗಾರರ ಯಾವುದೇ ಫೋಟೋ ಇಲ್ಲ. ವಿಜಯೇಂದ್ರ ಎಲ್ಲಾದ್ರೂ ಬಾಯಿ ಬಿಟ್ಟಿದ್ದಾನಾ. ಅಂತ ಭ್ರಷ್ಟನನ್ನ ಮೇಲಿನವರು ಹೇಗೆ ರಾಜ್ಯಾಧ್ಯಕ್ಷ ನನ್ನಾಗಿ ಮಾಡಿದರು ಎಂದು ಪ್ರಶ್ನಿಸಿದ್ದಾರೆ. ಲಿಂಗಾಯತ ಸಮುದಾಯವನ್ನು ಯಡಿಯೂರಪ್ಪ ಗುತ್ತಿಗೆ ತಗೊಂಡಿದ್ದಾರಾ ಎಂದು ಪ್ರಶ್ನಿಸಿದ್ದಾರೆ.

### ಅಕ್ಕಮಹಾದೇವಿ ವಿವಿಯ ದಶಮಾನೋತ್ಸವ ಕಟ್ಟಡ, ಸಂಸ್ಥಾಪನಾ ದಿನಾಚರಣೆ

# ಶಿಕ್ಷಣದೊಂದಿಗೆ ಕೌಶಲ್ಯ ಕರಗತ ಮಾಡಿಕೊಳ್ಳಿ: ಸಭಾಪತಿ ಬಸವರಾಜ ಹೊರಟ್ಟಿ ಸಲಹೆ

**ವಿಜಯಪುರ, ಜು.29–** ದೇಶದ ಅಭಿವೃದ್ಧಿ ಯಲ್ಲಿ ಮಹಿಳೆಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಮಹಿಳೆಯರು ಶಿಕ್ಷಣವಂತರಾಗುವುದರ ಜೊತೆಗೆ ವಿವಿಧ ಕೌಶಲ್ಯಗಳನ್ನು ಕರಗತ ಮಾಡಿಕೊಳ್ಳಬೇಕು ಎಂದು ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಎಸ್. ಹೊರಟ್ಟಿ ಅವರು ಹೇಳಿದರು. ನಗರದ ಹೊರವಲಯದಲ್ಲಿರುವ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದಲ್ಲಿ ನೂತನವಾಗಿ ನಿರ್ಮಿಸಲಾದ ದಶಮಾನೋತ್ಸವ ಕಟ್ಟಡದ ಉದ್ಘಾಟನೆ ಹಾಗೂ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.




ಮಹಿಳೆಯರು ಮನಸ್ಸು ಮಾಡಿದರೆ ಯಾವುದೇ ಕ್ಷೇತ್ರದಲ್ಲೂ ಸಾಧನೆ ಮಾಡಲು ಸಾಧ್ಯ. ಹಾಗಾಗಿ ವಿದ್ಯಾರ್ಥಿನಿಯರು ಕಲಿಕೆಯಲ್ಲಿ ಹೊಸ ಆವಿಷ್ಕಾರ ಮಾಡಬೇಕು ಎಂದರು. ಬಸವಣ್ಣ ಹಾಗೂ ಅಕ್ಕಮಹಾದೇವಿಯವರ ವಚನಗಳನ್ನು ವಿದ್ಯಾರ್ಥಿನಿಯರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಉತ್ತಮ ಜ್ಞಾನ, ಶಿಕ್ಷಣ ಹಾಗೂ ಆತ್ಮವಿಶ್ವಾಸದಿಂದ ಜೀವನದಲ್ಲಿ ಉನ್ನತ ಸ್ಥಾನಕ್ಕೇರಬಹುದಾಗಿದೆ ಎಂದು ತಿಳಿಸಿದರು.

ಭಾರತದ ಮೊದಲ ವಿಜ್ಞಾನ ಅಕಾಡೆಮಿಯನ್ನು ಕರ್ನಾಟಕದಲ್ಲಿ ಆರಂಭಿಸಲಾಗಿದ್ದು, ಅದರ ಉದ್ಘಾಟನೆಯನ್ನು ಅಂದಿನ ರಾಷ್ಟ್ರಪತಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ನೆರವೇರಿಸಿದ್ದನ್ನು ಮೆಲುಕು ಹಾಕಿದ ಹೊರಟ್ಟಿ ಅವರು, ಶಿಕ್ಷಣ ಮತ್ತು ಸಂಶೋಧನೆಯ ಕ್ಷೇತ್ರದಲ್ಲಿ ಕರ್ನಾಟಕ ರಾಜ್ಯದ ಕೊಡುಗೆ ಮಹತ್ತರವಾಗಿದೆ ಎಂದು ಹೇಳಿದರು.

ಮಹಿಳೆಯರು ಸಣ್ಣ ಉದ್ಯಮಗಳಿಂದಲೂ ದೊಡ್ಡ ಮಟ್ಟದ ಯಶಸ್ಸು ಸಾಧಿಸಬಹುದು. ತಮ್ಮ ಬಾಲ್ಯದ ಸ್ನೇಹಿತೆಯೊಬ್ಬರು ಮಹಿಳೆಯರಿಗೆ ಟೈಲರಿಂಗ್ ತರಬೇತಿ ನೀಡಿ ಯಶಸ್ವಿ ಉದ್ಯಮಿಯಾಗಿರುವುದನ್ನು ಉದಾಹರಿಸಿದ ಅವರು, "ನಮ್ಮಿಂದ ಏನೂ ಸಾಧ್ಯವಿಲ್ಲ" ಎಂಬ ಮನೋಭಾವವನ್ನು ಮಹಿಳೆಯರು ತೊರೆಯಬೇಕು ಎಂದು ಸಲಹೆ ನೀಡಿದರು. ಮಹಿಳೆಯರು ಅಡುಗೆ ಮನೆಗೆ ಮಾತ್ರ ಸೀಮಿತರಲ್ಲ. ನ್ಯಾಯಾಂಗ, ಪೊಲೀಸ್, ವೈದ್ಯಕೀಯ, ಶಿಕ್ಷಣ, ಆಡಳಿತ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲೂ ಮಹಿಳೆಯರಿದ್ದಾರೆ. ಅವರಿಗೆ ಎಲ್ಲೆಡೆ ಉತ್ತಮ ಅವಕಾಶಗಳಿದ್ದು, ಅವುಗಳನ್ನು ಸದುಪಯೋಗ ಪಡಿಸಿಕೊಂಡು ಸಾಧನೆಯತ್ತ ಹೆಜ್ಜೆ ಇಡಬೇಕು ಎಂದು ವಿದ್ಯಾರ್ಥಿನಿಯರಿಗೆ ಕರೆ ನೀಡಿದರು.

ಶಾಸಕ ಬಸನಗೌಡ ಪಾಟೀಲ ಯತ್ನಾಳ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ದೇಶದಲ್ಲಿ ಮಹಿಳೆಯರಿಗೆ ಸಮಾನ ಅವಕಾಶಗಳು ಲಭ್ಯವಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಂಡು ಸಮಾಜದ ಅಭಿವೃದ್ಧಿಯಲ್ಲಿ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಸಲಹೆ ಮಾಡಿದರು. ತಮ್ಮ ಶಿಕ್ಷಣ ಸಂಸ್ಥೆಗಳಲ್ಲಿ ಶೇ.100ರಷ್ಟು ಮಹಿಳಾ ಪ್ರಾಧ್ಯಾಪಕರು ಕಾರ್ಯನಿರ್ವಹಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದ ಅವರು, ರಾಜ್ಯದ ಅನೇಕ ಅನುದಾನರಹಿತ ಶಾಲೆಗಳಿಗೆ ಅನುದಾನ ದೊರಕಿಸುವಲ್ಲಿ ಬಸವರಾಜ ಹೊರಟ್ಟಿ ಅವರ ಕೊಡುಗೆ ಮಹತ್ವದ್ದಾಗಿದೆ ಎಂದು ಶ್ಲಾಘಿಸಿದರು.

ವಿದ್ಯಾರ್ಥಿನಿಯರು ಉತ್ತಮ ಶಿಕ್ಷಣ ಪಡೆದು ಭವಿಷ್ಯದಲ್ಲಿ ಉನ್ನತ ಅಧಿಕಾರಿಗಳಾಗಬೇಕು ಎಂದು ಕಿವಿಮಾತು ಹೇಳಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ. ಎಸ್.ವಿ. ಹಲಸೆ ಮಾತನಾಡಿ, ಐತಿಹಾಸಿಕ ವಿಜಯಪುರದಲ್ಲಿ ಸ್ಥಾಪನೆಯಾಗಿರುವ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯವು ಉತ್ತರ ಕರ್ನಾಟಕದ ಮಹಿಳಾ ವಿದ್ಯಾರ್ಥಿನಿಯರಿಗೆ ಉನ್ನತ ಶಿಕ್ಷಣದ ಉತ್ತಮ ವೇದಿಕೆ ಹಾಗೂ ಹೆಬ್ಬಾಗಿಲಿನಂತಾಗಿದೆ ಎಂದರು.

ಉತ್ತರ ಕರ್ನಾಟಕದ ಮಹಿಳಾ ವಿದ್ಯಾರ್ಥಿನಿಯರು ವಿವಿಧ ಕ್ಷೇತ್ರಗಳಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಶಿಕ್ಷಣದೊಂದಿಗೆ ಕೌಶಲ್ಯಾಭಿವೃದ್ಧಿಗೂ ಹೆಚ್ಚಿನ ಆದ್ಯತೆ ನೀಡಬೇಕು. ಕೌಶಲ್ಯಾಧಾರಿತ ಶಿಕ್ಷಣವೇ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಯಶಸ್ಸಿನ ಮೂಲಮಂತ್ರವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

## ರಾಹುಲ್‌ಗಾಂಧಿ ಕುರಿತು ದ್ವೇಷ ಭಾಷಣ: ಉಡುಪಿ ಶಾಸಕ ಸುವರ್ಣ ವಿರುದ್ಧ ಪ್ರಕರಣ ದಾಖಲು

**ಉಡುಪಿ, ಜು.29:** ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ದ್ವೇಷ ಭಾಷಣ ಮಾಡಿರುವ ಉಡುಪಿ ಶಾಸಕ ಯಶಪಾಲ್ ಸುವರ್ಣ ವಿರುದ್ಧ ಉಡುಪಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಉಡುಪಿ ಜಿಲ್ಲಾ ಬಿಜೆಪಿ ವತಿಯಿಂದ ಮಂಗಳವಾರ ಉಡುಪಿ ನಗರದಲ್ಲಿ ನಡೆದ ಪ್ರತಿಭಟನಾ ಸಭೆಯಲ್ಲಿ ಶಾಸಕ ಸುವರ್ಣ, ಬಾಬರಿ ಮಸೀದಿಯಂತೆ ರಾಹುಲ್ ಗಾಂಧಿ ವಂಶವನ್ನು ಧ್ವಂಸ ಮಾಡುವುದಾಗಿ ಬೆದರಿಕೆ ಹಾಕಿದ್ದರು. ಅಲ್ಲದೆ, ರಾಹುಲ್ ಗಾಂಧಿ ವಿರುದ್ಧ ಅವಹೇಳನಕಾರಿಯಾಗಿ ಮಾತನಾಡಿದ್ದರು.

ಈ ಬಗ್ಗೆ ಸಾಕಷ್ಟು ಆಕ್ರೋಶ ವ್ಯಕ್ತವಾಗಿತ್ತು. ಈ ಹಿನ್ನೆಲೆಯಲ್ಲಿ ಮಂಗಳವಾರ ಮಧ್ಯರಾತ್ರಿ ಉಡುಪಿ ನಗರ ಪೊಲೀಸ್ ಠಾಣೆಗೆ ತೆರಳಿದ ಕಾಂಗ್ರೆಸ್ ಮುಖಂಡರು ನಗರ ಠಾಣೆಯ ಪೊಲೀಸ್ ನಿರೀಕ್ಷಕ



ಮಹೇಶ್ ಪ್ರಸಾದ್ ಅವರಿಗೆ ದೂರು ಸಲ್ಲಿಸಿದರು. ಉಡುಪಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಶೋಕ್ ಕುಮಾರ್ ಕೊಡವೂರು ನೀಡಿದ ದೂರಿನಂತೆ ಶಾಸಕ ಯಶ್‌ಪಾಲ್ ಸುವರ್ಣ ವಿರುದ್ಧ ಪ್ರಕರಣ ದಾಖಲಾಗಿದೆ.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ರಾದ ಪ್ರಸಾದ್ ರಾಜ್ ಕಾಂಚನ್ ಹಾಗೂ ಮಾಜಿ ಸಚಿವ ವಿನಯ್ ಕುಮಾರ್ ಸೊರಕೆ, ವಕೀಲರಾದ ಹಬೀಬ್ ಅಲಿ, ಹರೀಶ್ ಪಾಂಗಾಳ ಮೊದಲಾದವರು ಹಾಜರಿದ್ದರು.

### ಬೀದರ ಹುಡುಗಿ 21ರ ಹರೆಯದಲ್ಲೇ ಚಿನ್ನ ಗೆದ್ದ ಇಶಾ

## ಶೂಟಿಂಗ್‌ನಲ್ಲಿ ಮನು ಭಾಕರ್‌ರನ್ನೇ ಹಿಂದಿಕ್ಕಿದ ಗೋಲ್ಡನ್ ಗರ್ಲ್!

**ಬೀದರ್, ಜು. 29:** ಚಾಲಕನ ಮಗಳಾದ 21ರ ಹರೆಯದ ಇಶಾ, ಶೂಟಿಂಗ್ ಕ್ಷೇತ್ರದಲ್ಲಿ ಅಪ್ರತಿಮ ಸಾಧನೆ ಮಾಡಿದ್ದಾರೆ. ಐಎಸ್‌ಎಸ್‌ಎಫ್ ವಿಶ್ವಕಪ್‌ನಲ್ಲಿ ಭಾರತದ ಸ್ಟಾರ್ ಶೂಟರ್ ಮನು ಭಾಕರ್ ಅವರನ್ನು ಹಿಂದಿಕ್ಕಿ ಚಿನ್ನ ಗೆದ್ದ ಇವರು, ಏಷ್ಯನ್ ಗೇಮ್ಸ್‌ನಲ್ಲೂ ನಾಲ್ಕು ಪದಕಗಳನ್ನು ಗೆದ್ದು ದೇಶಕ್ಕೆ ಕೀರ್ತಿ ತಂದಿದ್ದಾರೆ.

ಬೀದರ್ ನಗರದ ಹೊರವಲಯದ ಕೂಗಳತೆ ಊರಿನ 21 ರ ಹರೆಯದ ಇಶಾ, ಇಂದು ತಮ್ಮ ಅಪ್ರತಿಮ ಗುರಿ ಸಾಧನೆಯಿಂದ ಇಡೀ ದೇಶವೇ ಹೆಮ್ಮೆಪಡುವಂತೆ ಮಾಡಿದ್ದಾರೆ. ಚಾಲಕನ ಮಗಳಾಗಿ ಬೆಳೆದು, ಆರ್ಥಿಕ ಸಂಕಷ್ಟಗಳ ನಡುವೆಯೂ ಕಠಿಣ ಶ್ರಮದಿಂದ ಶೂಟಿಂಗ್ ಕ್ಷೇತ್ರದಲ್ಲಿ ಬೆಳಗಿದ ಈ 'ಗೋಲ್ಡನ್ ಗರ್ಲ್', ಏಷ್ಯನ್ ಗೇಮ್ಸ್‌ನಲ್ಲೂ ಮಿಂಚಿ, ಭಾರತದ ಸ್ಟಾರ್ ಶೂಟರ್ ಮನು ಭಾಕರ್ ಅವರನ್ನೇ ಹಿಂದಿಕ್ಕಿ ಚಿನ್ನದ ಪದಕಕ್ಕೆ ಮುತ್ತಿಕ್ಕಿದ್ದಾರೆ. ಗಡಿಭಾಗದ ಮನೆಮಾತಾಗಿರುವ ಈ ಯುವ ತಾರೆಯ ಅದ್ಭುತ ಯಶಸ್ಸಿನ ಪಯಣ ಪ್ರತಿಯೊಬ್ಬರಿಗೂ ದಾರಿದೀಪವಾಗಿದೆ.



ಕಳೆದ ಕೆಲವು ವರ್ಷಗಳಲ್ಲಿ ಭಾರತೀಯ ಶೂಟರ್‌ಗಳು ಉತ್ತಮ ಯಶಸ್ಸನ್ನು ಸಾಧಿಸಿದ್ದಾರೆ ಮತ್ತು ಈಗ ಸೋಮವಾರ ನಡೆದ ವಿಶ್ವಕಪ್‌ನಲ್ಲಿ, ಭಾರತೀಯ ಶೂಟರ್‌ಗಳು ಅದ್ಭುತ ಪ್ರದರ್ಶನ ನೀಡಿ ಎರಡು ಪದಕಗಳನ್ನು ಗೆದ್ದಿದ್ದಾರೆ. 25 ಮೀಟರ್ ಪಿಸ್ತೂಲ್ ವಿಭಾಗದಲ್ಲಿ ಆಡುತ್ತಿರುವ 21 ವರ್ಷದ ಇಶಾ ಸಿಂಗ್, ಅದ್ಭುತ ಪ್ರದರ್ಶನದೊಂದಿಗೆ ಚಿನ್ನದ ಪದಕ ಗೆದ್ದಿದ್ದಾರೆ. ಈ ಬಾರಿ, ಅವರು ಒಲಿಂಪಿಕ್ ತಾರೆ ಮನು ಭಾಕರ್ ಅವರನ್ನು ಹಿಂದಿಕ್ಕಿದರು. ಅಂತಿಮ ಸುತ್ತಿನಲ್ಲಿ, ಇಶಾ 40 ಹಿಟ್‌ಗಳನ್ನು ಗಳಿಸಿ ಮೊದಲ ಸ್ಥಾನವನ್ನು ಪಡೆದರು.

## ಆತ್ಮಹತ್ಯೆ ಮಾಡಿಕೊಂಡ ನೀಟ್ ವಿದ್ಯಾರ್ಥಿಗಳ ಕುಟುಂಬಕ್ಕೆ ಪರಿಹಾರಕ್ಕಾಗಿ ಕಾಂಗ್ರೆಸ್ ಪ್ರತಿಭಟನೆ

**ಬಳ್ಳಾರಿ, ಜು.29:** ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಿಂದ ಮೃತಪಟ್ಟ ವಿದ್ಯಾರ್ಥಿಗಳಿಗೆ ಶ್ರದ್ಧಾಂಜಲಿ, ವಿದ್ಯಾರ್ಥಿಗಳ ಮೇಲೆ ನಡೆದಿರು ಹಲ್ಲೆ ಖಂಡಿಸಿ ಹಾಗೂ ಮೃತ ವಿದ್ಯಾರ್ಥಿಗಳ ಕುಟುಂಬಗಳಿಗೆ ಕೇಂದ್ರ ಸರ್ಕಾರ ಸೂಕ್ತ ಪರಿಹಾರ ಘೋಷಿಸಬೇಕೆಂದು ಆಗ್ರಹಿಸಿ, ನಗರದ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿರುವ ಮಹಾತ್ಮ ಗಾಂಧೀಜಿ ಅವರ ಪ್ರತಿಮೆಯಿಂದ ಗಡಿಗಿ ಚೆನ್ನಪ್ಪ ವೃತ್ತದವರೆಗೆ, ಯುವ ಕಾಂಗ್ರೆಸ್ ಸಮಿತಿಯಿಂದ ಪಂಜಿನ ಮೆರವಣಿಗೆ ನಡೆಯಿತು.

ಈ ವೇಳೆ ಜಿಲ್ಲೆಯ ಎಐಸಿಸಿ ವೀಕ್ಷಕ ನದೀಮ್ ಜಾವಿದ್ ಮಾತನಾಡಿ ನೀಟ್ ಪರೀಕ್ಷೆಗೆ ಸಂಬಂಧಿಸಿದಂತೆ ದೇಶಾದ್ಯಂತ ಕೇಳಿಬಂದಿರುವ ಅಕ್ರಮಗಳು ಹಾಗೂ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳ ಕುರಿತು ಕೇಂದ್ರ ಸರ್ಕಾರ ನ್ಯಾಯಸಮ್ಮತ ಮತ್ತು ಪಾರದರ್ಶಕವಾಗಿ ಸಮಗ್ರ ತನಿಖೆ ನಡೆಸಬೇಕು ಎಂದರು.




## ಡಿಪ್ಲೊಮೋ ವಿದ್ಯಾರ್ಥಿಗಳಿಗೆ ಪರೀಕ್ಷೆಗಳಲ್ಲಿ ಅನ್ಯಾಯ: ತನಿಖೆ ನಡೆಸುವಂತೆ ಜನಪರ ವೇದಿಕೆ ಆಗ್ರಹ

**ಕೋಲಾರ, ಜು.29:** ರಾಜ್ಯದ ಡಿಪ್ಲೊಮೋ ವಿದ್ಯಾರ್ಥಿಗಳಿಗೆ ಪರೀಕ್ಷಾ ಪ್ರಕ್ರಿಯೆಗಳಲ್ಲಿ ಅನ್ಯಾಯವಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಕೋಲಾರ ಜಿಲ್ಲಾ ಜನಪರ ವೇದಿಕೆ ಆಗ್ರಹಿಸಿದೆ.

ಆರೋಪಗಳ ಕುರಿತು ಬುಧವಾರ ನಗರದ ಪ್ರೆಸ್‌ಕ್ಲಬ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ವೇದಿಕೆಯ ಪ್ರತಿನಿಧಿ ವೆಂಕಟಾಚಲಪತಿ ಕೆ.ಪಿ., ಡಿಪ್ಲೊಮೋ ಪರೀಕ್ಷೆಗಳ ಮೌಲ್ಯಮಾಪನ, ಉತ್ತರ ಪತ್ರಿಕೆಗಳ ನಿರ್ವಹಣೆ ಹಾಗೂ ಫಲಿತಾಂಶ ಪ್ರಕಟಣೆಯಲ್ಲಿ ಗಂಭೀರ ಅಕ್ರಮಗಳು ನಡೆದಿರುವ ಬಗ್ಗೆ ವಿದ್ಯಾರ್ಥಿಗಳು ಹಾಗೂ ಪೋಷಕರಿಂದ ಸಾಕಷ್ಟು ದೂರುಗಳು ಬಂದಿವೆ ಎಂದರು.

ರಾಜ್ಯದ ವಿವಿಧ ಪಾಲಿಟೆಕ್ನಿಕ್ ಕಾಲೇಜುಗಳ ವಿದ್ಯಾರ್ಥಿಗಳ ಭವಿಷ್ಯದ ಪ್ರಶ್ನೆಯಾಗಿರುವುದರಿಂದ ಸರ್ಕಾರ ಈ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ಉನ್ನತ ಮಟ್ಟದ ತನಿಖೆಗೆ ಆದೇಶಿಸಬೇಕು. ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಕಾಪಾಡುವುದು ಅತ್ಯಗತ್ಯವಾಗಿದ್ದು, ಉತ್ತರ ಪತ್ರಿಕೆಗಳ ಮರುಪರಿಶೀಲನೆ, ಮೌಲ್ಯಮಾಪನ ಪ್ರಕ್ರಿಯೆಯ ಸಂಪೂರ್ಣ ತನಿಖೆ ಹಾಗೂ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ವೇಳೆ ಬೆಂಗಳೂರು ನಾಡಗೀರ್ ಸಂಜೆ ಕಾಲೇಜ್ ಸಂಬಂಧಿತ ಅಕ್ರಮಗಳ ಬಗ್ಗೆಯೂ ದೂರು ಸಲ್ಲಿಸಲಾಗುವುದು, ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ಲಿಖಿತ ದೂರು ನೀಡಲಾಗಿದ್ದು, ಅಗತ್ಯ ದಾಖಲೆಗಳು ಹಾಗೂ ಮಾಹಿತಿಯನ್ನು ತನಿಖಾ ಸಂಸ್ಥೆಗಳಿಗೆ ಒದಗಿಸಲಾಗುವುದು. ವಿದ್ಯಾರ್ಥಿಗಳಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಸರ್ಕಾರ ಶೀಘ್ರ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ರಾಜ್ಯವ್ಯಾಪಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

## ಜನವಿರೋಧಿ ನೀತಿ ಬಗ್ಗೆ ಜಾಗೃತಿ ಮೂಡಿಸಿ: ಚೇಗರೆಡ್ಡಿ

**ಕಲಬುರಗಿ, ಜು. 29:** ಸರ್ಕಾರದ ಜನವಿರೋಧಿ ಯೋಜನೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದರ ಜತೆಗೆ ಹೋರಾಟ ರೂಪಿಸುವ ಕೆಲಸ ನಡೆಯಬೇಕಿದೆ ಎಂದು ಭಾರತ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಚೇಗರೆಡ್ಡಿ ಹೇಳಿದರು.

ಉಪನ್ಯಾಸಕ ಸಂಜೀವಕುಮಾರ ಸಕ್ಕರಗಿ ಉಪನ್ಯಾಸ ನೀಡಿ, ಸರ್ಕಾರ ಕೆಪಿಎಸ್ ಯೋಜನೆ ಅನುಷ್ಠಾನಕ್ಕೆ ಮುಂದಾಗಿದ್ದು, ಇದರಿಂದ ನೆರೆಹೊರೆಯ ಸಮಾನ ಶಾಲೆಗಳ ಅಸ್ತಿತ್ವಕ್ಕೆ ಧಕ್ಕೆಯಾಗುತ್ತಿದೆ. ಇದು ಮಕ್ಕಳ ಶಿಣದ ಹಕ್ಕಿನ ಸ್ಪಷ್ಟ ಉಲ್ಲಂಘನೆಯಾಗುತ್ತದೆ. ಈ ಕುರಿತು ಗಂಭೀರ ಚಿಂತನೆ ನಡೆಯಬೇಕು. ರಾಜ್ಯ ಸರ್ಕಾರಿ ಪದವಿಪೂರ್ವ ಕಾಲೇಜು ಉಪನ್ಯಾಸಕರ ಸಂದ ಜಿಲ್ಲಾಧ್ಯ ನರಸಪ್ಪ ರಂಗೋಲಿ ಮಾತನಾಡಿ, ನಾವು ಸರ್ಕಾರಿ ನೌಕರರಾಗಿ ಈ ಯೋಜನೆ ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕಾಗುತ್ತದೆ. ಇದರಲ್ಲಿರುವ ಬಾಧಕಗಳ ಬಗ್ಗೆ ಸರ್ಕಾರದ ಗಮನಕ್ಕೆ ತರುವ ಕೆಲಸ ಮಾಡಲಾಗುವುದು ಎಂದರು.

ಸಮಿತಿ ಜಿಲ್ಲಾಧ್ಯಕ್ಷ ಶಿವಶರಣಪ್ಪ ಮುಳೇಗಾಂವ್ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಣ ಇಲಾಖೆಯ ಅಪರ ಆಯುಕ್ತರ ಆಪ್ತ ಕಾರ್ಯದರ್ಶಿ ನಾಗೇಂದ್ರಪ್ಪ ಅವರಾದಿ ಜಿಲ್ಲಾ ಕಾರ್ಯದರ್ಶಿ ರವಿಚಂದ್ರ ಅತನೂರ ಇತರರಿದ್ದರು.

ಪದಾಧಿಕಾರಿಗಳು ನೇಮಕ: ಭಾರತ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕ ರಚಿಸಿ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.



# ಕೃತಕ ಬುದ್ಧಿಮತ್ತೆ ಅತಿಯಾದ ಅವಲಂಬನೆ ಸಲ್ಲ: ಪ್ರೊ. ಸತ್ಯನಾರಾಯಣ



**ಕಲಬುರಗಿ, ಜು. 29:** ಕೃತಕ ಬುದ್ಧಿ ಮತ್ತೆ ತಂತ್ರಜ್ಞಾನವನ್ನು ಅಧ್ಯಾಪಕರು ಜವಾಬ್ದಾರಿಯುತವಾಗಿ ಬಳಸಬೇಕೇ ಹೊರತು, ಶೈಕ್ಷಣಿಕ ಬರವಣಿಗೆ ಹಾಗೂ ಸಂಶೋಧನೆಗಾಗಿ ಎಐ ತಂತ್ರಜ್ಞಾನದ ಮೇಲೆ ಅತಿಯಾದ ಅವಲಂಬನೆ ಹೊಂದಬಾರದು ಎಂದು ಕರ್ನಾಟಕ ಕೇಂದ್ರೀಯ ವಿವಿ ಕುಲಪತಿ ಪ್ರೊ.ಬಟ್ಟು ಸತ್ಯನಾರಾಯಣ ಹೇಳಿದರು.

ನಗರದ ಕೇಂದ್ರೀಯ ವಿಶ್ವ ವಿದ್ಯಾಲಯದ ಡಾ.ಎಸ್.ಆರ್. ರಂಗನಾಥನ್ ಸೆಮಿನಾರ್ ಹಾಲ್‌ನಲ್ಲಿ ಕೇಂದ್ರ ಗ್ರಂಥಾಲಯದಿಂದ ಬೋಧನಾ ಸಿಬ್ಬಂದಿಗಾಗಿ ಆಯೋಜಿಸಿದ್ದ ಗ್ರಂಥಾಲಯ ಇ-ಸಂಪನ್ಮೂಲಗಳು ಬಳಕೆದಾರರ ಜಾಗೃತಿ ಕುರಿತ ಕಾರ್ಯಾಗಾರದಲ್ಲಿ ಮಾತನಾಡಿ, ಶಿಕ್ಷಕರು ಎಐ ಪರಿಕರ ಅವಲಂಬಿಸುವ ಬದಲು, ಗ್ರಂಥಾಲಯ, ಓದುವಿಕೆ ಹಾಗೂ ಮೂಲ ಸಂಶೋಧನೆಯ ಮೂಲಕ ತಮ್ಮ ಜ್ಞಾನ ವೃದ್ಧಿಸಿಕೊಳ್ಳಬೇಕು. ಎಐ ಮೇಲಿನ ಅತಿಯಾದ ಅವಲಂಬನೆಯು ಸ್ವತಂತ್ರ ಚಿಂತನೆಗೆ, ವಿಶ್ಲೇಷಣಾತ್ಮಕ ಸಾಮರ್ಥ್ಯ ಹಾಗೂ ನಮ್ಮ ಸ್ವಂತಿಕೆ ಕುಗ್ಗಿಸುವ ಸಾಧ್ಯತೆಯಿದೆ. ಶಿಕ್ಷಕರ ಜ್ಞಾನ, ಸೃಜನಶೀಲತೆ ಮತ್ತು ಶೈಕ್ಷಣಿಕ ಪ್ರಾಮಾಣಿಕತೆಯೇ ಗುಣಮಟ್ಟದ ಶಿಕ್ಷಣಕ್ಕೆ ನಿಜವಾದ ಅಡಿಪಾಯ ವಾಗಲಿದೆ ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿ, ಸಿಯುಕೆ ವಾಣಿಜ್ಯ ವಿಭಾಗದ ಮುಖ್ಯಸ್ಥ ಪ್ರೊ.ಪಾಂಡುರಂಗ ವಿ. ಮಾತನಾಡಿ, ಆಧುನಿಕ ಡಿಜಿಟಲ್ ಸಂಪನ್ಮೂಲಗಳ ಲಭ್ಯತೆಯಿಂದ ಸಂಶೋಧನಾ ಕಾರ್ಯ ಹಿಂದೆಂದಿಗಿಂತಲೂ ಸುಲಭವಾಗಿದೆ. ಅಧ್ಯಾಪಕರು ಮತ್ತು ಸಂಶೋಧಕರಿಗೆ ಸಾವಿರಾರು ಗುಣಮಟ್ಟದ ಸಂಶೋಧನಾ ಜರ್ನಲ್‌ಗಳು ಈಗ ಸುಲಭವಾಗಿ ಲಭ್ಯವಾಗುತ್ತಿವೆ. ವಿಶ್ವವಿದ್ಯಾಲಯದ ಸುಸಜ್ಜಿತ ಕೇಂದ್ರ ಗ್ರಂಥಾಲಯ ಹಾಗೂ ಅದರ ಡಿಜಿಟಲ್ ಸಂಪನ್ಮೂಲಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವಂತೆ ಸಲಹೆ ನೀಡಿದರು.

> ವಿಶ್ವವಿದ್ಯಾಲಯವು ವೈಜ್ಞಾನಿಕ ಉಪಕರಣ ಹಾಗೂ ಸಂಶೋಧನಾ ಸೌಲಭ್ಯ ಹೊಂದಿದೆ. ಸಮರ್ಪಕ ಬಳಸಿಕೊಳ್ಳುವುದು ಅಧ್ಯಾಪಕರು ಮತ್ತು ಸಂಶೋಧಕರ ಜವಾಬ್ದಾರಿ. ಸಂಶೋಧನೆಯಲ್ಲಿ ಕೃತಿಚೌರ್ಯ ತಪ್ಪಿಸಿ, ಸ್ವಂತ ಸಂಶೋಧನಾ ಬರವಣಿಗೆಯ ಶೈಲಿ ಬೆಳೆಸಿಕೊಳ್ಳುವ ಮೂಲಕ ಸಮಾಜಕ್ಕೆ ಅರ್ಥಪೂರ್ಣ ಕೊಡುಗೆ ನೀಡುವ ಮೂಲ ಸಂಶೋಧನೆ ಕೈಗೊಳ್ಳಬೇಕು.
>
> – ಪ್ರೊ.ಬಟ್ಟು ಸತ್ಯನಾರಾಯಣ, ಕುಲಪತಿ, ಕೇಂದ್ರೀಯ ವಿಶ್ವವಿದ್ಯಾಲಯ.



ಮಂಗಳೂರಿನ ಮುಲ್ಕಿಯ ಕೊಲ್ನಾಡ್ ಕೈಗಾರಿಕಾ ಪ್ರದೇಶದಲ್ಲಿರುವ ರಾಮ್ಕಿ ಎನರ್ಜಿ ಅಂಡ್ ಎನ್ವಿರಾನ್ಮೆಂಟ್ ಲಿಮಿಟೆಡ್‌ನಲ್ಲಿ ಬುಧವಾರ ವಶಪಡಿಸಿಕೊಂಡ ಸುಮಾರು ?82 ಕೋಟಿ ಮೌಲ್ಯದ ಮಾದಕ ದ್ರವ್ಯಗಳ ವೈಜ್ಞಾನಿಕ ಮತ್ತು ಪರಿಸರ ಸ್ನೇಹಿ ನಾಶವನ್ನು ಅಧಿಕಾರಿಗಳು ಮೇಲ್ವಿಚಾರಣೆ ಮಾಡಿದರು. ಮಂಗಳೂರು ನಗರ ಪೊಲೀಸರ ಮಾದಕ ದ್ರವ್ಯ ವಿರೋಧಿ ಜಾರಿ ಅಭಿಯಾನದ ಭಾಗವಾಗಿ ಸಕ್ಷಮ ನ್ಯಾಯಾಲಯದ ಅನುಮತಿಯೊಂದಿಗೆ ಮಾದಕ ದ್ರವ್ಯಗಳನ್ನು ನಾಶಪಡಿಸಲಾಯಿತು.

# ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರ ಹುದ್ದೆಗೆ ಆಕಾಂಕ್ಷಿ ವೆಂಕಟೇಶ್ ಹೆಗಡೆ ಅರ್ಜಿ ಸಲ್ಲಿಕೆ



**ಬಳ್ಳಾರಿ, ಜು.29–** ಅಖಿಲ ಭಾರತ ಕಾಂಗ್ರೆಸ್ ಸಮಿತಿ (ಎಐಸಿಸಿ) ದೇಶಾದ್ಯಂತ ಕಾಂಗ್ರೆಸ್ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ "ಸಂಘಟನ ಸೃಜನ್ ಅಭಿಯಾನ" ಅಂಗವಾಗಿ, ಬಳ್ಳಾರಿ ಜಿಲ್ಲೆಯ ಎಐಸಿಸಿ ವೀಕ್ಷಕರಾಗಿ ಎಐಸಿಸಿ ಅಲ್ಪಸಂಖ್ಯಾತರ ಘಟಕದ ಮಾಜಿ ಅಧ್ಯಕ್ಷರು ಹಾಗೂ ಅಖಿಲ ಭಾರತ ಎನ್.ಎಸ್.ಯು.ಐ. ಮಾಜಿ ಅಧ್ಯಕ್ಷರಾದ ನದೀಮ್ ಜಾವಿದ್ ರವರು, ಕೆಪಿಸಿಸಿ ವೀಕ್ಷಕರುಗಳಾದ ಮಾಜಿ ಸಚಿವಾರದ ಮಲ್ಲಿಕಾರ್ಜುನ್ ನಾಗಪ್ಪ ರವರು, ಕೆಪಿಸಿಸಿ ಉಪಾಧ್ಯಕ್ಷರಾದ ಎ.ಆರ್.ಎಂ.ಹುಸೇನ್ ರವರು, ಕೆಪಿಸಿಸಿ ವಕ್ತರರಾದ ಶ್ರೀಮತಿ ಶೈಲಜಾ ಹಿರೇಮಠ್ ರವರು ಮತ್ತು ಕೆಪಿಸಿಸಿಯ ರಾಜಶೇಖರ್ ರವರಿಗೆ

ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರ ಹುದ್ದೆಗೆ ಆಕಾಂಕ್ಷಿಯಾಗಿ ವೆಂಕಟೇಶ್ ಹೆಗಡೆ, ವಕೀಲರು, ಕೆಪಿಸಿಸಿ ರಾಜ್ಯ ಮಾಧ್ಯಮಕ್ತಾರರು ಹಾಗೂ ಕೆಪಿಸಿಸಿ ಮುಖ್ಯ ಸಂಯೋ ಜಕರು ಪ್ರಚಾರ ಸಮಿತಿ. ಬಳ್ಳಾರಿ ಇವರು ಅರ್ಜಿಯನ್ನು ಸಲ್ಲಿಸಿದ್ದಾರೆ.

# ಸಿವಿಲ್ ಎಂಜಿನಿಯರಿಂಗ್‌ನಲ್ಲಿ ಪ್ರಸ್ತುತ ಪ್ರವೃತ್ತಿ ಭವಿಷ್ಯದ ನಿರೀಕ್ಷೆ ಕಾರ್ಯಾಗಾರ ಉದ್ಘಾಟನೆ



**ಬಳ್ಳಾರಿ, ಜು. 29–** ನಗರದ ಪ್ರತಿಷ್ಠಿತ ರಾವ್ ಬಹದ್ದೂರ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾ ಲಯದಲ್ಲಿ ಸಿವಿಲ್ ವಿಭಾಗದ ವತಿಯಿಂದ ದಿನಾಂಕ 27.07.2026 ರಂದು ಜರುಗಿದ 'ಸಿವಿಲ್ ಎಂಜಿನಿಯರಿಂಗ್ನಲ್ಲಿ ಪ್ರಸ್ತುತ ಪ್ರವೃತ್ತಿಗಳು ಮತ್ತು ಭವಿಷ್ಯದ ನಿರೀಕ್ಷೆಗಳು' ಐದು ದಿನದ ಅಧ್ಯಾಪಕರ ಅಭಿವೃದ್ಧಿ ಕಾರ್ಯಾಗಾರದ ಉದ್ಘಾಟನಾ ಸಮಾರಂಭವು ಮುಖ್ಯ ಅತಿಥಿಗಳಾಗಿ ಡಾ. ರಾಧಾಕೃಷ್ಣ, ಪ್ರೊಫೆಸರ್ ಮತ್ತು ಪಿಜಿ ಡೀನ್, ಆರ್ವಿಸಿಇ, ಬೆಂಗಳೂರು, ವೀರಶೈವ ವಿದ್ಯಾವರ್ಧಕ ಸಂಘದ ಉಪಾಧ್ಯಕ್ಷರು ಹಾಗು ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷರಾದ ಜಾನೇಕುಂಟೆ ಬಸವರಾಜ, ಕಾರ್ಯದರ್ಶಿ ಡಾ. ಅರವಿಂದ ಪಟೇಲ್, ಪ್ರಾಂಶುಪಾಲರಾದ ಡಾ. ಹೆಚ್.ಮಹಾಬಲೇಶ್ವರ, ಸಿವಿಲ್ ವಿಭಾಗದ ಮುಖ್ಯಸ್ಥರಾದ ಡಾ. ಎಂ.ಎಸ್. ಶೋಭ, ಇನ್ನಿತರರ ಸಮ್ಮುಖದಲ್ಲಿ ಜರುಗಿತು.

ಈ ಉದ್ಘಾಟನಾ ಸಮಾರಂಭದಲ್ಲಿ ಸಂಪನ್ಮೂಲ ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾ. ರಾಧಾಕೃಷ್ಣ, ಪ್ರೊಫೆಸರ್ ಮತ್ತು ಪಿಜಿ ಡೀನ್, ಆರ್ವಿಸಿಇ, ಬೆಂಗಳೂರು ಅವರಿಂದ 'ಸುಸ್ಥಿರತೆಗಾಗಿ ಜಿಯೋ ಪಾಲಿಮರ್ ಸಂಯೋಜನೆಯ ಅಭಿವೃದ್ಧಿ ಮತ್ತು ಅನ್ವಯ'ವನ್ನು ಪ್ರಸ್ತುತಪಡಿಸಲಾಯಿತು. 'ಇಂಜಿನಿಯರಿಂಗ್‌ನ ಅತ್ಯಂತ ಹಳೆಯ ಮತ್ತು ಪ್ರಮುಖ ಶಾಖೆಗಳಲ್ಲಿ ಒಂದಾದ ಸಿವಿಲ್ ಇಂಜಿನಿಯರಿಂಗ್, ತಾಂತ್ರಿಕ ನಾವೀನ್ಯತೆ, ಸುಸ್ಥಿರತೆ ಮತ್ತು ಡಿಜಿಟಲೀಕರಣದಿಂದ ನಡೆಸಲ್ಪಡುವ ಗಮನಾರ್ಹ ರೂಪಾಂತರಕ್ಕೆ ಒಳಗಾಗುತ್ತಿದೆ. ಮೂಲಸೌಕರ್ಯ ಬೇಡಿಕೆಗಳು ವಿಶ್ವಾದ್ಯಂತ ಬೆಳೆಯುತ್ತಲೇ ಇರುವುದರಿಂದ, ಈ ವೃತ್ತಿಯು ಚುರುಕಾದ, ಸುರಕ್ಷಿತ ಮತ್ತು ಹೆಚ್ಚು ಸ್ಥಿತಿಸ್ಥಾಪಕ ಮೂಲಸೌಕರ್ಯವನ್ನು ನಿರ್ಮಿಸಲು ಆಧುನಿಕ ಪರಿಕರಗಳು ಮತ್ತು ಅಭ್ಯಾಸಗಳನ್ನು ಅಳವಡಿಸಿಕೊಳ್ಳುತ್ತಿದೆ. ಕೃತಕ ಬುದ್ಧಿಮತ್ತೆ, ಕಟ್ಟಡ ಮಾಹಿತಿ ಮಾದರಿ, ಡಿಜಿಟಲ್ ಅವಳಿಗಳು, ರೊಬೊಟಿಕ್ಸ್, ಡ್ರೋನ್‌ಗಳು ಮತ್ತು ಇಂಟರ್ನೆಟ್ ಆಫ್ ಥಿಂಗ್ಸ್‌ಗಳನ್ನು ಯೋಜನೆ, ವಿನ್ಯಾಸ, ನಿರ್ಮಾಣ ಮತ್ತು ನಿರ್ವಹಣಾ ಪ್ರಕ್ರಿಯೆಗಳಲ್ಲಿ ಹೆಚ್ಚಾಗಿ ಸಂಯೋಜಿಸಲಾಗುತ್ತಿದೆ, ದಕ್ಷತೆ, ನಿಖರತೆ ಮತ್ತು ಯೋಜನಾ ನಿರ್ವಹಣೆಯನ್ನು ಸುಧಾರಿಸುತ್ತಿದೆ' ಎಂದು ತಿಳಿಸಿದರು.

ಕಾಲೇಜಿನ ಅಧ್ಯಕ್ಷ ಜಾನೇಕುಂಟೆ ಬಸವರಾಜ, ಭಾರತದೇಶದಲ್ಲಿ ನಿರ್ಮಾಣಕ್ಕೆ ಬೇಕಾಗಿರುವ ಸಿವಿಲ್ ಕಟ್ಟಡಗಳ, ಇನ್ನಿತರೇ ಕಾಮಗಾರಿ ಕೆಲಸಗಳಲ್ಲಿ ಇನ್ನು ಸಾಕಷ್ಟು ಬದಲಾವಣೆಗಳು ಮಾಡಬೇಕಾಗಿದೆ. ದೇಶದ ಜನಸಂಖ್ಯೆ ಹೆಚ್ಚಾಗುತ್ತಿದೆ. ಮುಂಬರುವ ದಿನಗಳಲ್ಲಿ ಸಿವಿಲ್ ಕಟ್ಟಡಗಳಿಗೆ ಬೇಡಿಕೆ ಹೆಚ್ಚಾಗುತ್ತದೆ. ಆದಕಾರಣ ನೂತನ ತಂತ್ರಜ್ಞಾನ ಬಳಸಲು ಅವಶ್ಯಕವಾಗುತ್ತದೆ, ಮುಖ್ಯವಾಗಿ ಯುವಶಕ್ತಿ – ವಿದ್ಯಾರ್ಥಿಗಳಲ್ಲಿ ಹೊಸ ಆವಿಷ್ಕಾರಗಳು ಮಾಡಲು ಶಿಕ್ಷಕರು ಪ್ರೇರಣೆ ನೀಡಬೇಕು' ಎಂದು ತಿಳಿಸಿದರು.

ವೀರಶೈವ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಡಾ. ಅರವಿಂದ ಪಟೇಲ್, ಸಿವಿಲ್ ಎಂಜಿನಿಯರಿಂಗ್‌ನ ಭವಿಷ್ಯವು ಹೆಚ್ಚು ಭರವಸೆಯನ್ನು ಹೊಂದಿದೆ, ವಿಶೇಷವಾಗಿ ಭಾರತದಂತಹ ಅಭಿವೃದ್ಧಿಶೀಲ ರಾಷ್ಟ್ರಗಳಲ್ಲಿ, ಹೆದ್ದಾರಿಗಳು, ಮೆಟ್ರೋ ರೈಲು ವ್ಯವಸ್ಥೆಗಳು, ಸ್ಮಾರ್ಟ್ ಸಿಟಿಗಳು, ವಿಮಾನ ನಿಲ್ದಾಣಗಳು, ಬಂದರುಗಳು, ಕೈಗೆಟುಕುವ ವಸತಿ, ನವೀಕರಿಸಬಹುದಾದ ಇಂಧನ ಯೋಜನೆಗಳು ಮತ್ತು ನಗರ ಮೂಲಸೌಕರ್ಯಗಳಲ್ಲಿ ಗಮನಾರ್ಹ ಹೂಡಿಕೆಗಳನ್ನು ಮಾಡಲಾಗುತ್ತಿದೆ. ಈ ಬೆಳವಣಿಗೆಗಳು ವಿಶಾಲವಾದ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತಿವೆ ಮತ್ತು ಮೂಲಸೌಕರ್ಯ ಯೋಜನೆ ಮತ್ತು ಕಾರ್ಯಗತಗೊಳಿಸುವಿಕೆಯಲ್ಲಿ ನಾವೀನ್ಯತೆಯನ್ನು ಪ್ರೋತ್ಸಾಹಿಸುತ್ತಿವೆ' ಎಂದು ತಿಳಿಸಿದರು.

# ಪತ್ರಕರ್ತರು ಸಮಾಜದ ವೈದ್ಯರು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



**ಬೀದರ್, ಜು. 29:** ಪತ್ರಕರ್ತರು ವಿಶ್ವಾಸಾರ್ಹ ಸುದ್ದಿ ಸಂಗ್ರಹಣೆ ಹಾಗೂ ನಿಷ್ಪಕ್ಷಪಾತ ಬರಹಕ್ಕೆ ಆದ್ಯತೆ ನೀಡಿದಾಗ ಮಾತ್ರ ಪತ್ರಿಕೋದ್ಯಮ ವೃತ್ತಿಗೆ ಪವಿತ್ರತೆ ಸಿಗುತ್ತದೆ. ಸಮಾಜವನ್ನು ತಿದ್ದುವ ಮೂಲಕ ಪತ್ರಕರ್ತರು ಸಮಾಜದ ವೈದ್ಯರಂತೆ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹೇಳಿದರು.

ಬೀದರ್‌ನಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ಪ್ರಜಾಪ್ರಭುತ್ವದ ನಾಲ್ಕನೇ ಸ್ತಂಭವಾಗಿರುವ ಪತ್ರಿಕಾರಂಗದಲ್ಲಿ ಪತ್ರಕರ್ತರು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಮಾಧ್ಯಮದ ಮೇಲೆ ಗೌರವ ಹಾಗೂ ವಿಶ್ವಾಸ ಮೂಡುವ ರೀತಿಯಲ್ಲಿ ಪತ್ರಕರ್ತರು ನಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಪತ್ರಕರ್ತರು ಸಮಾಜದ ವೈದ್ಯರಂತೆ ಕಾರ್ಯನಿರ್ವಹಿಸುತ್ತಾರೆ. ಸಮಾಜದಲ್ಲಿನ ಸಮಸ್ಯೆಗಳನ್ನು ಗುರುತಿಸಿ, ಅವುಗಳಿಗೆ ಪರಿಹಾರ ಕಂಡುಕೊಳ್ಳುವ ಶಕ್ತಿ ಮಾಧ್ಯಮಕ್ಕಿದೆ. ಹೀಗಾಗಿ ಪತ್ರಿಕೋದ್ಯಮ ಅತ್ಯಂತ ಪವಿತ್ರವಾದ ವೃತ್ತಿಯಾಗಿದೆ ಎಂದು ಜಿಲ್ಲಾಧಿಕಾರಿ ಹೇಳಿದರು.

ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ದೂರವಾಣಿ ಮೂಲಕ ಶುಭಾಶಯ ಕೋರಿದರು.

ಇದೇ ವೇಳೆ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕ ಗಳಿಸಿದ ಪತ್ರಕರ್ತರ ಪ್ರತಿಭಾವಂತ ಮಕ್ಕಳಾದ ಕು. ಅಹಮ್ಮದ್ ನೂರ್, ಶೇಖ್ ಶಾದಿಯಾ, ಭುವನೇಶ್ವರಿ, ಸುಹಾಸಿನಿ, ಹರ್ಷಿತಾ, ತನಿಷ್, ಪ್ರಜ್ವಲ್, ಶ್ರುತಿ ಸೇರಿದಂತೆ ಹಲವು ವಿದ್ಯಾರ್ಥಿಗಳಿಗೆ 'ಪ್ರತಿಭಾ ಪುರಸ್ಕಾರ' ನೀಡಿ ಗೌರವಿಸಲಾಯಿತು.

# ಧರ್ಮದಲ್ಲಿ ಭಿನ್ನಾಭಿಪ್ರಾಯಗಳಿದ್ದರೂ ಸಮನ್ವಯ ಮುಖ್ಯ : ಕಾಶೀ ಜಗದ್ಗುರು



**ರಾಯಚೂರು, ಜು. 29:** ಧರ್ಮದ ವಿಚಾರದಲ್ಲಿ ಭಿನ್ನಾಭಿಪ್ರಾಯಗಳಿರುವುದು ಸಹಜ. ಒಂದೇ ಧರ್ಮದಲ್ಲಿ ವಿವಿಧ ಅಭಿಪ್ರಾಯಗಳಿದ್ದರೂ ಅವುಗಳನ್ನು ಸಮನ್ವಯತೆಯಿಂದ ಹೊಂದಿಸಿಕೊಂಡು ಸಾಗುವ ವಿಶಿಷ್ಟ ಪರಂಪರೆ ವೀರಶೈವ-ಲಿಂಗಾಯತ ಧರ್ಮದಲ್ಲಿದೆ ಎಂದು ಕಾಶಿ ಪೀಠದ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯ ಅವರು ಅಭಿಪ್ರಾಯಪಟ್ಟರು.

ಇಲ್ಲಿಯ ವೀರಶೈವ ಮಹಾಂತೇಶ ಕಲ್ಯಾಣ ಮಂಟಪದಲ್ಲಿ ಏಳು ದಿನಗಳ ಕಾಲ ನಡೆಯುತ್ತಿರುವ ಶ್ರೀಗಳ ಹಾಗೂ ಭಕ್ತರ ಸಾಮೂಹಿಕ ಇಷ್ಟಲಿಂಗ ಪೂಜೆ, ಸಿದ್ಧಾಂತ ಶಿಖಾಮಣಿ ಮತ್ತು ವೀರಶೈವ ಪಂಚಸೂತ್ರೀಯ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶರಣರು ಸೇರಿದಂತೆ ಅನೇಕ ಮಹನೀಯರು ಮನುಷ್ಯನಲ್ಲಿನ ವಿರೋಧಿ ಭಾವನೆಗಳನ್ನು ನಿವಾರಿಸಲು ಶ್ರಮಿಸಿದ್ದಾರೆ. ದೇಹ, ಮನಸ್ಸು, ಬುದ್ಧಿ, ಜಾತಿ ಹಾಗೂ ಪರಂಪರೆಯ ಅಭಿಮಾನವನ್ನು ತ್ಯಜಿಸಿ ಆತ್ಮವು ಪರಮಾತ್ಮನಲ್ಲಿ ಒಂದಾದಾಗ ಮಾತ್ರ ಮೋಕ್ಷ ಸಾಧ್ಯ ಎಂದು ತಿಳಿಸಿದರು.

ವಿವಿಧ ಹೂವುಗಳನ್ನು ಒಂದೇ ದಾರದಲ್ಲಿ ಹೆಣೆದು ಮಾಲೆ ಮಾಡುವಂತೆ, ವೀರಶೈವ ಲಿಂಗಾಯತ ಸ' ವ' ಂ ಾ ಜ ದ' ಲ್ಲಿ ೦' ಂ ವ' ಭಿ ನ್ನಾ ಭಿ ಪ್ರಾ ಂ ು ಂ ು ಗ ಳ ನ' ್ನ ಸಮನ್ವಯಗೊಳಿಸಲು ಶತಮಾನಗಳಿಂದ ಪ್ರಯತ್ನಗಳು ನಡೆಯುತ್ತಿವೆ. ಸಮಸ್ತ ಮನುಕುಲದಲ್ಲಿ ಶಾಂತಿ ಮತ್ತು ಸೌಹಾರ್ದ ನೆಲೆಸಬೇಕಾದರೆ ವೀರಶೈವ ಧರ್ಮದ ಮೂಲ ತತ್ವಗಳನ್ನು ಅಳವಡಿಸಿಕೊಳ್ಳುವುದು ಅಗತ್ಯ ಎಂದು ಹೇಳಿದರು.

ದೇಹ, ಮನಸ್ಸು ಮತ್ತು ಬುದ್ಧಿ ವಿಭಿನ್ನವಾದವು. ದರ್ಶನಶಾಸ್ತ್ರವು ಅವುಗಳ ಮೇಲಿನ ಅಭಿಮಾನವನ್ನು ತ್ಯಜಿಸಿ ನಿಜವಾದ ಆತ್ಮತತ್ವವನ್ನು ಅರಿಯುವಂತೆ ಮಾಡುತ್ತದೆ. ಪಂಚ ಜ್ಞಾನೇಂದ್ರಿಯಗಳು ಹಾಗೂ ಪಂಚ ಕರ್ಮೇಂದ್ರಿಯಗಳು ಪಂಚಭೂತಗಳಿಂದ ಬಂದವುಗಳಾಗಿದ್ದು, ದೇಹ ನಮ್ಮ ಶಾಶ್ವತ ಸ್ವತ್ತು ಅಲ್ಲ ಎಂಬ ಅರಿವು ಹೊಂದಬೇಕು ಎಂದರು.

## ಮತದಾರರ ಪಟ್ಟಿ ಪರಿಷ್ಕರಣೆ ಅಭಿಯಾನ

# ಬಿಜೆಪಿ ರಾಜ್ಯ ಉಸ್ತುವಾರಿ ಸುಧಾಕರ ರೆಡ್ಡಿ ಎಸ್‌ಐಆರ್ ಪರಿಶೀಲನೆ



**ಬೀದರ್, ಜು. 29:** ಭಾರತೀಯ ಜನತಾ ಪಕ್ಷದ ರಾಜ್ಯ ಸಹ ಉಸ್ತುವಾರಿ ಸುಧಾಕರ ರೆಡ್ಡಿ ಅವರು ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಆಣದೂರ ಗ್ರಾಮದಲ್ಲಿ ಎಸ್‌ಐಆರ್ (ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ) ಮಹಾಸಂಪರ್ಕ ಅಭಿಯಾನದಲ್ಲಿ ಭಾಗವಹಿಸಿ, ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಮನೆ ಮನೆಗೆ ಭೇಟಿ ನೀಡಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ಪರಿಶೀಲಿಸಿದರು.

ಪ್ರಜಾಪ್ರಭುತ್ವದ ಅಡಿಪಾಯವೇ ನಿಖರವಾದ ಮತದಾರರ ಪಟ್ಟಿ. ಯಾವುದೇ ಅರ್ಹ ಮತದಾರರ ಹೆಸರು ಪಟ್ಟಿಯಿಂದ ಹೊರಗುಳಿಯದಂತೆ ಮನೆ ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಹೊಸ ಮತದಾರರ ಹೆಸರು ಸೇರ್ಪಡೆ, ಹೆಸರು ಹಾಗೂ ವಿಳಾಸ ತಿದ್ದುಪಡಿ ಸೇರಿದಂತೆ ಅಗತ್ಯ ಪ್ರಕ್ರಿಯೆಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿ, ನಿಗದಿತ ಅವಧಿಯೊಳಗೆ ಅರ್ಜಿಗಳನ್ನು ಸಲ್ಲಿಸಲು ಸಹಕರಿಸಬೇಕು ಎಂದು ಕಾರ್ಯಕರ್ತರಿಗೆ ಸಲಹೆ ನೀಡಿದರು. ಎಸ್‌ಐಆರ್ ಮಹಾ ಸಂಪರ್ಕ ಅಭಿಯಾನದ ಮೂಲಕ ಪ್ರತಿಯೊಂದು ಮನೆಗೂ ತಲುಪಿ, ಪ್ರತಿಯೊಬ್ಬ ಅರ್ಹ ಮತದಾರರ ಮತದಾನದ ಹಕ್ಕು ಸಂರಕ್ಷಿಸುವ ಕಾರ್ಯವನ್ನು ಸಮರ್ಪಣಾ ಭಾವದಿಂದ ನಿರ್ವಹಿಸ ಬೇಕು ಎಂದು ಅವರು ಹೇಳಿದರು.

# ಆಧ್ಯಾತ್ಮ ಸಿರಿ ಕರುಣಿಸುವಾತನೇ ಶ್ರೀಗುರು ಶ್ರೀರಂಭಾಪುರಿ ಜಗದ್ಗುರುಗಳ ಅಭಿಮತ



**ಶ್ರೀ ರಂಭಾಪುರಿ ಪೀಠ (ಬಾಳೆಹೊನ್ನೂರು)– ಜುಲೈ–29.** ಜಗತ್ತಿನ ಶ್ರೇಷ್ಠ ಜ್ಞಾನಿಗಳು ಮತ್ತು ಅನುಭಾವಿಗಳು ತಾವು ಕಂಡುಂಡ ಸತ್ಯದ ಬೆಳಕನ್ನು ತೋರಿಸಿ ಉದ್ಧರಿಸಿದರು. ಅಲೌಕಿಕ ಇಚ್ಛೆಯನ್ನು ಈಡೇರಿಸುವಾತ ಗುರುವಾಗಿದ್ದಾನೆ. ಆಧ್ಯಾತ್ಮದ ಅಮರ ಸಿರಿಯನ್ನು ಕರುಣಿಸಿ ಉದ್ಧರಿಸುವಾತನೇ ನಿಜವಾದ ಗುರುವಾಗಿದ್ದಾನೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಜರುಗಿದ ಗುರುಪೂರ್ಣಿಮಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬಲ್ಲವರ ನುಡಿಗಳನ್ನು ಕೇಳುವುದು ಹೇಳುವುದು ಪರಮ ತಪಸ್ಸು. ಸತ್ಸಂಗದಲ್ಲಿ ಜಾತಿ ಮತ ಸ್ಥಾನಮಾನ ಘನತೆ ಗೌರವಗಳನ್ನು ಮರೆಯುತ್ತಾನೆ. ಈ ಜಗತ್ತಿನಲ್ಲಿ ಒಂದು ಪ್ರಾಪಂಚಿಕ ಸಂಪತ್ತು ಇನ್ನೊಂದು ಪಾರಮಾರ್ಥಿಕ ಸಂಪತ್ತು. ಪ್ರಾಪಂಚಿಕ ಸಂಪತ್ತನ್ನು ಗಳಿಸಿದಾಗ ನಮ್ಮ ಬದುಕು ವೈಭವಪೂರ್ಣ. ಪಾರಮಾರ್ಥಿಕ ಸಂಪತ್ತನ್ನು ಗಳಿಸಿದಾಗ ನಮ್ಮ ಬದುಕು ಅನುಭಾವಪೂರ್ಣ. ಹೃದಯದಲ್ಲಿ ಅನುಭಾವಾಮೃತವನ್ನು ತುಂಬಿಕೊಂಡವ ಶ್ರೀ ಗುರು. ನಾನೆಂಬ ಹಮ್ಮು ದೂರವಾಗಿ ಭವ ಬಂಧನದಿಂದ ಮುಕ್ತಗೊಳಿಸುವ ಶಕ್ತಿ ಗುರುವಿಗೆ ಇದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ವಿಶ್ವಬಂಧುತ್ವ ವೈಶಿಷ್ಟ್ಯ ತತ್ವ-ಸಿದ್ಧಾಂತಗಳನ್ನು ಬೋಧಿಸಿದ್ದಾರೆಂದರು. ಗುರು ಪೂರ್ಣಿಮಾ ಅಂಗವಾಗಿ ಶ್ರೀ ರಂಭಾಪುರಿ ಜಗದ್ಗುರುಗಳವರ ಪಾದ ಪೂಜಾ ನೆರವೇರಿಸಿ ಭಕ್ತರು ಕೃತಜ್ಞತೆ ಸಲ್ಲಿಸಿದರು.

ಈ ಸುಸಂದರ್ಭದಲ್ಲಿ ಸಂಗೊಳ್ಳಿ ಗುರುಲಿಂಗ ಶಿವಾಚಾರ್ಯರು, ಹುಡುಗಿ ಸೋಮೇಶ್ವರ ಶಿವಾಚಾರ್ಯರು, ಬೇರುಗಂಡಿ ರೇಣುಕ ಮಹಾಂತ ಶಿವಾಚಾರ್ಯರು, ಕಾರ್ಜುವಳ್ಳಿ ಸದಾಶಿವ ಶಿವಾಚಾರ್ಯರು, ಮಳಲಿಮಠದ ಡಾ.ನಾಗಭೂಷಣ ಶಿವಾಚಾರ್ಯರು, ಹಂಪಸಾಗರದ ಶಿವಲಿಂಗ ರುದ್ರಮುನಿ ಶಿವಾಚಾರ್ಯರು, ತಾವರೆಕೆರೆ ಡಾ.ಅಭಿನವ ಸಿದ್ಧಲಿಂಗ ಶಿವಾಚಾರ್ಯರು, ಹಣ್ಣೆ ಮಠದ ಮರುಳಸಿದ್ಧ ಪಂಡಿತಾರಾಧ್ಯ ಶಿವಾಚಾರ್ಯರು, ಚಿಪ್ಪಲಕಟ್ಟಿ ಕಲ್ಲಯ್ಯಸ್ವಾಮಿ ಹಿರೇಮಠ, ನಾಂದೇಡೆ ವಿನಾಯಕ ಮಾಳವದೆ, ಕಲಬುರ್ಗಿಯ ರೇವಯ್ಯಸ್ವಾಮಿ ಹಿರೇಮಠ, ಕನಕಗಿರಿ ಸಂಗಪ್ಪ ಸಜ್ಜನ, ಚಿಕ್ಕಮಗಳೂರಿನ ಂುಂಂ.ಎಂ.ಬಸವರಾಜ್, ಮಲೇಬೆನ್ನೂರು ವಾಗೀಶಸ್ವಾಮಿ, ಶ್ರೀ ಜಗದ್ಗುರು ರಂಭಾಪುರಿ ಪೀಠದ ಸಂಪರ್ಕಾಧಿಕಾರ ಪ್ರಭುದೇವ ಕಲ್ಮಠ, ಗುರುಕುಲದ ಕುಲಪತಿ ಬೆಳಗಾಲ ಪೇಟೆಯ ಸಿದ್ಧಲಿಂಗ ಶಾಸ್ತ್ರಿಗಳು ಹಿರೇಮಠ ಮೊದಲಾದ ಗಣ್ಯರು ಪಾಲ್ಗೊಂಡಿದ್ದರು. ಹುಬ್ಬಳ್ಳಿಯ ಆರ್.ಎಂ.ಹಿರೇಮಠ ಮತ್ತು ಕುಟುಂಬ ವರ್ಗದವರು ಗುರುಪಾದ ಪೂಜೆ ಮಾಡಿ ಆಶೀರ್ವಾದ ಪಡೆದರು. ಶ್ರೀಪೀಠದ ಎಲ್ಲ ದೈವಗಳಿಗೆ ಸದ್ಭಕ್ತರು ವಿಶೇಷ ಪೂಜೆ ಸಲ್ಲಿಸಿದರು.

# ಮುಳವಾಡ ಏತ ನೀರಾವರಿ ವ್ಯಾಪ್ತಿಯ ಕಾಲುವೆಗಳಿಗೆ ನೀರು ಬಿಡುಗಡೆ

**ವಿಜಯಪುರ, ಜು. 29–** 2026–27ನೇ ಸಾಲಿನ ಮುಂಗಾರು ಹಂಗಾಮಿಗಾಗಿ ಮುಳವಾಡ ಏತ ನೀರಾವರಿ ವೃತ್ತ ವ್ಯಾಪ್ತಿಯ ವಿವಿಧ ಕಾಲುವೆ ಜಾಲಕ್ಕೆ ಜುಲೈ 28 ರಿಂದ ನೀರು ಹರಿಸಲು ಕೃಷ್ಣಾ ಭಾಗ್ಯ ಜಲ ನಿಗಮ ಕ್ರಮ ಕೈಗೊಂಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಜಲ ಸಂಪನ್ಮೂಲ ಸಚಿವರ ಅನುಮೋದನೆಯಂತೆ ಹಾಗೂ ಕೃಷ್ಣಾ ಮೇಲ್ದಂಡೆ ಯೋಜನೆಯ ನೀರಾವರಿ ಸಲಹಾ ಸಮಿತಿಯ ನಿರ್ದೇಶನದಂತೆ, ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಡಿ ನೀರು ಪೋಲಾಗದಂತೆ ಕಾಲುವೆಗಳಿಗೆ ನೀರು ಹರಿಸಲಾಗುತ್ತಿದೆ.

ಯಾವ ಕಾಲುವೆಗಳಿಗೆ ನೀರು ಮುಳವಾಡ ಏತ ನೀರಾವರಿ ವೃತ್ತ ಟಕ್ಕಳಕಿ ವ್ಯಾಪ್ತಿಯ ಮುಳವಾಡ ಏತ ನೀರಾವರಿ ಹಂತ–2 ರ ಪೂರ್ವ ಮತ್ತು ಪಶ್ಚಿಮ ಕಾಲುವೆಗಳು ಸೊನ್ನ ಏತ ನೀರಾವರಿ ಕಾಲುವೆ ರೊಳ್ಳಿ–ಮನ್ನಿಕೇರಿ ಏತ ನೀರಾವರಿ ಕಾಲುವೆ ತೆಗ್ಗಿ–ಸಿದ್ದಾಪೂರ ಏತ ನೀರಾವರಿ ಕಾಲುವೆಗಳಿಗೆ ನೀರು ಹರಿಸಲಾಗುತ್ತದೆ. ವಾರಾಬಂದಿ ಆಲಮಟ್ಟಿ ಜಲಾಶಯದಲ್ಲಿ ಒಳಹರಿವು ಮತ್ತು ಹೊರಹರಿವಿನ ಪ್ರಮಾಣ ಸಮವಾಗಿರುವವರೆಗೆ ಕಾಲುವೆ ಜಾಲಕ್ಕೆ ಸತತ ನೀರು ಹರಿಸಲಾಗುತ್ತದೆ. ಒಂದು ವೇಳೆ ಆಲಮಟ್ಟಿ ಅಣೆಕಟ್ಟಿಗೆ ಒಳಹರಿವು ಕಡಿಮೆಯಾದ ಪಕ್ಷದಲ್ಲಿ, ಜಲಾಶಯದಲ್ಲಿನ ನೀರು ಸಂಗ್ರಹಣೆಯನ್ನು ಆಧರಿಸಿ14 ದಿನ ಚಾಲೂ ಹಾಗೂ 10 ದಿನ ಬಂದ್ ಮಾಡುವ ವಾರಾಬಂದಿ ಪದ್ಧತಿ ಅನುಸರಿಸಿ ಮೊದಲ ಬಾರಿಗೆ ಒಟ್ಟು 115 ದಿನಗಳ ಕಾಲ ನೀರು ಒದಗಿಸಲಾಗುತ್ತದೆ.

ಒಟ್ಟು66 ದಿನಗಳು ಚಾಲು ಇದ್ದರೆ 50 ದಿನಗಳು ಬಂದ್ ಇಡಲಾಗುವುದು. ರೈತರಿಗೆ ಮನವಿನೀರು ಮೌಲ್ಯವುಳ್ಳದ್ದಾಗಿದ್ದು, ರೈತ ಬಾಂಧವರು ಬೆಳೆಗಳಿಗೆ ನೀರು ಬಳಸುವಾಗ ಮಿತವ್ಯಯ ಸಾಧಿಸಬೇಕು. ಕಾಲುವೆ ನೀರನ್ನು ಪೋಲು ಮಾಡದೇ ಕೃಷ್ಣಾ ಭಾಗ್ಯ ಜಲ ನಿಗಮದ ಅಧಿಕಾರಿಗಳೊಂದಿಗೆ ಸಹಕರಿಸಬೇಕು ಎಂದು ಟಕ್ಕಳಕಿ ವೃತ್ತದ ಕೃಷ್ಣಾ ಭಾಗ್ಯ ಜಲ ನಿಗಮದ ಅಧೀಕ್ಷಕ ಅಭಿಯಂತರರಾದ ಗೋವಿಂದ ರಾಠೋಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಡ್ಡಾಯ ಹೆಲ್ಮೆಟ್: ದ್ವಿಚಕ್ರ ವಾಹನ ಸವಾರರಿಗೆ ಎಸಿಪಿ ಪ್ರಭು ಸೂಚನೆ



**ಕಲಬುರಗಿ, ಜು. 29:** ದ್ವಿಚಕ್ರ ವಾಹನ ಸವಾರರ ಜೀವ ರಕ್ಷಣೆಗಾಗಿ ಹೆಲ್ಮೆಟ್ ಕಡ್ಡಾಯವಾಗಿದ್ದು, ಪ್ರತಿಯೊಬ್ಬರೂ ಧರಿಸುವ ಮೂಲಕ ಸಂಚಾರಿ ಕಾನೂನಿನೊಂದಿಗೆ ಸಹಕರಿಸಬೇಕು ಎಂದು ಎಸಿಪಿ (ಸಂಚಾರ) ಪ್ರಭು ಡಿ.ಟಿ. ಮನವಿ ಮಾಡಿದರು.

ಕಲ್ಯಾಣ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆ(ಕೆಕೆಸಿಸಿಐ) ಸಭಾಂಗಣದಲ್ಲಿ ಸಂಸ್ಥೆ ಪದಾಧಿಕಾರಿಗಳು, ವರ್ತಕರೊಂದಿಗೆ ಏರ್ಪಡಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹೆಲ್ಮೆಟ್? ಧರಿಸುವುದು ಕೇವಲ ಕಾನೂನು ಪಾಲನೆ ವಿಷಯಲ್ಲ. ಜೀವ ರಸುವ ಅಭ್ಯಾಸ. ಅನೇಕ ಬಾರಿ ರಸ್ತೆ ಅಪಘಾತಗಳಲ್ಲಿ ಕುಟುಂಬದ ಪ್ರಮುಖ ಆಧಾರವಾಗಿರುವ ವ್ಯಕ್ತಿ ಮೃತಪಟ್ಟರೆ ಅಥವಾ ಗಂಭೀರ ಗಾಯಗೊಂಡರೆ ಆ ಕುಟುಂಬ ಆರ್ಥಿಕ ಮತ್ತು ಮಾನಸಿಕ ಸಂಕಷ್ಟಕ್ಕೆ ಸಿಲುಕುತ್ತದೆ. ಆದ್ದರಿಂದ ಪ್ರತಿಯೊಬ್ಬ ದ್ವಿಚಕ್ರ ವಾಹನ ಸವಾರ ತನ್ನ ಸುರತೆ ಹಾಗೂ ಕುಟುಂಬದ ಭವಿಷ್ಯಕ್ಕಾಗಿ ಕಡ್ಡಾಯ ಹೆಲ್ಮೆಟ್ ಧರಿಸಬೇಕು ಎಂದರು.

ನಗರದ ವ್ಯಾಪಾರ ಪ್ರದೇಶಗಳಲ್ಲಿ ಸಂಚಾರ ದಟ್ಟಣೆ, ವಾಹನ ನಿಲುಗಡೆ ಅವ್ಯವಸ್ಥೆ, ಪಾದಚಾರಿ ಮಾರ್ಗ ಹಾಗೂ ರಸ್ತೆ ಅತಿಕ್ರಮಣ, ಸುರತೆ ಸೇರಿ ವಿವಿಧ ವಿಷಯಗಳ ಕುರಿತು ವಿಸತ ಚರ್ಚೆ ನಡೆಯಿತು. ಸಂಚಾರ ನಿಯಮ ಪಾಲನೆ ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ಕೆ ಸಂಪೂರ್ಣ ಸಹಕಾರ ನೀಡುವುದಾಗಿ ಕೆಕೆಸಿಸಿಐ ಹೇಳಿತು.

ಇದಕ್ಕೂ ಮುನ್ನ ಸೂಪರ್ ಮಾರ್ಕೆಟ್, ಮುಖ್ಯರಸ್ತೆ ಜಂಕ್ಷನ್, ಚಪ್ಪಲ್ ಬಜಾರ್, ಭಾಂಡೆ ಬಜಾರ್, ಬಟ್ಟೆ ಬಜಾರ್ ಹಾಗೂ ಕಿರಾಣಿ ಬಜಾರ್‌ಗೆ ಭೇಟಿ ನೀಡಿದ ಎಸಿಪಿ ಪ್ರಭು ಅವರು, ಅಲ್ಲಿನ ಸಂಚಾರ ವ್ಯವಸ್ಥೆ ಹಾಗೂ ಗ್ರೌಂಡ್ ಪರಿಸ್ಥಿತಿಯ ಅವಲೋಕನ ನಡೆಸಿದರು.

ಹಲವು ವರ್ಷಗಳಿಂದ ಈ ಕುರಿತು ಸರ್ಕಾರ ಹಾಗೂ ಸಂಬಂಧಿತ ಇಲಾಖೆಗಳಿಗೆ ಕೆಕೆಸಿಸಿಐ ನಿರಂತರ ಮನವಿ ಸಲ್ಲಿಸುತ್ತ ಬಂದರೂ ಸ್ಪಂದನೆ ಸಿಕ್ಕಿಲ್ಲ. ಪರಿಣಾಮ ವರ್ಷದಿಂದ ವರ್ಷಕ್ಕೆ ವಾಹನ ದಟ್ಟಣೆ ಹಾಗೂ ನಿಲುಗಡೆ ಸಮಸ್ಯೆ ಮತ್ತಷ್ಟು ಗಂಭೀರವಾಗುತ್ತಿದೆ ಎಂದು ಸಂಸ್ಥೆ ಬೇಸರ ವ್ಯಕ್ತಪಡಿಸಿತು.

ಸಂಚಾರ ನಿಯಮಗಳ ಕಟ್ಟುನಿಟ್ಟಿನ ಅನುಷ್ಠಾನ ಮತ್ತು ಪಾಲನೆ ಅಗತ್ಯ ಎಂಬುದರಲ್ಲಿ ಎರಡು ಮಾತಿಲ್ಲ. ಆದರೆ ಪ್ರಮುಖ ವ್ಯಾಪಾರ ಕೇಂದ್ರದಲ್ಲಿನ ಸಂಚಾರ ಹಾಗೂ ವಾಹನ ನಿಲುಗಡೆ ಸಮಸ್ಯೆಗೆ ಶಾಶ್ವತ ಪರಿಹಾರ ದೊರಕಿಸಲು ಸರ್ಕಾರ ಸೂಪರ್ ಮಾರ್ಕೆಟ್‌ನಲ್ಲಿ ಬಹುಮಹಡಿ ಪಾರ್ಕಿಂಗ್ ಕಟ್ಟಡ ನಿರ್ಮಾಣಕ್ಕೆ ಶ್ರೀಘ್ರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿತು.

ಜಾಮಿಯಾ ಮಸೀದಿ ವೃತ್ತದಿಂದ ಪೊಲೀಸ್ ಚೌಕ್ ಕಡೆ ಸಾಗುವ ರಸ್ತೆ ಸಮೀಪ ಭೂಗತ ಒಳಚರಂಡಿ ಕಾಮಗಾರಿ ನಡೆಯುತ್ತಿರುವ ಹಿನ್ನೆಲೆಯಲ್ಲಿ ಹುಮನಾಬಾದ್ ಕಡೆ ರಸ್ತೆ ಸಂಚಾರ ಕೆಲದಿನ ಬಂದ್ ಮಾಡಲಾಗಿದೆ. ಆದ್ದರಿಂದ ಸಾರ್ವಜನಿಕರು ಅನಗತ್ಯವಾಗಿ ವಾಹನ ನಿಲುಗಡೆ ಮಾಡದೆ ಪರ್ಯಾಯ ಮಾರ್ಗ ಬಳಸಿ ಸಂಚಾರ ಸುಗಮಗೊಳಿಸಲು ಸಹಕರಿಸಬೇಕು ಎಂದು ಪ್ರಭು ಮನವಿ ಮಾಡಿದರು.

# ರಾಹುಲ್‌ಗಾಂಧಿಯಿಂದ "ಮೂರ್ಖ" ಪದ ಬಳಕೆ: ಸದನದಲ್ಲಿ ಗದ್ದಲ

**ನವದೆಹಲಿ, ಜು. 29:** ಪ್ರಶ್ನೆ ಪತ್ರಿಕೆ ಸೋರಿಕೆ ತಡೆ ವಿಧೇಯಕದ ಮೇಲಿನ ಚರ್ಚೆಯ ವೇಳೆ ದೇಶಾದ್ಯಂತ ನಡೆದ ವಿದ್ಯಾರ್ಥಿ–ಯುವಜನರ ಪ್ರತಿಭಟನೆಯನ್ನು ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಸಮರ್ಥಿಸಿಕೊಂಡಿದ್ದಾರೆ.



ಇದೇ ವೇಳೆ, ಭಿನ್ನ ಅಭಿಪ್ರಾಯಗಳನ್ನು ಕೇಳಿಸಿಕೊಳ್ಳದವರನ್ನು ಯುವಜನರು ಮೂರ್ಖರು ಎಂದು ಪರಿಗಣಿಸಿದ್ದಾರೆ ಎಂದು ಹೇಳಿದ್ದಾರೆ. ಮೂರ್ಖ ಎಂಬ ಪದ ಬಳಸಿದ್ದಕ್ಕಾಗಿ, ಬಿಜೆಪಿಗರು ಸದನದಲ್ಲಿ ಗದ್ದಲು ಸೃಷ್ಟಿಸಿದ್ದಾರೆ. ಆ ಪದವನ್ನು ಕಡತದಿಂದ ತೆಗೆದುಹಾಕುವಂತೆ ಒತ್ತಾಯಿಸಿದ್ದಾರೆ.

ಚರ್ಚೆಯಲ್ಲಿ ಮಾತನಾಡಿದ ರಾಹುಲ್ ಗಾಂಧಿ, ಪ್ರತಿಭಟನಾನಿರತ ವಿದ್ಯಾರ್ಥಿಗಳ ಭಾವನೆಗಳನ್ನು ಬಿಜೆಪಿ ಸೇರಿದಂತೆ ಎಲ್ಲಾ ರಾಜಕೀಯ ಪಕ್ಷಗಳೂ ಗೌರವಿಸಬೇಕು ಎಂದು ಆಗ್ರಹಿಸಿದರು. ಇದೇ ವೇಳೆ, 18 ವರ್ಷದ ವಿದ್ಯಾರ್ಥಿಯೊಬ್ಬರ ಜೊತೆಗಿನ ಸಂಭಾಷಣೆಯನ್ನು ಉಲ್ಲೇಖಿಸಿದ ರಾಹುಲ್ ಗಾಂಧಿ, ಜನರನ್ನು ವಿದ್ಯಾರ್ಥಿಗಳು, ಮೂರ್ಖರು ಹಾಗೂ ಅಂಧಭಕ್ತರು ಎಂದು ಮೂರು ವರ್ಗಗಳಾಗಿ ವಿಂಗಡಿಸಿದ್ದಾನೆ. ಆತನ ಪ್ರಕಾರ, ಜ್ಞಾನವನ್ನು ಅರಸುವ ಮತ್ತು ಇತರರ ಮಾತನ್ನು ಕೇಳಲು ಸಿದ್ಧರಿರುವವರು ವಿದ್ಯಾರ್ಥಿಗಳು, ಭಿನ್ನ ರೀತಿಯ ಅಭಿಪ್ರಾಯಗಳನ್ನು ಕೇಳಲು ನಿರಾಕರಿಸುವವರು ಮೂರ್ಖರು ಎಂದು ಆ ವಿದ್ಯಾರ್ಥಿ ಬಣ್ಣಿಸಿದ್ದಾನೆ ಎಂದು ರಾಹುಲ್ ವಿವರಿಸಿದರು. ರಾಹುಲ್ ಗಾಂಧಿ ತಮ್ಮ ಮಾತನ್ನು ಮುಂದುವರಿಸುವಷ್ಟರಲ್ಲಿ ಮಧ್ಯಪ್ರವೇಶಿಸಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಮೂರ್ಖರು ಎಂಬ ಶಬ್ದದ ಬಳಕೆಗೆ ಆಕ್ಷೇಪ ವ್ಯಕ್ತಪಡಿಸಿದರು. ಅದು ಅಸಂಸದೀಯ ಪದ. ಅದನ್ನು ಕಡತದಿಂದ ತೆಗೆದುಹಾಕಬೇಕು ಎಂದು ರಿಜಿಜು ಒತ್ತಾಯಿಸಿದರು. ಅವರ ಆಕ್ಷೇಪಕ್ಕೆ ಎನ್ಡಿಎ ಸಂಸದರೂ ದನಿ ಗೂಡಿಸಿದರು. ತೀವ್ರ ಗದ್ದಲು ಸೃಷ್ಟಿಸಿದರು.

ಆದಾಗ್ಯೂ, ಮಾತು ಮುಂದುವರೆಸಿದ ರಾಹುಲ್ ಗಾಂಧಿ, ನಾನು ಸದನದಲ್ಲಿರುವವರನ್ನು ಉಲ್ಲೇಖಿಸಿ ಮೂರ್ಖರು ಎಂಬ ಪದ ಬಳಸಿಲ್ಲ?ಎಂದು ಸ್ಪಷ್ಟನೆ ನೀಡಿದರು.

ವಿದ್ಯಾರ್ಥಿ ಪ್ರತಿಭಟನೆಯ ಕುರಿತಾದ ತಮ್ಮ ಮಾತುಗಳಿಗೆ ಮರಳಿದ ರಾಹುಲ್, ದೇಶದ ಭವಿಷ್ಯವಾಗಿರುವ ಯುವಜನರು ಬೀದಿಗಿಳಿದು ಹೋರಾಡಿದ್ದನ್ನು ನೋಡಿ ನನಗೆ ತುಂಬಾ ಸಂತೋಷವಾಯಿತು ಮತ್ತು ಭರವಸೆ ಮೂಡಿತು. ಇದು ಕೋಪ, ಹಿಂಸೆ ಅಥವಾ ದ್ವೇಷವಾಗಿರಲಿಲ್ಲ. ಇದು ಈ ದೇಶದ ಯುವಜನರ ಮತ್ತು ಮುಂದಿನ ಪೀಳಿಗೆಯ ಆಳವಾದ ಭಾವನೆಯ ಅಭಿವ್ಯಕ್ತಿಯಾಗಿತ್ತು. ಆ ಪ್ರತಿಭಟನೆಯಲ್ಲಿ ಯಾವುದೇ ತಪ್ಪಿಲ್ಲ. ಪ್ರತಿಯೊಬ್ಬ ಭಾರತೀಯನೂ ಇದರ ಬಗ್ಗೆ ಹೆಮ್ಮೆಪಡಬೇಕು. ಪ್ರತಿಭಟನೆಯು ಯುವ ಭಾರತೀಯರ ಕಳವಳವನ್ನು ಪ್ರತಿಬಿಂಬಿಸುತ್ತಿದೆ ಮತ್ತು ಪಕ್ಷಭೇದ ಮರೆತು ಎಲ್ಲರೂ ಇದನ್ನು ಬೆಂಬಲಿಸಬೇಕು ಎಂದು ಅವರು ಹೇಳಿದರು.

ನನ್ನ ಬಿಜೆಪಿಯ ಮಿತ್ರರು ಸೇರಿದಂತೆ ಎಲ್ಲ ರಾಜಕೀಯ ಪಕ್ಷಗಳೂ ಯುವಜನರ ಭಾವನೆಯನ್ನು ಗೌರವಿಸಬೇಕು. ಬಿಜೆಪಿಯ ಮಿತ್ರರು ತಮ್ಮದೇ ಮಕ್ಕಳ ಬಳಿಗೆ ಹೋಗಿ, ಅವರ ಸಹೋದರ–ಸಹೋದರಿಯರು ಮಾಡುತ್ತಿರುವ ಹೋರಾಟದ ಬಗ್ಗೆ ಏನು ಅನಿಸುತ್ತದೆ ಎಂದು ಕೇಳಿದರೆ, ಅವರ ಸ್ವಂತ ಮಕ್ಕಳೂ ಇದನ್ನು ಒಪ್ಪಿಕೊಳ್ಳುತ್ತಾರೆ ಎಂಬ ಭರವಸೆ ನನಗಿದೆ ಎಂದರು.

# ರಾಹುಲ್ ಗಾಂಧಿ ಹೇಳಿಕೆ ಹಸಿ ಸುಳ್ಳು: ಸಂಬೀತ್ ಪಾತ್ರ ವಾಗ್ದಾಳಿ

**ನವದೆಹಲಿ, ಜು.29:** ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ಆರೋಪಗಳಿಗೆ ಬಿಜೆಪಿ ಬುಧವಾರ ತೀವ್ರ ವಾಗ್ದಾಳಿ ನಡೆಸಿದೆ. ಅವರು ಸುಳ್ಳು ಹೇಳುತ್ತಿದ್ದಾರೆ. ಪದೇಪದೆ ಗೋಲ್ ಪೋಸ್ಟ್‌ಗಳನ್ನು ಬದಲಾಯಿಸುತ್ತಿದ್ದಾರೆ. ಎಂದು ಆರೋಪಿಸಿದೆ. ಮಾಧ್ಯಮ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಿದ ಬಿಜೆಪಿ ವಕ್ತಾರ ಮತ್ತು ಸಂಸದ ಸಂಬೀ1ತ್ ಪಾತ್ರ, ಪ್ರತಿಭಟನಾ ನಿರತ ವಿದ್ಯಾರ್ಥಿಗಳ ಮೇಲೆ ಗುಂಡು ಹಾರಿಸಲಾಗಿದೆ ಮತ್ತು ಶಾ ಬಲಪ್ರಯೋಗಕ್ಕೆ ಆದೇಶಿಸಿದ್ದಾರೆ ಎಂಬ ಗಾಂಧಿಯವರ ಆರೋಪವನ್ನು ತಿರಸ್ಕರಿಸಿದರು. ಈ ಹೇಳಿಕೆಯನ್ನು "ಸುಳ್ಳು" ಎಂದು ಕರೆದ ಪಾತ್ರ, ಪ್ರತಿಭಟನೆಯ ಸಮಯದಲ್ಲಿ ಯಾವುದೇ ಗುಂಡು ಹಾರಿಸಲಾಗಿಲ್ಲ ಮತ್ತು ಅಂತಹ ನಿರ್ಧಾರಗಳನ್ನು ಗೃಹ ಸಚಿವರಲ್ಲ, ಸ್ಥಳದಲ್ಲೇ ಮ್ಯಾಜಿಸ್ಟ್ರೇಟ್ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು. ಶಾ ಅವರ ಬೆಂಗಾವಲು 30 ವಾಹನಗಳನ್ನು ಒಳಗೊಂಡಿತ್ತು ಎಂಬ ಗಾಂಧಿಯವರ ಹೇಳಿಕೆಯನ್ನು ಪಾತ್ರ ಪ್ರಶ್ನಿಸಿದರು. "ನಮ್ಮೊಂದಿಗೆ ಬಂದು ಅವುಗಳನ್ನು ಎಣಿಸಿ. ಅಮಿತ್ ಶಾ ಅವರ ಬೆಂಗಾವಲು 30 ವಾಹನಗಳನ್ನು ಎಲ್ಲಿದೆ ಎಂದು ನಮಗೆ ತೋರಿಸಿ" ಎಂದು ಹೇಳಿದರು. ಶಾ ತಮ್ಮ ವಾಹನದೊಳಗೆ "ನಡುಗುತ್ತಿದ್ದಾರೆ" ಎಂಬ ಗಾಂಧಿಯವರ ಆರೋಪವನ್ನು ತಳ್ಳಿಹಾಕಿದ ಪಾತ್ರ, "ಭಯೋತ್ಪಾದಕರು ಮತ್ತು ನಕ್ಸಲರು ನಡುಗುವ ವ್ಯಕ್ತಿ ಅಮಿತ್ ಶಾ, ಪ್ರತಿಯಾಗಿ ಅಲ್ಲ" ಎಂದು ಹೇಳಿದರು. ಗಾಂಧಿಯವರು ಕೇವಲ ಸಂಚಲನ ಮೂಡಿಸಲು ಷಾ ಅವರ ಹೆಸರನ್ನು ಬಳಸುತ್ತಿದ್ದಾರೆ ಎಂದು ಆರೋಪಿಸಿದ ಪಾತ್ರಾ, "ರಾಹುಲ್ ಗಾಂಧಿ 'ಕೇಂದ್ರ ಗೃಹ ಸಚಿವರು ಎಲ್ಲಿದ್ದಾರೆ' ಎಂದು ಕೇಳುತ್ತಾರೆ" ಎಂದು ಹೇಳಿದರು. ನಿಮ್ಮಂತೆ, ಗೃಹ ಸಚಿವರು ಇಡೀ ರಾಷ್ಟ್ರದ ಬಗ್ಗೆ ಜವಾಬ್ದಾರಿಗಳನ್ನು ಹೊಂದಿದ್ದಾರೆ. ನಿಮ್ಮಂತೆ, ಅವರು ವಿವರಿಸಲಾಗದ ವಿದೇಶ ಪ್ರವಾಸಗಳಲ್ಲಿ ಕಣ್ಮರೆಯಾಗುವುದಿಲ್ಲ. ಲೋಕಸಭೆಯಲ್ಲಿ ಮಾತನಾಡಲು ಅವಕಾಶವಿಲ್ಲ ಎಂಬ ರಾಹುಲ್ ಹೇಳಿಕೆಯನ್ನು ತಳ್ಳಿಹಾಕಿದರು.



# ಮನಮೋಹನ್ ಸಿಂಗ್ ವಿರುದ್ಧದ ಪ್ರಕರಣ ವಜಾ: ಸುಪ್ರೀಂ

**ನವದೆಹಲಿ, ಜು. 29:** ಮಾಜಿ ಪ್ರಧಾನಿ, ದಿವಂಗತ ಡಾ. ಮನಮೋಹನ್ ಸಿಂಗ್ ವಿರುದ್ಧದ ಕಲ್ಲಿದ್ದಲು ಬ್ಲಾಕ್ ಹಂಚಿಕೆ ಹಗರಣದ ಕ್ರಿಮಿನಲ್ ಮೊಕದ್ದಮೆಯನ್ನು ಸುಪ್ರೀಂ ಕೋರ್ಟ್ ಬುಧವಾರ ವಜಾಗೊಳಿಸಿದೆ. ಅಲ್ಲದೆ, ಅವರ ವಿರುದ್ಧ ಹೊರಡಿಸಲಾಗಿದ್ದ ಸಮನ್ಸ್ ಆದೇಶವನ್ನೂ ಕೂಡ ರದ್ದುಗೊಳಿಸಿದೆ.



ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್, ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಮತ್ತು ವಿ. ಮೋಹನಾ ಅವರನ್ನೊಳಗೊಂಡ ಪೀಠವು, ಮನ್ಮೋಹನ್ ಸಿಂಗ್ ಮತ್ತು ಇತರರಿಗೆ ಕ್ಲೀನ್ ಚಿಟ್ ನೀಡಿದ್ದ ಕೇಂದ್ರೀಯ ತನಿಖಾ ದಳದ (ಸಿಬಿಐ) ಮುಕ್ತಾಯ ವರದಿಯನ್ನು ಪುರಸ್ಕರಿಸಿದೆ. ಇದರಿಂದಾಗಿ, ಯುಪಿಎ ಸರ್ಕಾರದ ವಿರುದ್ಧದ ಕೇಳಿಬಂದಿದ್ದ ಹೈ–ಪ್ರೊಫೈಲ್ ಕ್ರಿಮಿನಲ್ ಪ್ರಕರಣಗಳಲ್ಲಿ ಒಂದಾದ ಕಲ್ಲಿದ್ದಲು ಹಂಚಿಕೆ ಹಗರಣದಿಂದ ಮನ್ಮೋಹನ್ ಸಿಂಗ್ ದೋಷಮುಕ್ತಗೊಂಡಿದ್ದಾರೆ. ಸಿಬಿಐ ಸಲ್ಲಿಸಿದ ಮುಕ್ತಾಯ ವರದಿಯನ್ನು ತಿರಸ್ಕರಿಸಲು ಅಥವಾ ಸಿಂಗ್ ವಿರುದ್ಧ ಕಾನೂನು ಕ್ರಮ ಜರುಗಿಸಲು ಯಾವುದೇ ಬಲವಾದ ಕಾರಣಗಳಿಲ್ಲ ಎಂದು ಕೋರ್ಟ್ ಹೇಳಿದೆ. ಸಂಬಂಧಪಟ್ಟ ಹಿರಿಯ ವಕೀಲರ ನೆರವಿನೊಂದಿಗೆ ನಾವು ಸಿಬಿಐ ಸಲ್ಲಿಸಿದ ಎರಡೂ ಮುಕ್ತಾಯ ವರದಿಗಳನ್ನು ಪರಿಶೀಲಿಸಿದ್ದೇವೆ. ತನಿಖಾ ಸಂಸ್ಥೆಯು ಸಲ್ಲಿಸುವ ವರದಿಯನ್ನು ಸ್ವೀಕರಿಸುವ ಅಥವಾ ತಿರಸ್ಕರಿಸುವ ಕುರಿತು ಈ ನ್ಯಾಯಾಲಯವು ನಿರಂತರವಾಗಿ ರೂಪಿಸಿರುವ ಮಾನದಂಡಗಳನ್ನು ಗಮನದಲ್ಲಿಟ್ಟುಕೊಂಡು, ಸಿಬಿಐ ಸಲ್ಲಿಸಿದ ವರದಿಯನ್ನು ಬದಿಗೊತ್ತಲು ಮತ್ತು ಅಪರಾಧವನ್ನು ಪರಿಗಣಿಸಲು ಯಾವುದೇ ಸೂಕ್ತ ಕಾರಣಗಳಿಲ್ಲ ಎಂಬ ನಿರ್ಧಾರಕ್ಕೆ ಬರಲಾಗಿದೆ ಎಂದು ಪೀಠವು ಹೇಳಿದೆ. 2005ರಲ್ಲಿ ಒಡಿಶಾದ ತಲಬಿರಾ ಕಲ್ಲಿದ್ದಲು ಬ್ಲಾಕ್ ಹಂಚಿಕೆಗೆ ಸಂಬಂಧಿಸಿದಂತೆ ಮನ್ಮೋಹನ್ ಸಿಂಗ್, ಉದ್ಯಮಿ ಕುಮಾರ್ ಮಂಗಳಂ ಬಿರ್ಲಾ, ಮಾಜಿ ಕಲ್ಲಿದ್ದಲು ಕಾರ್ಯದರ್ಶಿ ಪಿ.ಸಿ. ಪರಾಖ್ ಹಾಗೂ ಇತರ ಮೂವರನ್ನು ವಿಶೇಷ ನ್ಯಾಯಾಲಯವು ಆರೋಪಿಗಳನ್ನಾಗಿ ಮಾಡಿ 2015ರಲ್ಲಿ ಸಮನ್ಸ್ ಜಾರಿಗೊಳಿಸಿತ್ತು. ಆ ಸಮನ್ಸ್‌ಗೆ ಸುಪ್ರೀಂ ಕೋರ್ಟ್ ತಡೆ ನೀಡಿತ್ತು. ಈ ನಡುವೆ, ಪ್ರಕರಣದ ತನಿಖೆ ನಡೆಸಿದ್ದ ಸಿಬಿಐ, ಇತ್ತೀಚೆಗೆ ಸಾಕ್ಷ್ಯಾಧಾರಗಳ ಕೊರತೆಯಿಂದ ಮುಕ್ತಾಯದ ವರದಿ ಸಲ್ಲಿಸಿತ್ತು. 2024ರ ಡಿಸೆಂಬರ್‌ನಲ್ಲಿ ವಯೋಸಹಜ ಅನಾರೋಗ್ಯದಿಂದಾಗಿ ಮನಮೋಹನ್ ಸಿಂಗ್ ಅವರು ಸಾವನ್ನಪ್ಪಿದರು.

# ಉಕ್ರೇನ್ ಬಂದರಿನಲ್ಲಿ ಸಿಲುಕಿರುವ 13 ಭಾರತೀಯ ನಾವಿಕರು

**ನವದೆಹಲಿ, ಜು.29:** ಕಪ್ಪು ಸಮುದ್ರದಲ್ಲಿ ನಿರಂತರ ಡ್ರೋನ್ ಮತ್ತು ಕ್ಷಿಪಣಿ ದಾಳಿಗಳ ನಡುವೆ ಉಕ್ರೇನ್‌ನ ಚೋರ್ನೊಮೊರ್ಸ್ಕ್ ಬಂದರಿನಲ್ಲಿ ಸರಕು ಸಾಗಣೆ ಹಡಗಿನಲ್ಲಿ ಸಿಲುಕಿರುವ 13 ಭಾರತೀಯ ನಾವಿಕರ ಬಗ್ಗೆ ವರದಿಗಳು ಬಂದ ನಂತರ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದೆ ಎಂದು ಭಾರತ ಬುಧವಾರ ತಿಳಿಸಿದೆ.

"MV AMIR1ನ ಪರಿಸ್ಥಿತಿಯನ್ನು ಭಾರತೀಯ ನಾವಿಕರು ಹಡಗಿನಲ್ಲಿದ್ದಾರೆ ಎಂಬುದನ್ನು ಗಮನಕ್ಕೆ ತರಲಾಗಿದೆ. ಅವರ ಸುರಕ್ಷತೆಗೆ ಆದ್ಯತೆ ನೀಡುತ್ತೇವೆ ಮತ್ತು ಹಡಗಿನಲ್ಲಿರುವ ಎಲ್ಲಾ ಭಾರತೀಯರ ಸುರಕ್ಷತೆ ಮತ್ತು ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಸಂಬಂಧಪಟ್ಟ ಎಲ್ಲರೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇವೆ" ಎಂದು ರಾಯಭಾರ ಕಚೇರಿ ತಿಳಿಸಿದೆ.

13 ಭಾರತೀಯರು ಸೇರಿ 15 ಜನರ ಸಿಬ್ಬಂದಿ ಹೊತ್ತ ಹಡಗು ಅಪಾಯಕಾರಿ ಪರಿಸ್ಥಿತಿಯನ್ನು ಎದುರಿಸುತ್ತಿದೆ ಎಂದು ಫಾರ್ವರ್ಡ್ ಸೀಮೆನ್ಸ್ ಯೂನಿಯನ್ ಆಫ್ ಇಂಡಿಯಾ ತಿಳಿಸಿದೆ.

ಇದು ಹಡಗಿನ ತಕ್ಷಣದ ಸಮೀಪದಲ್ಲಿ ಪದೇ ಪದೇ ಡ್ರೋನ್ ಮತ್ತು ಕ್ಷಿಪಣಿ ದಾಳಿಗಳು ಸಂಭವಿಸುತ್ತಿವೆ ಎಂದು ಹೇಳಿದೆ. "ಸಿಬ್ಬಂದಿ ಯಾವುದೇ ಕ್ಷಣದಲ್ಲಿ ನೇರ ಹೊಡೆತದ ಭಯದಲ್ಲಿ ಬದುಕುತ್ತಿದ್ದಾರೆ" ಎಂದು ಒಕ್ಕೂಟವು ಎಕ್ಸ್‌ನಲ್ಲಿ ಪೋಸ್ಟ್‌ನಲ್ಲಿ ತಿಳಿಸಿದೆ, ಭಾರತೀಯ ಅಧಿಕಾರಿಗಳು, ಹಡಗು ಮಾಲೀಕರು ಮತ್ತು ಹಡಗಿನ ಧ್ವಜ ರಾಜ್ಯವು ಸಿಬ್ಬಂದಿಯ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಅವರನ್ನು ತ್ವರಿತವಾಗಿ ಸ್ವದೇಶಕ್ಕೆ ಕಳುಹಿಸಲು ವ್ಯವಸ್ಥೆ ಮಾಡುವಂತೆ ಒತ್ತಾಯಿಸಿದೆ. ಕಪ್ಪು ಸಮುದ್ರದಲ್ಲಿ ಭಾರತೀಯ ನಾವಿಕರು ಒಳಗೊಂಡ ಮತ್ತೊಂದು ಘಟನೆಯ ಕೆಲವು ದಿನಗಳ ನಂತರ ಈ ಬೆಳವಣಿಗೆ ಸಂಭವಿಸಿದೆ.

ಜು.25ರಂದು, ಪಲಾವ್ ಧ್ವಜವನ್ನು ಹೊಂದಿರುವ ಸರಕು ಹಡಗು AGN RAGNAR ಡ್ಯಾನ್ಯೂಬ್ ನದಿಯ ಬೈಸ್ಟ್ರೆ ಮೌತ್ನಿಂದ ಕಪ್ಪು ಸಮುದ್ರಕ್ಕೆ ನಿರ್ಗಮಿಸುವಾಗ ಮೂರು ಡ್ರೋನ್‌ಗಳು ಡಿಕ್ಕಿ ಹೊಡೆದವು ಎಂದು ವರದಿಯಾಗಿದೆ. ಸಂಘರ್ಷ ಪೀಡಿತ ಪ್ರದೇಶದಲ್ಲಿ ಡ್ರೋನ್‌ಗಳು ಮತ್ತು ಕ್ಷಿಪಣಿಗಳನ್ನು ಒಳಗೊಂಡ ದಾಳಿಗಳು ಹೆಚ್ಚಾಗಿದೆ ಎಂದು ಭಾರತವು ತನ್ನ ನಾವಿಕರು ಮತ್ತು ವಾಣಿಜ್ಯ ಹಡಗು ನಿರ್ವಾಹಕರಿಗೆ ಕಪ್ಪು ಸಮುದ್ರದಲ್ಲಿ ಹೆಚ್ಚಿನ ಭದ್ರತಾ ಅಪಾಯಗಳ ಬಗ್ಗೆ ಎಚ್ಚರಿಕೆ ನೀಡಿದೆ.

ಕಪ್ಪು ಸಮುದ್ರದಲ್ಲಿ ಕಾರ್ಯನಿರ್ವಹಿಸುವ ಅಥವಾ ಅದರ ಮೂಲಕ ಸಾಗುವ ವಾಣಿಜ್ಯ ಹಡಗುಗಳಲ್ಲಿ ಕೆಲಸ ಮಾಡುವ ಭಾರತೀಯ ಪ್ರಜೆಗಳು ನಿಯೋಜನೆಗಳನ್ನು ಸ್ವೀಕರಿಸುವ ಮೊದಲು ಭದ್ರತಾ ಪರಿಸ್ಥಿತಿಗಳನ್ನು "ಎಚ್ಚರಿಕೆಯಿಂದ ನಿರ್ಣಯಿಸಲು" ವಿದೇಶಾಂಗ ವ್ಯವಹಾರಗಳ ಸಚಿವಾಲಯ ಭಾನುವಾರ ಸಲಹೆ ನೀಡಿದೆ. ನಡೆಯುತ್ತಿರುವ ರಷ್ಯಾ–ಉಕ್ರೇನ್ ಸರಣಿ ದಾಳಿಗಳ ಮಧ್ಯೆ ಈ ಸಲಹೆ ಬಂದಿದೆ.

# ನೀಟ್ ಪ್ರತಿಭಟನೆ ವೇಳೆ ಪೆಲೆಟ್ ಗನ್ ಬಳಕೆಗೆ ಅನುಮತಿ ಇತ್ತು: ಸಿಆರ್‌ಪಿಎಫ್

**ನವದೆಹಲಿ, ಜು.29:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧ ಜುಲೈ 20ರಂದು ನಡೆದ ಪ್ರತಿಭಟನೆಯಲ್ಲಿ ಕೈಗೊಂಡ ಪೊಲೀಸ್ ಕ್ರಮದ ವೇಳೆ ಎಲ್ಲಾ ಕಾರ್ಯಾಚರಣೆ ವಿಧಾನಗಳನ್ನು ಪಾಲಿಸಲಾಗಿತ್ತು ಹಾಗೂ ಪ್ರತಿಭಟನಾಕಾರರ ವಿರುದ್ಧ ?ಮಾರಕವಲ್ಲದ? ಪೆಲೆಟ್ ಗನ್ ಬಳಕೆಯೂ ಅಧಿಕಾರಿಗಳ ಅನುಮತಿಯೊಂದಿಗೆ ನಡೆದಿತ್ತು ಎಂದು ಸಿಆರ್ ಪಿಎಫ್ ಪರಿಶೀಲನಾ ವರದಿ ತಿಳಿಸಿದೆ.

ಗಲಭೆ ನಿಯಂತ್ರಣಕ್ಕೆ ನಿಯೋಜಿಸಲಾಗಿದ್ದ ಸಿಆರ್ ಪಿಎಫ್‌ನ ರ್ಯಾಪಿಡ್ ಆಕ್ಷನ್ ಫೋರ್ಸ್ ಕಾರ್ಯಾಚರಣೆಯನ್ನು ಪರಿಶೀಲಿಸಿದಾಗ, ಬಲಪ್ರಯೋಗದ ನಿಗದಿತ ಕ್ರಮವನ್ನು ಅನುಸರಿಸಲಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಮತ್ತೊಂದೆಡೆ, ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಾವು ಪೆಲೆಟ್ ಗನ್ ಬಳಕೆಗೆ ಅನುಮತಿ ನೀಡಿಲ್ಲ ಹಾಗೂ ಆ ಸಂದರ್ಭದಲ್ಲಿ ಸ್ಥಳದಲ್ಲಿಯೂ ಇರಲಿಲ್ಲ ಎಂದು ಹೇಳಿದ್ದಾರೆ. ಇದು ಸಿಆರ್‌ಪಿಎಫ್ ವರದಿ ಮತ್ತು ದೆಹಲಿ ಪೊಲೀಸರ ಹೇಳಿಕೆಗಳ ನಡುವೆ ಸಂಬಂಧವೇ ಇಲ್ಲದಿರುವುದನ್ನು ತೋರಿಸುತ್ತದೆ ಎಂದು ವರದಿಯಾಗಿದೆ.

ಅಂದರೆ, ಮೊದಲು ಸಾರ್ವಜನಿಕರಿಗೆ ಚದುರಿಹೋಗುವಂತೆ ಘೋಷಣೆ ಮಾಡುವುದು, ಬಳಿಕ ಅಶ್ರುವಾಯು ಸಿಡಿಸುವುದು ಹಾಗೂ ಲಾಠಿಚಾರ್ಜ್ ನಡೆಸುವುದು ಸೇರಿದಂತೆ ಕಡಿಮೆ ಮಟ್ಟದ ಕ್ರಮಗಳನ್ನು ಕೈಗೊಂಡ ಬಳಿಕವೂ ಪರಿಸ್ಥಿತಿ ನಿಯಂತ್ರಣಕ್ಕೆ ಬಾರದ ಹಿನ್ನೆಲೆಯಲ್ಲಿ ಮಾತ್ರ ಪಂಪ್ ಆಕ್ಷನ್ ಗನ್ ಬಳಸಲಾಗಿದೆ ಎಂದು ವರದಿ ಹೇಳಿದೆ. ಈ ಘಟನೆಯಲ್ಲಿ ಸುಮಾರು 3ರಿಂದ 5 ಪ್ರತಿಭಟನಾಕಾರರು ಲೋಹದ ಪೆಲೆಟ್‌ಗಳಿಂದ ಗಾಯಗೊಂಡಿದ್ದು, ಮತ್ತೊಂದೆಡೆ 47 ಮಂದಿ ಆರ್ ಎಎಫ್ ಸಿಬ್ಬಂದಿ ಗಾಯಗೊಂಡಿದ್ದಾರೆ. ಇವರಲ್ಲಿ ಆರು ಮಂದಿಗೆ ತಲೆಗೆ ಗಾಯವಾಗಿದೆ ಎಂದು ಮೂಲಗಳು ತಿಳಿಸಿವೆ.

ಈ ಕುರಿತು ಪ್ರತಿಕ್ರಿಯಿಸಿದ ಸಿಆರ್‌ಪಿಎಫ್ ಮಹಾನಿರ್ದೇಶಕ ಜಿ.ಪಿ. ಸಿಂಗ್, ಪ್ರಕರಣವು ಪ್ರಸ್ತುತ ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆಯಲ್ಲಿರುವುದರಿಂದ ಈ ಸಂಬಂಧದ ಎಲ್ಲ ಮಾಹಿತಿ ಮತ್ತು ಪಡೆಯ ನಿಲುವನ್ನು ನ್ಯಾಯಾಲಯದ ಮುಂದೆ ಮಂಡಿಸಲಾಗುವುದು ಎಂದು ಹೇಳಿದ್ದಾರೆ. ಆರ್‌ಎಎಫ್ ಮೂಲಗಳ ಪ್ರಕಾರ, ಪ್ರತಿಭಟನೆ ನಡೆದ ಸ್ಥಳದಲ್ಲಿ ಬಲಪ್ರಯೋಗ ಸೇರಿದಂತೆ ಎಲ್ಲ ಕ್ರಮಗಳಿಗೂ ದೆಹಲಿ ಪೊಲೀಸರ ಅನುಮತಿ ಪಡೆಯಲಾಗಿತ್ತು. ಪ್ರತಿಭಟನಾ ಸ್ಥಳದ ಉಸ್ತುವಾರಿ ನೋಡುತ್ತಿದ್ದ ಡಿಸಿಪಿ ಅಥವಾ ಎಸಿಪಿ ಲಿಖಿತ ಆದೇಶದ ಮೇರೆಗೆ ಮಾತ್ರ ಪೆಲೆಟ್ ಗನ್ ಬಳಕೆಗೆ ಅನುಮತಿ ನೀಡಲಾಗಿತ್ತು. ಯಾವುದೇ ಮೌಖಿಕ ಆದೇಶದ ಆಧಾರದ ಮೇಲೆ ಈ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಪ್ರತಿಭಟನೆಯಲ್ಲಿ ಕೆಲವು ಪ್ರಚೋದಿತ ವ್ಯಕ್ತಿಗಳು ದೆಹಲಿ ಪೊಲೀಸರು ಮತ್ತು ಆರ್‌ಎಎಫ್ ಸಿಬ್ಬಂದಿ ಮೇಲೆ ಕಲ್ಲು ಹಾಗೂ ಕೆಲವೆಡೆ ಕಬ್ಬಿಣದ ರಾಡ್‌ಗಳಿಂದ ದಾಳಿ ನಡೆಸಿದ್ದರು. ಈ ಹಿನ್ನೆಲೆಯಲ್ಲಿ ಪರಿಸ್ಥಿತಿಯನ್ನು ನಿಯಂತ್ರಿಸಲು ಕ್ರಮೇಣ ಬಲಪ್ರಯೋಗ ಮಾಡಬೇಕಾಯಿತು ಎಂದು ವರದಿ ಹೇಳಿದೆ.

ಭಾರತೀಯ ನಾಗರಿಕ ಸುರಕ್ಷತಾ ಸಂಹಿತೆ ಪ್ರಕಾರ, ಕಾನೂನುಬಾಹಿರ ಸಭೆಯನ್ನು ಚದುರಿಸಲು ಅಗತ್ಯವಿದ್ದರೆ ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್ ನಾಗರಿಕ ಬಲವನ್ನು ಬಳಸಲು ಆದೇಶ ನೀಡಬಹುದು. ದೆಹಲಿಯಲ್ಲಿ ಈ ಅಧಿಕಾರ ಪೊಲೀಸ್ ಆಯುಕ್ತರಿಗೆ ಸೇರಿದ್ದು, ಅದನ್ನು ಸಹಾಯಕ ಪೊಲೀಸ್ ಆಯುಕ್ತರ ಮಟ್ಟದ ಅಧಿಕಾರಿಗಳಿಗೂ ನಿಯೋಜಿಸಬಹುದಾಗಿದೆ.

2016ರಲ್ಲಿ ಜಮ್ಮು ಮತ್ತು ಕಾಶ್ಮೀರ ಹೈಕೋರ್ಟ್ ಪೆಲೆಟ್ ಗನ್ ಬಳಕೆಯನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ವೇಳೆ, ಗಲಭೆ ಮತ್ತು ಹಿಂಸಾತ್ಮಕ ಪರಿಸ್ಥಿತಿಯಲ್ಲಿ ಬಲಪ್ರಯೋಗ ಅನಿವಾರ್ಯವಾಗಬಹುದು. ಯಾವ ಸಂದರ್ಭದಲ್ಲಿ ಯಾವ ರೀತಿಯ ಬಲವನ್ನು ಬಳಸಬೇಕು ಎಂಬುದನ್ನು ಸ್ಥಳದಲ್ಲಿರುವ ಅಧಿಕಾರಿಗಳು ನಿರ್ಧರಿಸಬೇಕಾಗುತ್ತದೆ. ನಿರ್ದಿಷ್ಟ ಘಟನೆಯಲ್ಲಿ ಬಲಪ್ರಯೋಗ ಅತಿಯಾಗಿದೆಯೇ ಎಂಬುದನ್ನು ಸೂಕ್ತ ಪ್ರಾಧಿಕಾರದ ನಿರ್ಧಾರವಿಲ್ಲದೆ ನ್ಯಾಯಾಲಯ ಹೇಳಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿತ್ತು. ಈ ಆದೇಶವನ್ನು ಪ್ರಶ್ನಿಸಿ ಸಲ್ಲಿಸಿದ್ದ ವಿಶೇಷ ಅನುಮತಿ ಅರ್ಜಿಯನ್ನು ಬಳಿಕ ಸುಪ್ರೀಂ ಕೋರ್ಟ್ ವಜಾಗೊಳಿಸಿತ್ತು. ಅಲ್ಲದೆ, ಯಾವುದೇ ಸಂಸ್ಥೆ ಪೆಲೆಟ್ ಗನ್ ಬಳಸಿದ್ದರೆ, ಅದನ್ನು ನ್ಯಾಯಾಲಯ ಸಂಪೂರ್ಣವಾಗಿ ನಿಷೇಧಿಸಿಲ್ಲ, ಹಿಂದಿನ ಆದೇಶಗಳ ಮೂಲಕ ಅದರ ಬಳಕೆಯನ್ನು ಮಾನ್ಯಗೊಳಿಸಲಾಗಿದೆ ಎಂದು ಸುಪ್ರೀಂ ಕೋರ್ಟ್ ಹೇಳಿತ್ತು.

## ಅನ್ನ–ನೀರು ಕೊಟ್ಟಿದ್ದು ಅಪರಾಧವೇ: ಸುಪ್ರೀಂ ಕದ ತಟ್ಟಿದ ಜುನೈದ್

**ನವದೆಹಲಿ, ಜು. 29:** ದೆಹಲಿಯಲ್ಲಿ ಇತ್ತೀಚೆಗೆ ನಡೆದ ಸಿಜೆಪಿ (ಸಿಜೆಪಿ) ಪ್ರತಿಭಟನೆಯಲ್ಲಿ ಸಾವಿರಾರು ಮಂದಿಗೆ ಅನ್ನ–ನೀರು ನೀಡಿ ಮಾನವೀಯತೆ ಮೆರೆದಿದ್ದ ಆಹಾರ ವಿತರಣಾ ಸ್ವಯಂಸೇವಕ ಜುನೈದ್ ಮಲಿಕ್, ಇದೀಗ ದೆಹಲಿ ಪೊಲೀಸರ ಅತಿರೇಕದ ವರ್ತನೆ ಹಾಗೂ ಕಿರುಕುಳದ ವಿರುದ್ಧ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ. ತಮ್ಮನ್ನು ಯಾವುದೇ ಕಾರಣವಿಲ್ಲದೆ ಅಕ್ರಮವಾಗಿ ಬಂಧಿಸಿ ಬೆದರಿಕೆ ಹಾಕಿದ್ದಲ್ಲದೆ, ತಮ್ಮ ಕುಟುಂಬದವರ ಮೇಲೂ ಪೊಲೀಸರು ದೌರ್ಜನ್ಯ ಎಸಗಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಸಮಾಜ ಸೇವಕರಾಗಿರುವ ಜುನೈದ್, 2026ರ ಜೂನ್ 20ರಿಂದ ಸತತ 35 ದಿನಗಳ ಕಾಲ ದೆಹಲಿಯಲ್ಲಿ ನಡೆದ ಕಾಕ್ರೋಚ್ ಜನತಾ ಪಾರ್ಟಿ ಪ್ರತಿಭಟನೆಯಲ್ಲಿ ಸ್ವಯಂಸೇವಕರಾಗಿ ಕೆಲಸ ಮಾಡಿದ್ದರು. ಯಾವುದೇ ನಾಯಕತ್ವ ವಹಿಸಿರಲಿಲ್ಲ. ಆದರೆ, ಅವರ ಸಮಾಜ ಸೇವೆಗೆ ಮಾಧ್ಯಮಗಳಲ್ಲಿ ವ್ಯಾಪಕ ಪ್ರಚಾರ ಸಿಕ್ಕಿದ್ದೇ ಪೊಲೀಸರ ಕೆಂಗಣ್ಣಿಗೆ ಗುರಿಯಾಗಲು ಕಾರಣವಾಯಿತು ಎಂದು ಅರ್ಜಿಯಲ್ಲಿ ವಿವರಿಸಲಾಗಿದೆ. ಜುಲೈ 24ರ ಮಧ್ಯರಾತ್ರಿ, ಆರ್‌ಎಂಎಲ್ ಆಸ್ಪತ್ರೆಯಲ್ಲಿ ರೇಬಿಸ್ ನಿರೋಧಕ ಚುಚ್ಚುಮದ್ದು ಪಡೆದು ಹಿಂದಿರುಗುತ್ತಿದ್ದಾಗ ದೆಹಲಿ ಪೊಲೀಸರು ಅವರನ್ನು ಏಕಾಏಕಿ ವಶಕ್ಕೆ ಪಡೆದರು. 5 ರಿಂದ 6 ಗಂಟೆಗಳ ಕಾಲ ವಾಹನದಲ್ಲೇ ಕೂಡಿಹಾಕಿ, ಬಲವಂತವಾಗಿ ಮೊಬೈಲ್ ಅನ್ಲಾಕ್ ಮಾಡಿಸಿ ಪರಿಶೀಲಿಸಿದ್ದಾರೆ. ಮರುದಿನ (ಜುಲೈ 25) ಬೆಳಗ್ಗೆ ವಿಚಾರಣಾ ಕೊಠಡಿಯಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳು, ಆಹಾರ ವಿತರಣೆಗೆ ಹಣ ಎಲ್ಲಿಂದ ಬಂತು ಎಂದು ಪ್ರಶ್ನಿಸಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಪ್ರತಿಭಟನೆಗೆ ಯಾರು ಹಣ ನೀಡುತ್ತಿದ್ದಾರೆಂದು ಬಾಯ್ಬಿಡದಿದ್ದರೆ ರಾಷ್ಟ್ರೀಯ ಭದ್ರತಾ ಕಾಯ್ದೆಯಡಿ ಪ್ರಕರಣ ದಾಖಲಿಸುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ಜುನೈದ್ ಆರೋಪಿಸಿದ್ದಾರೆ.

# ತಮಿಳುನಾಡಿನಿಂದ ಎಂ ಸ್ಯಾಂಡ್, ಜಲ್ಲಿಕಲ್ಲು ಸಾಗಣೆಗೆ 3 ತಿಂಗಳು ನಿರ್ಬಂಧ

**ಕಾವೇರಿ ನೀರು ಹಂಚಿಕೆ ವಿವಾದದ ನಡುವೆಯೇ ಕರ್ನಾಟಕ, ಆಂಧ್ರ, ಕೇರಳ ರಾಜ್ಯಗಳಿಗೆ ಆಘಾತ ನೀಡಿದ ಸಿಎಂ ವಿಜಯ್**

**ಪುದುಚೇರಿ, ಕಾರೈಕಲ್‌ಗೆ ಅನ್ವಯಿಸಲ್ಲ ಎಂದು ಸರ್ಕಾರ ಸ್ಪಷ್ಟನೆ**

**ಚೆನ್ನೈ, ಜು.29:** ಕಾವೇರಿ ನೀರು ಹಂಚಿಕೆ ವಿವಾದದ ನಡುವೆಯೇ ತಮಿಳುನಾಡು ಸರ್ಕಾರ ನೆರೆಯ ರಾಜ್ಯಗಳಿಗೆ ಇನ್ನೊಂದು ಆಘಾತ ನೀಡಿದೆ. ತಮಿಳುನಾಡು ಮುಖ್ಯಮಂತ್ರಿ ವಿಜಯ್ ಅವರು ತಮ್ಮ ರಾಜ್ಯದಿಂದ ಹೊರಕ್ಕೆ ರವಾನೆಯಾಗುವ ಪ್ರಮುಖ ನಿರ್ಮಾಣ ಸಾಮಗ್ರಿಗಳ ಸಾಗಣೆಯ ಮೇಲೆ ಕಠಿಣ ನಿರ್ಬಂಧ ವಿಧಿಸಿ ಆದೇಶ ಹೊರಡಿಸಿದ್ದಾರೆ.

ಕಟ್ಟಡ ನಿರ್ಮಾಣಕ್ಕೆ ಅತ್ಯಂತ ಅಗತ್ಯವಾಗಿರುವ ಕಲ್ಲು, ಎಂ–ಸ್ಯಾಂಡ್ ಮತ್ತು ಜಲ್ಲಿ ಕಲ್ಲುಗಳನ್ನ ನೆರೆಯ ರಾಜ್ಯಗಳಿಗೆ ಸಾಗಿಸುವುದನ್ನ ಮೂರು ತಿಂಗಳ ಕಾಲ ಸಂಪೂರ್ಣವಾಗಿ ನಿಷೇಧಿಸಲಾಗಿದೆ. ತಮಿಳುನಾಡು ಸರ್ಕಾರದ ಈ ನಿರ್ಧಾರದಿಂದ ಕರ್ನಾಟಕ, ಆಂಧ್ರಪ್ರದೇಶ ಮತ್ತು ಕೇರಳ ರಾಜ್ಯಗಳ ಮೇಲೆ ತೀವ್ರ ಪರಿಣಾಮ ಬೀರುವ ಸಾಧ್ಯತೆಯಿದೆ. ಆದರೆ, ಈ ನಿಷೇಧದಿಂದ ನೆರೆಯ ಪುದುಚ್ಚೇರಿ ಮತ್ತು ಕಾರೈಕಾಲ್ ಪ್ರದೇಶಗಳಿಗೆ ಈ ವಿಶೇಷ ವಿನಾಯಿತಿ ನೀಡಲಾಗಿದೆ ಎಂದು ಸರ್ಕಾರ ಸ್ಪಷ್ಟಪಡಿಸಿದೆ.

ರಾಜ್ಯದಲ್ಲಿ ನಗರೀಕರಣ ಹೆಚ್ಚುತ್ತಿದ್ದು, ಬೃಹತ್ ಮೂಲಸೌಕರ್ಯ ಯೋಜನೆಗಳು ಮತ್ತು ವಸತಿಗಳ ನಿರ್ಮಾಣ ಕಾರ್ಯಗಳು ಭರದಿಂದ ಸಾಗುತ್ತಿವೆ. ಈ ಹಿನ್ನೆಲೆಯಲ್ಲಿ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಬೇಡಿಕೆಗೆ ತಕ್ಕಂತೆ ಸ್ಥಳೀಯವಾಗಿ ತಮಿಳುನಾಡಿನ ಕ್ವಾರಿಗಳಿಂದ ಕಲ್ಲು ಮತ್ತು ಮರಳಿನ ಉತ್ಪನ್ನಗಳು ಲಭ್ಯವಾಗುತ್ತಿಲ್ಲ ಎಂದು ಸರ್ಕಾರ ತಿಳಿಸಿದೆ.

ರಾಜ್ಯದ ಕ್ವಾರಿಗಳಿಂದ ನೆರೆಯ ರಾಜ್ಯಗಳಿಗೆ ಭಾರಿ ಪ್ರಮಾಣದಲ್ಲಿ ನಿರ್ಮಾಣ ಸಾಮಗ್ರಿಗಳು ರವಾನೆಯಾಗುತ್ತಿರುವುದರಿಂದ, ಸ್ಥಳೀಯವಾಗಿ ಕೃತಕ ಅಭಾವ ಸೃಷ್ಟಿಯಾಗಿದೆ. ಇದರಿಂದಾಗಿ ರಾಜ್ಯದೊಳಗೆ ನಿರ್ಮಾಣ ಸಾಮಗ್ರಿಗಳ ಬೆಲೆಗಳು ಗಗನಕ್ಕೇರಿವೆ ಎನ್ನಲಾಗಿದೆ. ಹೀಗಾಗಿ, ತಮಿಳುನಾಡಿನ ಸ್ಥಳೀಯ ಅಭಿವೃದ್ಧಿ ಯೋಜನೆಗಳು ಮತ್ತು ಸಾರ್ವಜನಿಕರ ಕಾಮಗಾರಿಗಳು ಸ್ಥಗಿತಗೊಳ್ಳದಂತೆ ನೋಡಿಕೊಳ್ಳಲು ಈ ತಾತ್ಕಾಲಿಕ ಹಾಗೂ ಕಠಿಣ ಕ್ರಮ ಕೈಗೊಳ್ಳಲಾಗಿದೆ ಎಂದು ಅಧಿಕೃತ ಮೂಲಗಳು ಈ ನಿಷೇಧವನ್ನು ಸಮರ್ಥಿಸಿಕೊಂಡಿವೆ.

**ಆದೇಶ ಉಲ್ಲಂಘಿಸಿದರೆ ವಾಹನ ಜಪ್ತಿ ಜತೆಗೆ ಭಾರಿ ದಂಡದ ಎಚ್ಚರಿಕೆ:** ನಿಷೇಧಾಜ್ಞೆಗಳು ಕಟ್ಟುನಿಟ್ಟಾಗಿ ಜಾರಿಗೆ ಬರುವಂತೆ ನೋಡಿಕೊಳ್ಳಲು ಗಡಿ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳಿಗೆ ತಮಿಳುನಾಡು ಸರ್ಕಾರ ಸ್ಪಷ್ಟ ಆದೇಶ ನೀಡಿದೆ. ಗಣಿಗಾರಿಕೆ ಮತ್ತು ಸಾರಿಗೆ ಇಲಾಖೆ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಗಡಿಭಾಗದ ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆಯನ್ನ ತೀವ್ರಗೊಳಿಸುವಂತೆ ಸೂಚಿಸಲಾಗಿದೆ.

ಕಾನೂನುಬಾಹಿರವಾಗಿ ಗಡಿ ದಾಟಿಸಿ ಕಲ್ಲು, ಜಲ್ಲಿ ಅಥವಾ ಎಂ–ಸ್ಯಾಂಡ್ ಸಾಗಿಸಲು ಯತ್ನಿಸಿದರೆ 'ತಮಿಳುನಾಡು ಅಕ್ರಮ ಗಣಿಗಾರಿಕೆ ಸಾರಿಗೆ ನಿರೋಧಕ ಕಾಯ್ದೆ'ಯಡಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸರ್ಕಾರ ಎಚ್ಚರಿಸಿದೆ. ನಿಯಮ ಉಲ್ಲಂಘಿಸುವ ವಾಹನಗಳನ್ನು ಜಪ್ತಿ ಮಾಡುವುದರ ಜೊತೆಗೆ ಭಾರಿ ಪ್ರಮಾಣದ ದಂಡ ವಿಧಿಸಲಾಗುವುದು ಎಂದು ಖಡಕ್ ಎಚ್ಚರಿಕೆ ನೀಡಲಾಗಿದೆ.

## ರಿಯಲ್ ಎಸ್ಟೇಟ್, ಅಭಿವೃದ್ಧಿ ಯೋಜನೆಗಳಿಗೆ ಪೆಟ್ಟು

**ತಮಿಳುನಾಡಿನ ಈ ನಿರ್ಧಾರದಿಂದ ಕರ್ನಾಟಕದ, ಅದರಲ್ಲೂ ವಿಶೇಷವಾಗಿ ರಾಜಧಾನಿ ಬೆಂಗಳೂರಿನ ರಿಯಲ್ ಎಸ್ಟೇಟ್ ಮತ್ತು ಮೂಲಸೌಕರ್ಯ ವಲಯಕ್ಕೆ ದೊಡ್ಡ ಪೆಟ್ಟು ಬೀಳುವ ಆತಂಕ ಎದುರಾಗಿದೆ. ಗಡಿಭಾಗದ ಜಿಲ್ಲೆಗಳಾದ ಹೊಸೂರು ಹಾಗೂ ಕೃಷ್ಣಗಿರಿ ಭಾಗದಿಂದ ಬೆಂಗಳೂರಿನ ವಿವಿಧ ನಿರ್ಮಾಣ ಕಾಮಗಾರಿಗಳಿಗೆ ಪ್ರತಿನಿತ್ಯ ಸಾವಿರಾರು ಲಾರಿಗಳಲ್ಲಿ ಜಲ್ಲಿ, ಕಲ್ಲು ಮತ್ತು ಎಂ–ಸ್ಯಾಂಡ್ ಪೂರೈಕೆಯಾಗುತ್ತಿತ್ತು. ಇದೀಗ ಏಕಾಏಕಿ ಸಾಗಣೆ ನಿಂತುಹೋಗಿರುವುದರಿಂದ ನಗರದಲ್ಲಿ ನಿರ್ಮಾಣ ವೆಚ್ಚ ಹೆಚ್ಚಾಗುವ ಹಾಗೂ ಕಾಮಗಾರಿಗಳು ವಿಳಂಬವಾಗುವ ಸಾಧ್ಯತೆಯಿದೆ. ಇತ್ತ ಕೇರಳದ ಸಿಎಂ ಕೂಡ ಆತಂಕ ವ್ಯಕ್ತಪಡಿಸಿದ್ದಾರೆ. ಕನ್ಯಾಕುಮಾರಿ, ತಿರುನೆಲ್ವೇಲಿ ಮತ್ತು ತೆಂಕಾಸಿ ಜಿಲ್ಲೆಗಳಿಂದ ಕೇರಳದ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳು, ವಿಳಿಂಜಂ ಬಂದರು ಮತ್ತು ವಲ್ಲಾರ್‌ಪಾಡಂ ಯೋಜನೆಗಳಿಗೆ ಕಚ್ಚಾ ಸಾಮಗ್ರಿಗಳು ಪೂರೈಕೆಯಾಗುತ್ತಿದ್ದವು. ರಾಷ್ಟ್ರೀಯ ಯೋಜನೆಗಳ ಹಿತದೃಷ್ಟಿಯಿಂದ ತಮ್ಮ ರಾಜ್ಯಕ್ಕೆ ಬರುವ ಸಾಮಗ್ರಿಗಳಿಗೆ ವಿಶೇಷ ವಿನಾಯಿತಿ ನೀಡುವಂತೆ ಕೋರಿ ಕೇರಳ ಸಿಎಂ, ತಮಿಳುನಾಡು ಮುಖ್ಯಮಂತ್ರಿ ವಿಜಯ್‌ಗೆ ಪತ್ರ ಬರೆದಿದ್ದಾರೆ.**

# ಬಿಎಸ್‌ಎಲ್‌ಎಚ್‌ಎಸ್ ಶಾಲೆಯಲ್ಲಿ 2026ನೇ ಸಾಲಿನ ವಿದ್ಯಾರ್ಥಿ ನಾಯಕತ್ವ ಪದಗ್ರಹಣ

## ಇಂದಿನ ನಾಯಕರು ನಾಳಿನ ರಾಷ್ಟ್ರ ನಿರ್ಮಾಪಕರು: ಕ್ಯಾಪ್ಟನ್ ಸಂತೋಷ್ ಶೆಟ್ಟಿ

**ಮುಂಬಯಿ, ಜು.29:** ಬಂಟರ ಸಂಘದ ಬೋರಿವಲಿ ಶಿಕ್ಷಣ ಸಮಿತಿಯ ಅಧೀನದ ಬೋರಿವಲಿ ಶಿಕ್ಷಣ ಸಮಿತಿಯ ಬೊರಿವಲಿ ಐ.ಸಿ ಕಾಲೋನಿಯಲ್ಲಿನ ಬಂಟ್ಸ್ ಸಂಸ್ ಶಶಿಕಿರಣ್ ಶೆಟ್ಟಿ ಎಜ್ಯುಕೇಶನ್ ಇನ್ಸ್ಟಿಟ್ಯೂಶನ್ಸ್ ಶಿಕ್ಷಣ ಸಂಕೀರ್ಣದಲ್ಲಿ 'ಬಂಟ್ಸ್ ಸಂಘ ಲೀಲಾವತಿ ಹೆಗ್ಡೆ ಶಾಲೆ (ಬಿಎಸ್‌ಎಲ್‌ಎಚ್‌ಎಸ್) ವಿದ್ಯಾಲಯದಲ್ಲಿ 2026ನೇ ಸಾಲಿನ ವಿದ್ಯಾರ್ಥಿ ನಾಯಕತ್ವ ಪದಗ್ರಹಣ ಕಾರ್ಯಕ್ರಮವು ಅತ್ಯಂತ ಸಂಭ್ರಮ ಹಾಗೂ ಶಿಸ್ತುಬದ್ಧವಾಗಿ ನೇರವೇರಿತು. ಈ ಸಂದರ್ಭದಲ್ಲಿ ಪ್ರಧಾನ ಬಾಲಕ ನಾಯಕ, ಪ್ರಧಾನ ಬಾಲಕಿ ನಾಯಕಿ, ಸದನ ನಾಯಕರು (ಹೆಡ್ ಬಾಯ್, ಹೆಡ್ ಗರ್ಲ್, ಹೌಸ್ ಕ್ಯಾಪ್ಟನ್ಸ್) ಮತ್ತು ವಿದ್ಯಾರ್ಥಿ ಪರಿಷತ್ ಸದಸ್ಯರು ಅಧಿಕೃತವಾಗಿ ಪದಗ್ರಹಣ ನಡೆಸಲಾಗಿದ್ದು ನಾಯಕತ್ವದ ಜವಾಬ್ದಾರಿಯನ್ನು ಸ್ವೀಕರಿಸಿದರು.



ಬಂಟರ ಸಂಘ ಮುಂಬಯಿ ಅಧ್ಯಕ್ಷ ಪ್ರವೀಣ್ ಭೋಜ ಶೆಟ್ಟಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದು, ಜವಾಬ್ದಾರಿಯುತ ನಾಯಕತ್ವ, ಉಜ್ವಲ ಭವಿಷ್ಯದ ಮುನ್ನಡೆಗೆ ವಿದ್ಯಾಲಯಗಳೇ ಪ್ರಧಾನನವಾದುದು. ಈ ಕಾಲಾವಧಿಯಲ್ಲಿನ ರೂಢಿಸಿಕೊಂಡ ಸಮರ್ಥ ನಾಯಕತ್ವವು ನಿಮ್ಮ ಸ್ವಜೀವನ ಮತ್ತು ಉತ್ತಮ ಸಮಾಜದ ನಿರ್ಮಾಣಕ್ಕೆ ನಾಂದಿಯಾಗಬಲ್ಲದು ಎಂದರು. ಮುಖ್ಯ ಅತಿಥಿಯಾಗಿ ಕಚ್ಚಾತೈಲ ಸಾಗಾಣಿಕೆ ಕ್ಷೇತ್ರದ ಮೆರೈನ್ ಕ್ಯಾಪ್ಟನ್ ಸಂತೋಷ್ ಶೆಟ್ಟಿ ಭಾಗವಹಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಪ್ರೇರಣಾದಾಯಕ ಸಂದೇಶ ನೀಡಿ ಇಂದಿನ ನಾಯಕರು ನಾಳಿನ ರಾಷ್ಟ್ರ ನಿರ್ಮಾಪಕರು ಆಗಿದ್ದಾರೆ. ವಿದ್ಯಾರ್ಥಿ ಜೀವನದ ಶಿಸ್ತು ಮತ್ತು ಸೇವಾ ಮನೋಭಾವವೇ ಯಶಸ್ವಿ ನಾಯಕತ್ವದ ಅಡಿಪಾಯವಾಗುವುದು. ಆದ್ದರಿಂದ ಮಕ್ಕಳು ವಿದ್ಯಾರ್ಥಿ ಬದುಕನ್ನು ಅರ್ಥಪೂರ್ಣವಾಗಿ ಅನುಭವಿಸಿ ಭವ್ಯ ಬದುಕನ್ನು ರೂಪಿಸಿಕೊಳ್ಳಿರಿ ಎಂದು ಸಲಹಿಸಿದರು.

ಈ ಸಂದರ್ಭದಲ್ಲಿ ಬಂಟರ ಸಂಘದ ಉಪಾಧ್ಯಕ್ಷ ಮಹೇಶ್ ಎಸ್.ಶೆಟ್ಟಿ, ಬೋರಿವಲಿ ಶಿಕ್ಷಣ ಸಮಿತಿಯ ಉಪಾಧ್ಯಕ್ಷ ನಿತ್ಯಾನಂದ ಹೆಗ್ಡೆ ನಡಿಬೆಟ್ಟು, ಕಾರ್ಯದರ್ಶಿ ಸಿಎ। ಜಗದೀಶ್ ಬಿ.ಶೆಟ್ಟಿ, ಕೋಶಾಧಿಕಾರಿ ಸಿಎ। ಆದಿತ್ಯ ಶೆಟ್ಟಿ, ಸಹ ಸಂಯೋಜಕ ಅಶೋಕ್ ಶೆಟ್ಟಿ, ಧನ ಸಂಗ್ರಹಣಾ ಸಮಿತಿ ಕಾರ್ಯಾಧ್ಯಕ್ಷ ಮುಂಡಪ್ಪ ಪಯ್ಯಡೆ, ಸಲಹಾ ಸಮಿತಿ ಕಾರ್ಯಾಧ್ಯಕ್ಷ ಡಾ। ಪಿ.ವಿ ಶೆಟ್ಟಿ, ಪ್ರಕಾಶ್ ಶೆಟ್ಟಿ, ಡಾ। ಸತೀಶ್ ಶೆಟ್ಟಿ, ಭಾಸ್ಕರ್ ಶೆಟ್ಟಿ ಕಾರ್ನಾಡ್, ಡಾ। ಹರಿಣಿ ಚೌಟ, ಶಾಲೆಯ ಪ್ರಾಂಶುಪಾಲೆ ಕವಿತಾ ಜಿ.ಹೆಗ್ಡೆ ಉಪಸ್ಥಿತರಿದ್ದು, ವಿದ್ಯಾರ್ಥಿಗಳಿಗೆ ನಾಯಕತ್ವ, ಜವಾಬ್ದಾರಿ ಮತ್ತು ಸಮಾಜಸೇವೆಯ ಮಹತ್ವವನ್ನು ತಿಳಿಸಿದರು. ಕಾರ್ಗಿಲ್ ವಿಜಯ ದಿವಸದ ಅಂಗವಾಗಿ ವಿದ್ಯಾರ್ಥಿಗಳು ದೇಶಭಕ್ತಿಯನ್ನು ಸಾರುವ ವಿಶೇಷ ನೃತ್ಯ ಪ್ರದರ್ಶನ ನೀಡಿದ್ದು, ಕಾರ್ಯಕ್ರಮಕ್ಕೆ

ರಾಷ್ಟ್ರಭಕ್ತಿಯ ಕಳೆ ತುಂಬಿತು. ತಮ್ಮ ಮಕ್ಕಳು ಜವಾಬ್ದಾರಿಯುತ ನಾಯಕತ್ವದತ್ತ ಮೊದಲ ಹೆಜ್ಜೆಯಿಡುವ ಈ ಮಹತ್ವದ ಕ್ಷಣವನ್ನು ಹೆಮ್ಮೆಯಿಂದ ವೀಕ್ಷಿಸಿದ ಪೋಷಕರ ಉಪಸ್ಥಿತಿಯಿಂದ ಕಾರ್ಯಕ್ರಮ ಮತ್ತಷ್ಟು ಅರ್ಥಪೂರ್ಣ ಹಾಗೂ ಸ್ಮರಣೀಯವಾಯಿತು.

ನಿತ್ಯಾನಂದ ಹೆಗ್ಡೆ ನಡಿಬೆಟ್ಟು ಸ್ವಾಗತಿಸಿ ಪ್ರಸ್ತಾವನೆಗೈದರು. ಸದನ ನಾಯಕರು ಕ್ರಮವಾಗಿ ಕಾರ್ಯಕ್ರಮ ನಿರೂಪಿಸಿದರು. ಕವಿತಾ ಜಿ.ಹೆಗ್ಡೆ ಧನ್ಯವಾದ ಸಲ್ಲಿಸಿದರು. ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮ ಸಮಾಪನಗೊಂಡಿತು.